ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

KB 12 YEARS 2013

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

# ಕನ್ನಡ ಭಾರತಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ನೊಂದವರ ನೈಜ ಕನ್ನಡಿ

ಸಂಪುಟ : 12 ಸಂಚಿಕೆ : 269
23–4–2025 ಬುಧವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 269

## ನಾಳೆಯಿಂದ ಧ್ಯಾನೋತ್ಸವ

**ದಾವಣಗೆರೆ:** ಹಾರ್ಟ್‌ಫುಲ್‌ನೆಸ್ ಇನ್‌ಸ್ಟಿಟ್ಯೂಟ್ ಮತ್ತು ರಾಮಚಂದ್ರ ಮಿಷನ್ ವತಿಯಿಂದ 'ಧ್ಯಾನೋತ್ಸವ' ಕಾರ್ಯಕ್ರಮವನ್ನು ಏ.24ರಿಂದ 26ರವರೆಗೆ ಬೆಳಿಗ್ಗೆ 6:30ರಿಂದ ನಗರದ ಕುಂದುವಾಡ ರಸ್ತೆಯಲ್ಲಿರುವ ಸಪ್ತಗಿರಿ ಶಾಲೆಯ ಹಿಂಭಾಗದಲ್ಲಿರುವ ಶ್ರೀ ಗಡಿಚೌಡಮ್ಮ ದೇವಸ್ಥಾನದಲ್ಲಿ ಹಮ್ಮಿಕೊಳ್ಳಲಾಗಿದ್ದು, ಹೆಚ್ಚಿನ ಮಾಹಿತಿಗೆ ಮೊ: 8123674899, 9980943565 ಸಂಪರ್ಕಿಸಬಹುದಾಗಿದೆ.

## ಎನ್ನೆಸ್ಸೆಸ್ ವಾರ್ಷಿಕ ವಿಶೇಷ ಶಿಬಿರ

**ದಾವಣಗೆರೆ:** ಶ್ರೀ ದೇವರಾಜ್ ಅರಸ್ ವಿದ್ಯಾಸಂಸ್ಥೆಯ ಎ.ಆರ್.ಎಂ. ಪ್ರಥಮ ದರ್ಜೆ ಕಾಲೇಜು ಹಾಗೂ ಸ್ನಾತ–ಕೋತ್ತರ ಕೇಂದ್ರದ ಎನ್.ಎಸ್.ಎಸ್. ವಾರ್ಷಿಕ ವಿಶೇಷ ಶಿಬಿರ–2025 ಘಟಕ 1, 2 ಮತ್ತು 3 ವಿಕಸಿತ ಭಾರತದೆಡೆಗೆ ಯುವ ಜನತೆ' ಕಾರ್ಯಕ್ರಮವನ್ನು ಏ.23ರಿಂದ 29ರವರೆಗೆ ತಾಲ್ಲೂಕಿನ ಕೋಡಿಹಳ್ಳಿಯಲ್ಲಿ ಹಮ್ಮಿಕೊಳ್ಳಲಾಗಿದ್ದು, ಪ್ರತಿದಿನ ಸಂಜೆ 6:30ಕ್ಕೆ ನಡೆಯುವ ಕಾರ್ಯಕ್ರಮದಲ್ಲಿ ವಿವಿಧ ಗಣ್ಯರು ಶಿಬಿರದಲ್ಲಿ ಪಾಲ್ಗೊಳ್ಳಲಿದ್ದಾರೆ ಎಂದು ಕಾಲೇಜಿನ ಪ್ರಾಂಶುಪಾಲ ಕಾಡಜ್ಜಿ ಶಿವಪ್ಪ ತಿಳಿಸಿದ್ದಾರೆ.

## ವಿಪ್ರ ವಟು ಶಿಕ್ಷಣ ಶಿಬಿರ

**ದಾವಣಗೆರೆ:** ವಿಪ್ರ ವಟು ಶಿಕ್ಷಣ ಸಮಿತಿ ಮತ್ತು ಬ್ರಾಹ್ಮಣ ಸಮಾಜ ಸೇವಾ ಸಂಘ ಇವರ ಸಂಯುಕ್ತಾಶ್ರಯದಲ್ಲಿ ವಿಪ್ರ ವಟು ಶಿಕ್ಷಣ ಶಿಬಿರವನ್ನು ಮೇ.9ರಿಂದ 18ರವರೆಗೆ ಬೆಳಿಗ್ಗೆ 7:30ರಿಂದ ಸಂಜೆ 5:30ರವರೆಗೆ ನಗರದ ಬ್ರಾಹ್ಮಣ ಸಮಾಜ ಸೇವಾ ಸಂಘದ ವಿದ್ಯಾರ್ಥಿ ನಿಲಯದಲ್ಲಿ ಹಮ್ಮಿಕೊಳ್ಳಲಾಗಿದ್ದು, ಆಸಕ್ತ ವಿದ್ಯಾರ್ಥಿಗಳು ನಿಲಯದ ಕಾರ್ಯಾಲಯಕ್ಕೆ ಭೇಟಿ ನೀಡಿ ಏ.30ರೊಳಗಾಗಿ ಅರ್ಜಿ ಸಲ್ಲಿಸುವಂತೆ ತಿಳಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಮೊ: 9844130834, 9844575983ಗೆ ಸಂಪರ್ಕಿಸಬಹುದೆಂದು ಸಂಘದ ಜಿಲ್ಲಾಧ್ಯಕ್ಷ ಡಾ.ಎಂ.ಸಿ. ಶಶಿಕಾಂತ್ ತಿಳಿಸಿದ್ದಾರೆ.

## ಮಂಡಗದ್ದೆ: ಹೊಸ ವಿದ್ಯುತ್ ಪ್ರಸರಣ ಮಾರ್ಗ ಚಾಲನೆ; ಎಚ್ಚರಿಕೆ

**ಶಿವಮೊಗ್ಗ :** ಶಿವಮೊಗ್ಗ ಜಿಲ್ಲೆ ತೀರ್ಥಹಳ್ಳಿ ತಾಲ್ಲೂಕಿನ ಮಂಡಗದ್ದೆ ಗ್ರಾಮದಲ್ಲಿ ಹೊಸದಾಗಿ ನಿರ್ಮಿಸುತ್ತಿರುವ 1ಥ10 ಎಂವಿಎ ಶಕ್ತಿ ಪರಿವರ್ತಕ ಹಾಗೂ ಉದ್ದೇಶಿತ 110 ಕೆವಿ ಲಿಲೋ ಮಾರ್ಗವನ್ನು ಈಗಿರುವ ಶಿವಮೊಗ್ಗ–ಸೌತ್ ಕೆನರಾ ಲೈನ್ ವಿದ್ಯುತ್ ಮಾರ್ಗದಿಂದ ಮಂಡಗದ್ದೆ ವಿದ್ಯುತ್ ಉಪಕೇಂದ್ರದವರೆಗೆ ಸುಮಾರು 20 ಮೀಟ–ರ್ ಪ್ರಸರಣ ಮಾರ್ಗವನ್ನು ನಿರ್ಮಿಸುವ ಕಾಮಗಾರಿಯು ಪೂರ್ಣಗೊಂಡಿದ್ದು, ಏ.30 ರಂದು ಅಥವಾ ನಂತರದ ದಿನಗಳಲ್ಲಿ ಯಾವುದೇ ಕ್ಷಣದಲ್ಲಿಯಾದರೂ ಈ ಮಾರ್ಗವನ್ನು ಚಾಲನೆಗೊಳಿಸಲಾಗುವುದು.

ಸಾರ್ವಜನಿಕರು ಈ ಮಾರ್ಗದಲ್ಲಿ ಬರುವ ಗೋಪುರಗಳನ್ನು ಹತ್ತುವುದಾಗಲಿ, ದನಕರುಗಳನ್ನು ಕಟ್ಟುವುದಾಗಲಿ ವಾಹಕಗಳಿಗೆ ತಗುಲುವಂತೆ ವಸ್ತುಗಳನ್ನು ಎಸೆಯುವುದಾಗಲಿ ನಿಷೇಧಿಸಲಾಗಿದೆ. ಹಾಗೂ ಈ ಕೃತ್ಯದಿಂದ ಉಂಟಾಗುವ ಪರಿಣಾಮಗಳಿಗೆ ಅವರೇ ನೇರ ಹೊಣೆಗಾರರಾಗಿದ್ದು, ಕವಿಪ್ರನಿನಿಯು ಯಾವುದೇ ಜವಾಬ್ದಾರಿಯಾಗಿರುವುದಿಲ್ಲ ಹಾಗೂ ಪರಿಹಾರವನ್ನು ನೀಡುವುದಿಲ್ಲವೆಂದು ಶಿವಮೊಗ್ಗ ಕರ್ನಾಟಕ ವಿದ್ಯುತ್ ಪ್ರಸರಣ ನಿಗಮ ನಿಯಮಿತ, ಯೋಜನೆ ವಿಭಾಗದ ಕಾರ್ಯನಿರ್ವಾಹಕ ಇಂಜಿನಿಯರ್(ವಿ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಜಾತಿ ಗಣತಿ ವರದಿ ಮೂಲ ಪ್ರತಿ ಕಳವು ಆರೋಪ:

## ಮುಂದಿನ ಸಚಿವ ಸಂಪುಟದಲ್ಲಿ ರಾಜ್ಯ ಸರ್ಕಾರ ಚರ್ಚೆ?



**ಬೆಂಗಳೂರು:** ರಾಜ್ಯ ಸರ್ಕಾರದ ಮುಂದಿನ ಸಚಿವ ಸಂಪುಟ ಸಭೆ ಮೇ.2ರಂದು ನಡೆಯಲಿದ್ದು, ಈ ಸಭೆಯಲ್ಲಿ ಜಾತಿ ಗಣತಿ ವರದಿಯ ಮೂಲ ಪ್ರತಿ ಕಳವು ಆರೋಪ ಕುರಿತು ಚರ್ಚೆ ನಡೆಸುವ ಸಾಧ್ಯತೆಗಳಿವೆ ಎಂದು ತಿಳಿದುಬಂದಿದೆ.

ಆರೋಪ ಕುರಿತು ಪ್ರತಿಕ್ರಿಯೆ ನೀಡಿರುವ ಗೃಹ ಸಚಿವ ಪರಮೇಶ್ವರ್ ಅವರು, "ಅನಗತ್ಯ ಆರೋಪಗಳನ್ನು ಮಾಡುವುದರಲ್ಲಿ ಅರ್ಥವಿಲ್ಲ. ಮೂಲ ವರದಿ ಇಲ್ಲದೆ ವರದಿಯನ್ನು ಸಿದ್ಧಪಡಿಸಲು ಹೇಗೆ ಸಾಧ್ಯ ಈ ಬಗ್ಗೆ ಸಚಿವ ಸಂಪುಟದಲ್ಲಿ ಚರ್ಚೆ ನಡೆಸಲಾಗುವುದು, ಇದು ಗಂಭೀರ ಆರೋಪವಾಗಿದ್ದು, ವಿಪಕ್ಷಗಳ ಆರೋಪ ಕುರಿಬು ಚರ್ಚೆ ನಡೆಸಲಾಗುವುದು ಎಂದು ಹೇಳಿದರು.

ಈಗಾಗಲೇ ವರದಿ ಕುರಿತು ಸಚಿವ ಸಂಪುಟದಲ್ಲಿ ಚರ್ಚೆಯಾಗಿದೆ. ಸಚಿವರು ತಮ್ಮ ತಮ್ಮ ಸಮುದಾಯಗಳ ಕುರಿತು ಮಾತನಾಡಿತ್ತಾರೆ. ಇದೀಗ ಮತ್ತೊಮ್ಮೆ ಚರ್ಚಿಸಲಾಗುವುದು, ಎಲ್ಲಾ ಅಂಶಗಳನ್ನು ಪರಿಶೀಲಿಸಿದ ಬಳಿಕ ಸರ್ಕಾರ ನಿರ್ಧಾರ ತೆಗೆದಕೊಳ್ಳಲಿದೆ ಎಂದು ತಿಳಿಸಿದರು.

ಉಪ ಮುಖ್ಯಮಂತ್ರಿ ಡಿಕೆ.ಶಿವಕುಮಾರ್ ಅವರು ಮಾತನಾಡಿ, ಜವಾಬ್ದಾರಿಯುತ ಸ್ಥಾನದಲ್ಲಿರುವ ಆರ್.ಅಶೋಕ್ ಅವರು ಸುಳ್ಳು ಹೇಳಬಾರದು. ಜಾತಿಗಣತಿ ವರದಿ ನಿಜವೇ ಸುಳ್ಳೇ, ನಕಲಿಯೇ ಎಂಬುದರ ಬಗ್ಗೆ ಆಯೋಗದ ಅಧ್ಯಕ್ಷರಾಗಿದ್ದ ಜಯಪ್ರಕಾಶ್ ಹೆಗ್ಡೆ ಅವರನ್ನು ಕೇಳಲಿ ಅಥವಾ ಅಧಿಕಾರಿಯಾದ ದಯಾನಂದ್ ಅವರ ಬಳಿ ವಿಚಾರಿಸಿದರೆ ಉತ್ತರ ಸಿಗಬಹುದು ಎಂದು ಹೇಳಿದ್ದಾರೆ.

ಹಿಂದುಳಿದ ವರ್ಗಗಳ ಆಯೋಗ ಸ್ವಾಯತ್ತ ಸಂಸ್ಥೆ. ಸೀಲ್ ಮಾಡಿದ್ದ ವರದಿಯನ್ನು ಕ್ಯಾಬಿನೆಟ್ ಮುಂದೆ ತಂದು ಅಲ್ಲಿಯೇ ತೆರೆದು ನೋಡಲಾಯಿತು. ಇದನ್ನು ವಿಡಿಯೋ ಚಿತ್ರೀಕರಣ ಕೂಡ ಮಾಡಲಾಗಿದೆ ಎಂದು ತಿಳಿಸಿದ್ದಾರೆ.

ಜಾತಿಗಣತಿ ಅನುಷ್ಠಾನಕ್ಕೆ ಇನ್ನೂ ಒಂದು ವರ್ಷವಾಗಲಿದೆ ಎನ್ನುವ ಸತೀಶ್ ಜಾರಕಿಹೊಳಿ ಅವರ ಹೇಳಿಕೆ ಕುರಿತು ಮಾತನಾಡಿ, "ಇದು ಆಂತರಿಕವಾಗಿ ಸಚಿವ ಸಂಪುಟದಲ್ಲಿ ಚರ್ಚೆ ಮಾಡುವ ವಿಚಾರ. ಸಾರ್ವಜನಿಕವಾಗಿ ಚರ್ಚೆ ಮಾಡುವ ಸಂಗತಿ ಇದಲ್ಲ ಎಂದರು.

## ನಿವೃತ್ತ ಡಿಜಿಪಿ ಓಂ ಪ್ರಕಾಶ್ ಹತ್ಯೆ ಪ್ರಕರಣ ಸಿಸಿಬಿಗೆ ವರ್ಗಾವಣೆ

**ಬೆಂಗಳೂರು:** ರಾಜ್ಯದ ನಿವೃತ್ತ ಪೊಲೀಸ್ ಮಹಾನಿರ್ದೇಶಕ ಓಂ ಪ್ರಕಾಶ್ ಅವರ ಹತ್ಯೆ ಪ್ರಕರಣವನ್ನು ಹೆಚ್ಚಿನ ತನಿಖೆಗಾಗಿ ನಗರ ಪೊಲೀಸ್ ಆಯುಕ್ತ ಬಿ. ದಯಾನಂದ ಅವರು ಸಿಸಿಬಿಗೆ ವರ್ಗಾಯಿಸಿ ಆದೇಶ ಹೊರಡಿಸಿದ್ದಾರೆ.

ಪ್ರಕರಣದ ತನಿಖೆ ನಡೆಸುವಂತೆ ಸಿಸಿಬಿ ಮಹಿಳಾ ಸಂರಕ್ಷಣಾ ದಳದ ಎಸಿಪಿಗೆ ಪೊಲೀಸ್ ಆಯುಕ್ತರು ಸೂಚಿಸಿದ್ದಾರೆ. ಓಂ ಪ್ರಕಾಶ್ ಕೊಲೆ ಹಿಂದೆ ಹಲವು ಕಾರಣಗಳು ಕೇಳಿಬರುತ್ತಿವೆ. ಅವರ ಪತ್ನಿ ಪಲ್ಲವಿ ಮಾನಸಿಕ ಖಾಯಿಲೆಯಿಂದ ಬಳಲುತ್ತಿದ್ದರಿಂದ ಭ್ರಮೆಯಲ್ಲಿ ಪತಿಯನ್ನು ಚಾಕುವಿನಿಂದ ಚುಚ್ಚಿ ಬರ್ಬರವಾಗಿ ಹತ್ಯೆ ಮಾಡಿದ್ದಾರೆ ಎನ್ನಲಾಗುತ್ತಿದೆ. ಇನ್ನು ಆಸ್ತಿ ಕಲಹದಿಂದ ಓಂ ಪ್ರಕಾಶ್ ಅವರು ಕೊಲೆಯಾದಾರಾ ಎಂಬ ಅನುಮಾನವೂ ವ್ಯಕ್ತವಾಗಿದೆ. ಹತ್ಯೆಗೆ ನಿಖರ ಕಾರಣ ಹಾಗೂ ಆಳವಾದ ತನಿಖೆ ನಡೆಸಲು ಪ್ರಕರಣವನ್ನ ಸಿಸಿಬಿಗೆ ವರ್ಗಾಯಿಸಲಾಗಿದೆ.

68 ವರ್ಷದ ನಿವೃತ್ತ ಐಪಿಎಸ್ ಅಧಿಕಾರಿಯನ್ನು ಅವರ ಪತ್ನಿ ಪಲ್ಲವಿ ಮತ್ತು ಮಗಳು ಕೃತಿ ಚಾಕುವಿನಿಂದ ಇರಿದು ಕೊಲೆ ಮಾಡಿದ್ದಾರೆ ಎಂದು ವರದಿಯಾಗಿದೆ.

## ಸಮೀಕ್ಷೆ ವಿರೋಧಿಸುವವರಿಗೆ ಅಹಿಂದ ವರ್ಗಗಳಿಂದ ತಕ್ಕ ಉತ್ತರ: ಜಿ.ಬಿ.ವಿ




**ದಾವಣಗೆರೆ:** ಸಂವಿಧಾನ ಬದ್ಧವಾಗಿ ನಡೆಸಿರುವ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಸಮೀಕ್ಷೆಯನ್ನು ವಿರೋಧಿಸುವವರಿಗೆ ಅಹಿಂದ ವರ್ಗಗಳಿಂದ ತಕ್ಕ ಉತ್ತರ ನೀಡಲಾಗುವುದು ಎಂದು ಸ್ವಾಭಿಮಾನಿ ಬಳಗದ ರಾಜಾಧ್ಯಕ್ಷ ಜಿ.ಬಿ. ವಿನಯ್ ಕುಮಾರ್ ಎಚ್ಚರಿಕೆ ನೀಡಿ–ದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಸಂವಿಧಾನ ಬದ್ಧವಾಗಿ, ಜನರ ತೆರಿಗೆ ಹಣ ವ್ಯಯ ಮಾಡಿ, ಸರ್ಕಾರಿ ಶಿಕ್ಷಕರಿಂದ ನಡೆಸಲ್ಪಟ್ಟಿರುವ ಸಾಮಾಜಿಕ, ಶೈಕ್ಷಣಿಕ, ಆರ್ಥಿಕ ಸಮೀಕ್ಷೆ ವರದಿಯನ್ನು ವಿರೋಧ ಮಾಡುತ್ತಿರುವುದನ್ನು ನೋಡುವಾಗ, ಹಾಸ್ಯಸ್ಪದವಾಗಿ ಕಾಣಿಸುತ್ತಿದೆ. 10 ವರ್ಷಗಳ ಹಿಂದೆ ಕಾಂಗ್ರೆಸ್ ಸರ್ಕಾರದ ಆಡಳಿತವಿತ್ತು. ಸಮಾಜ ಕಲ್ಯಾಣ ಇಲಾಖೆಯು ಜಾಹೀರಾತಿನ ಮೂಲಕ ಸಮೀಕ್ಷೆಯ ಬಗ್ಗೆ ಸಾರ್ವಜನಿಕವಾಗಿ ತಿಳುವಳಿಕೆ ನೀಡಲಾಗಿತ್ತು. ಇಂದು ಸಮೀಕ್ಷೆಯ ವರದಿಯನ್ನು ವಿರೋಧಿಸುವವರು ಅಂದಿನ ಸರ್ಕಾರದಲ್ಲಿ ಶಾಸಕರುಗಳಾಗಿದ್ದವರು ಎಂದರು.

ಒಂದು ತಿಂಗಳು ಮನೆ ಮನೆ ಸಮೀಕ್ಷೆ ನಡೆಸುವಾಗ, ಆಕ್ಷೇಪ ವ್ಯಕ್ತಪಡಿಸದೇ ಇರುವವರು ಈಗ ವರದಿ ಸಚಿವ ಸಂಪುಟದಲ್ಲಿ ಮಂಡನೆಯಾದ ನಂತರ ಮೊಸರಲ್ಲಿ ಕಲ್ಲನ್ನು ಹುಡುಕುವ ಕೆಲಸ ಮಾಡುತ್ತಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಸ್ವಾತಂತ್ರ್ಯ ಬಂದು 78 ವರ್ಷಗಳಾದರೂ ಶೋಷಿತರಿಗೆ ದೊರಕಬೇಕಾದ ಸೌಲಭ್ಯಗಳು ಹಕ್ಕುಗಳು ಸಿಗುತ್ತಿಲ್ಲ. ಇಂದಿಗೂ ಶೈಕ್ಷಣಿಕವಾಗಿ, ಆರ್ಥಿಕವಾಗಿ, ಔದ್ಯೋಗಿಕವಾಗಿ, ರಾಜಕೀಯವಾಗಿ ಹಿಂದುಳಿದಿದ್ದಾರೆ. ಸಮೀಕ್ಷೆ ವರದಿಯಿಂದ ಅಹಿಂದ ವರ್ಗಗಳಿಗೆ ನ್ಯಾಯ ಸಿಗುವುದನ್ನು ಯಾಕೆ ಸಹಿಸಿಕೊಳ್ಳಲು ಆಗುತ್ತಿಲ್ಲ ಎಂಬುದು ಅವರ ಮಾತುಗಳಿಂದ ವ್ಯಕ್ತವಾಗುತ್ತಿದೆ. ರಾಜ್ಯದಲ್ಲಿ ಅಲ್ಪಸಂಖ್ಯಾತರ, ದಲಿತರ, ಹಿಂದುಳಿದವರ ಎಷ್ಟು ಶಿಕ್ಷಣ ಸಂಸ್ಥೆಗಳಿವೆ, ಬ್ಯಾಂಕುಗಳಿವೆ, ಉದ್ಯಮಗಳಿವೆ. ಮೀಸಲಾತಿ ಹೊರತುಪಡಿಸಿ ಎಷ್ಟು ಜನ ಶಾಸಕರುಗಳು ಆಯ್ಕೆಯಾಗಿದ್ದಾರೆ ಎಂದು ಪ್ರಶ್ನಿಸಿದರು.

ರಾಜ್ಯವನ್ನು ಆಳಿದವರಲ್ಲಿ ಅಹಿಂದ ವರ್ಗಗಳನ್ನು ಪ್ರತಿನಿಧಿಸುವವರು ಎಷ್ಟು ಜನ ಮುಖ್ಯಮಂತ್ರಿಗಳಾಗಿದ್ದಾರೆ ಎಂಬುದು ಅಂಕಿ ಅಂಶಗಳು ಸಾರುತ್ತಿವೆ. ಯಾವ ಸಮುದಾಯಗಳಿಗೆ ಅನ್ಯಾಯವಾಗುತ್ತಿವೆ ಎಂಬ ಸತ್ಯವನ್ನು ಹತ್ತು ವರ್ಷಗಳ ಹಿಂದೆಯೇ ಬಿಡುಗಡೆಗೊಳಿಸಬೇಕಿತ್ತು. ಎಲ್ಲರಿಗೂ ಸಮಾನವಾಗಿ ಸೌಲಭ್ಯಗಳನ್ನು ಹಂಚಬೇಕಿತ್ತು. ರಾಜಕೀಯ ಇಚ್ಛಾಶಕ್ತಿಯ ಕೊರತೆಯಿಂದ, ಮೇಲಾಟಗಳಿಂದ ಅಹಿಂದ ವರ್ಗಗಳಿಗೆ ಅನ್ಯಾಯ ಮಾಡಿಕೊಂಡೇ ಬರಲಾಗುತ್ತಿದೆ ಎಂದರು.

ಇತ್ತೀಚೆಗೆ ನಡೆದ ವಿಶೇಷ ಸಚಿವ ಸಂಪುಟದಲ್ಲಿ ಯಾರ ವಿರೋಧವಿಲ್ಲದೇ ಅಂಗೀಕಾರವಾಗಬೇಕಿದ್ದ ವರದಿಯನ್ನು ನೆಪ ನೀಡಿ ಮುಂದೂಡಿರುವುದು ಸಹ ಅಹಿಂದ ವರ್ಗಗಳಿಗೆ ಮಾಡುತ್ತಿರುವ ಅನ್ಯಾಯ. ಮುಂದಿನ ಸಚಿವ ಸಂಪುಟದಲ್ಲಿ ಅಧಿಕೃತವಾಗಿ ಅಂಗೀಕಾರ ಮಾಡಬೇಕು. ಈಗ ಅನಧಿಕೃತವಾಗಿ ಬಿಡುಗಡೆಯಾಗಿರುವ ಜಾತಿ ಗಣತಿ ವರದಿಯಲ್ಲಿ ರಾಜ್ಯದ ಒಟ್ಟು ಜನಸಂಖ್ಯೆಯಲ್ಲಿ ಶೇ. 80 ರಷ್ಟು ಅಹಿಂದ ವರ್ಗಗಳ ಸಮುದಾಯಗಳಿವೆ ಎಂದು ಮಾಹಿತಿ ನೀಡಿದರು.

ಇಲ್ಲಿಯವರೆಗೂ ಶೋಷಿತ ಸಮುದಾಯಗಳನ್ನು ಓಟ್ ಬ್ಯಾಂಕಿಗಾಗಿ ಬಳಸಿಕೊಳ್ಳುತ್ತಿದ್ದರು. ಈಗ ಶೋಷಿತ ವರ್ಗಗಳಿಗೆ ಸವಲತ್ತುಗಳು, ಅಧಿಕಾರಿಗಳನ್ನು ಹಂಚಿಕೊಳ್ಳಬೇಕಾಗುತ್ತದೆ ಎಂದು ಸಮೀಕ್ಷಾ ವರದಿಯನ್ನು ವಿರೋಧಿಸುತ್ತಿದ್ದಾರೆ. ದಾವಣಗೆರೆ ಲೋಕಸಭಾ ಕ್ಷೇತ್ರದಲ್ಲಿರುವ ಒಟ್ಟು ಜನಸಂಖ್ಯೆಯಲ್ಲಿ ಶೇ. 85 ರಷ್ಟಿರುವ ಅಹಿಂದ ವರ್ಗಗಳ ಮತಗಳಿಂದ ರಾಜಕೀಯ ಸ್ಥಾನಮಾನಗಳನ್ನು ಅನುಭವಿಸುತ್ತಿದ್ದಾರೆ. ಎಲ್ಲಾ ಬೆಳವಣಿಗೆಗಳನ್ನು ಶೋಷಿತ ಸಮುದಾಯಗಳು ಸೂಕ್ಷ್ಮವಾಗಿ ಗಮನಿಸುತ್ತಿದೆ. ಹಕ್ಕುಗಳನ್ನು ಕಸಿಯುತ್ತಿರುವ ಹುನ್ನಾರಗಳಿಗೆ ಅಹಿಂದ ವರ್ಗಗಳು ಮುಂದಿನ ದಿನಗಳಲ್ಲಿ ಜಾಗೃತಗೊಂಡು, ಸಂಘಟಿತ ಹೋರಾಟದ ಮೂಲಕ ತಕ್ಕನಾದ ಉತ್ತರಗಳನ್ನು ನೀಡುತ್ತದೆ ಎಂದು ತಿಳಿಸಿದರು.

ಜನಸಂಖ್ಯೆಗೆ ಅನುಗುಣವಾಗಿ ರಾಜಕೀಯ ಪ್ರಾತಿನಿಧ್ಯ ನೀಡುವಂತೆ ಒತ್ತಾಯಿಸಿ ದಾವಣಗೆರೆ ಜಿಲ್ಲೆಯಲ್ಲಿ ಮೊದಲಿಗೆ ಎಲ್ಲಾ ಎಂಟು ಕ್ಷೇತ್ರಗಳಲ್ಲಿ ಜನಜಾಗೃತಿ ಮೂಡಿಸುವ ಕಾರ್ಯಕ್ರಮ ನಡೆಸಲಾಗುವುದು ಎಂದರು.

## ಕೇಂದ್ರದ ಬೆಲೆ ಏರಿಕೆ ವಿರೋಧಿಸಿ ಇಂದು ಜಿಲ್ಲಾ ಕಾಂಗ್ರೆಸ್ ಪ್ರತಿಭಟನೆ




**ದಾವಣಗೆರೆ:** ಕೇಂದ್ರ ಸರ್ಕಾರ ಗೃಹ ಬಳಕೆ ಸಿಲೆಂಡರ್, ಡಿಸೇಲ್ ಮತ್ತು ಅಗತ್ಯ ದಿನಬಳಕೆಯ ವಸ್ತುಗಳ ಬೆಲೆ ಏರಿಕೆ ಮಾಡಿರುವುದನ್ನು ಖಂಡಿಸಿ ದಾವಣಗೆರೆ ಜಿಲ್ಲಾ ಕಾಂಗ್ರೆಸ್ ವತಿಯಿಂದ ನಾಳೆ ಏ.23 ಬುಧವಾರ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ದಿನೇಶ್ ಕೆ. ಶೆಟ್ಟಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬುಧವಾರದಂದು ಬೆಳಿಗ್ಗೆ 11–30 ಗಂಟೆಗೆ ದಾವಣಗೆರೆಯ ಜಯದೇವ ವೃತ್ತದಲ್ಲಿ ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಮಲ್ಲಿಕಾರ್ಜುನ್ ನೇತೃತ್ವದಲ್ಲಿ ಮತ್ತು ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷರಾದ ಹೆಚ್.ಬಿ. ಮಂಜಪ್ಪನವರ ಅಧ್ಯಕ್ಷತೆಯಲ್ಲಿ ಪ್ರತಿಭಟನೆ ನಡೆಯಲಿದೆ ಎಂದರು.

ದಾವಣಗೆರೆ ಜಿಲ್ಲೆಯ ಸಚಿವರು, ಎಲ್ಲಾ ಹಾಲಿ ಶಾಸಕರು, ಮಾಜಿ ಶಾಸಕರು, ಕೆಪಿಸಿಸಿ ಸದಸ್ಯರು, ಕಾಂಗ್ರೆಸ್ ಪಕ್ಷದ ಎಲ್ಲಾ ಜನಪ್ರತಿನಿಧಿಗಳು, ಸರ್ಕಾರದಿಂದ ನೇಮಕಗೊಂಡಿರುವ ನಾಮನಿರ್ದೇಶನ ಸದಸ್ಯರುಗಳು, ಜಿಲ್ಲಾ ಕಾಂಗ್ರೆಸ್ ಪದಾಧಿಕಾರಿಗಳು, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರು, ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ, ಸೇವಾದಳ, ಹಿಂದುಳಿದ, ಅಲ್ಪಸಂಖ್ಯಾತರ, ಅಂಗವಿಕಲರ, ಕಿಸಾನ್ ಕಾಂಗ್ರೆಸ್. ಕಾರ್ಮಿಕರ, ವೈದ್ಯರ, ವಕೀಲರ ವಿಭಾಗಗಳು, ಎನ್.ಎಸ್. ಯು.ಐ., ಯುವ ಘಟಕ, ಮಹಿಳಾ ಘಟಕ, ಜವಾಹರ್ ಬಾಲ್ ಮಂಚ್. ರಾಜೀವ್‌ಗಾಂಧಿ ಪಂಚಾಯತ್ ರಾಜ್ ಹಾಗೂ ಕಾಂಗ್ರೆಸ್ ಪಕ್ಷದ ಎಲ್ಲಾ ಘಟಕಗಳ ಅಧ್ಯಕ್ಷರು ಮತ್ತು ಪದಾಧಿಕಾರಿಗಳು ಆಗಮಿಸಲಿದ್ದಾರೆ ಎಂದರು.

ಸುದ್ದಿಗೋಷ್ಠಿಯಲ್ಲಿ, ಮುಖಂಡರಾದ ಕೆ.ಜಿ. ಶಿವಕುಮಾರ್, ಅಯೂಬ್ ಪೈಲ್ವಾನ್, ಕವಿತಾ ಚಂದ್ರಶೇಖರ್, ಉಮಾ ಕುಮಾರಿ, ರಾಜೇಶ್ವರಿ, ಸಲ್ಮಾಬಾನು ಇನ್ನಿತರರು ಉಪಸ್ಥಿತರಿದ್ದರು.

## ರವಿಚಂದ್ರನ್ ಹಾಗೂ ರಚಿತಾ ರಾಮ್‌ಗೆ ದಾವಣಗೆರೆ ಕಾರ್ಯಕ್ರಮಕ್ಕೆ ಆಹ್ವಾನ



**ದಾವಣಗೆರೆ:** ಮುಂದಿನ ತಿಂಗಳು ನಡೆಯುವ ಖಾಸಗಿ ಕಾರ್ಯಕ್ರಮಕ್ಕೆ ನಟ, ನಿರ್ಮಾಪಕ, ನಿರ್ದೇಶಕ ಡಾ. ವಿ. ರವಿಚಂದ್ರನ್ ಹಾಗೂ ಚಿತ್ರನಟಿ ರಚಿತಾ ರಾಮ್ ಅವರನ್ನು

ಬೆಂಗಳೂರಲ್ಲಿ ನಡೆಯುತ್ತಿರುವ ಭರ್ಜರಿ ಬ್ಯಾಚುಲರ್ಸ್ ಕಾರ್ಯಕ್ರಮದ ವೇಳೆ ಭೇಟಿ ಮಾಡಿ ಆಹ್ವಾನ ಪತ್ರಿಕೆ ನೀಡಿ ಆಹ್ವಾನಿಸಲಾಯಿತು.

ಈ ಸಂದರ್ಭದಲ್ಲಿ ದಾವಣಗೆರೆ ತಾಲ್ಲೂಕು ಫೋಟೋ ಮತ್ತು ವಿಡಿಯೋಗ್ರಾಫರ್ ಸಂಘದ ಅಧ್ಯಕ್ಷ ಹಾಗೂ ದಾವಣಗೆರೆ ಜಿಲ್ಲಾ ಅಖಿಲ ಕರ್ನಾಟಕ ರವಿಚಂದ್ರನ್ ಅಭಿಮಾನಿಗಳ ಸಂಘದ ಜಿಲ್ಲಾಧ್ಯಕ್ಷ ಎಂ. ಮನು, ಕಾರ್ಯಧ್ಯಕ್ಷ ಗಣೇಶ್ ಚಿನ್ನಿಕಟ್ಟಿ ತರಳಬಾಳು ಗೋಲ್ಡ್ ಶಾಪ್ ಮಾಲೀಕ ಬಿ. ಆರ್. ಮಂಜುನಾಥ್, ಗಂಗಾಧರ್ ಚಿಕ್ಕನಹಳ್ಳಿ ಇತರರು ಹಾಜರಿದ್ದರು




## ಜಾಗತೀಕರಣ ಉದಾರೀಕರಣ ವಿಜೃಂಭಿಸುತ್ತಿರುವ ವೇಳೆ ಸಮಾಜವಾದವೇ ಪರಿಹಾರ: ಡಾ. ಸಿದ್ದನಗೌಡ ಪಾಟೀಲ



**ದಾವಣಗೆರೆ:** ಸಮಾಜವಾದ ಬಡವರ ಬೆವರು ಹಾಗೂ ಪ್ರಜ್ಞೆಯಲ್ಲಿದೆ. ಆದರೆ ಪ್ರಸ್ತುತ ದಿನಮಾನಗಳಲ್ಲಿ ಜಾತಿ, ಧರ್ಮಗಳ ಆರ್ಭಟದ ನಡುವೆ ಪ್ರಜ್ಞೆಯನ್ನು ತೊಡೆದಿದೆ ಎಂದು ಸಿ.ಪಿ.ಐ ಶತಮಾನೋತ್ಸವ ಸಮಿತಿಯ ಅಧ್ಯಕ್ಷ ಡಾ. ಸಿದ್ದನಗೌಡ ಪಾಟೀಲ ಹೇಳಿದರು.

ನಗರದ ರೋಟರಿ ಕ್ಲಬ್ ಸಿ. ಕೇಶವಮೂರ್ತಿ ಸಭಾಂಗಣದಲ್ಲಿ ಭಾರತ ಕಮ್ಯುನಿಸ್ಟ್ ಪಕ್ಷದ ರಾಜ್ಯ ಹಾಗೂ ಜಿಲ್ಲಾ ಮಂಡಳಿಯಿಂದ ಸಿ.ಪಿ.ಐ ಶತಮಾನೋತ್ಸವ ಅಂಗವಾಗಿ ಮಂಗಳವಾರ ಆಯೋಜಿಸಿದ್ದ, 'ಯುಗಪುರುಷ ಲೆನಿನ್' ಪುಸ್ತಕ ಬಿಡುಗಡೆ ಹಾಗೂ 'ಸಮಾಜವಾದವೇ ಪರ್ಯಾಯ ಮತ್ತು ಪರಿಹಾರ' ವಿಷಯ ಕುರಿತಾದ ವಿಚಾರ ಸಂಕಿರಣದಲ್ಲಿ ಅವರು ಮಾತನಾಡಿದರು.

ಸಂಪತ್ತಿನ ಸಾಮಾಜೀಕರಣ ಆಗಬೇಕು ಎಂಬುದು ಬುದ್ಧ, ಬಸವ, ಕಾರ್ಲ್ ಮಾರ್ಕ್ಸ್ ಹಾಗೂ ಲೆನಿನ್ ರವರಂತಹ ಚಿಂತಕರ ವಾದವಾಗಿತ್ತು. ಅವರು ದುಡಿಯುವ ವರ್ಗದ ಕೈಗೆ ಅಧಿಕಾರ ಸಿಗಬೇಕು ಎಂದು ಪ್ರತಿಪಾದಿಸಿದರು. ಜಾಗತೀಕರಣ, ಉದಾರೀಕರಣ, ಖಾಸಗೀಕರಣಗಳು ವಿಜೃಂಭಿಸುತ್ತಿರುವ ಈ ಹೊತ್ತಿನಲ್ಲಿ ಸಮಾಜವಾದವೇ ಪರ್ಯಾಯ ಮತ್ತು ಪರಿಹಾರ ಎಂದು ಅಭಿಪ್ರಾಯಪಟ್ಟರು.

ದಾವಣಗೆರೆ ನಗರಕ್ಕೆ ತಳಪಾಯ ಹಾಕಿದವರು ಕಮ್ಯುನಿಸ್ಟರು. ಒಂದು ಕಾಲಕ್ಕೆ 10 ಸಾವಿರ ಕಾರ್ಮಿಕರು ಇಲ್ಲಿ ದುಡಿಯುತ್ತಿದ್ದರು. ಅಂದಿನ ಜವಳಿ ಮಿಲ್‌ಗಳು ಮುಚ್ಚಲು ಜಾಗತೀಕರಣ ಕಾರಣವೇ ಹೊರತು ಕಾರ್ಮಿಕ ಸಂಘಟನೆಗಳಲ್ಲ ಎಂದರು.

ದೇಶದ ಪ್ರಧಾನಿ ಮೋದಿಯವರು 44 ಕಾರ್ಮಿಕ ಕಾನೂನುಗಳನ್ನು ನಾಶ ಮಾಡಿದರು. ಇನ್ನು ಹೋರಾಟವೊಂದೇ ನಮ್ಮ ಮುಂದಿರುವ ದಾರಿ ಎಂದರು.

'ಯುಗ ಪುರುಷ ಲೆನಿನ್' ಪುಸ್ತಕ ಬಿಡುಗ–'ಡೆ ಮಾಡಿದ ಸಾಹಿತಿ, ಪ್ರಗತಿಪರ ಚಿಂತಕ ಪ್ರೊ. ರಾಜೇಂದ್ರ ಚೆನ್ನಿ ಮಾತನಾಡಿ, ಕೋಮುವಾದವನ್ನು ಮನಸ್ಸಿನಲ್ಲಿ ಬಿತ್ತುವ ಮೂಲಕ ಸಮಾಜ ಒಡೆಯುವ ಕೆಲಸವಾಗುತ್ತಿದೆ. ಧರ್ಮ, ಜಾತಿಯ ಹೆಸರಿನಲ್ಲಿ ಸಾಮೂಹಿಕ ಹುಚ್ಚು ಆವರಿಸಿದೆ. ಹೊಸ ಬಗೆಯ ಸಮಾಜವನ್ನು ನಾವು ಕಟ್ಟಬೇಕಿದೆ ಎಂದು ಕರೆ ನೀಡಿದರು.

ಆಧುನಿಕ ಕಾಲದಲ್ಲಿ ಶ್ರಮ ಜೀವಿಗಳು ಅದೃಶ್ಯರಾಗಿದ್ದಾರೆ. ಅವರ ಪರವಾಗಿ ಧ್ವನಿ ಎತ್ತುವವರು ಇಲ್ಲವಾಗಿದೆ. ಬಂಡವಾಳಶಾಹಿಗಳದೇ ಪಾರಮ್ಯವಾಗಿದೆ. ಇಂಥ ಸನ್ನಿವೇಶದಲ್ಲಿ ಸಮ ಸಮಾಜ ನಿರ್ಮಾಣವಾಗಬೇಕಿದೆ ಎಂದು ಅಭಿಪ್ರಾಯಪಟ್ಟರು

ದೇಶದಲ್ಲಿ ಪ್ರಜಾಪ್ರಭುತ್ವ ಪಠ್ಯಪುಸ್ತಕಗಳಲ್ಲಿ ಮಾತ್ರ ಇದೆ. ಫ್ಯಾಸಿಸ್ಟ್ ವ್ಯವಸ್ಥೆ ಜೀವಂತವಾಗಿದೆ. ಜನನಾಯಕರು ಜಗತ್ತಿನ ದುಃಖವೇ ನನ್ನ ದುಃಖವೆಂದು ಭಾವಿಸಿ ಜನರ ಪರವಾಗಿ ಕೆಲಸ ಮಾಡಬೇಕು ಎಂದು ಆಶಿಸಿದರು.

'ಯುಗಪುರುಷ ಲೆನಿನ್' ಪುಸ್ತಕದ ಲೇಖ–ಕರು, ನವ ಕರ್ನಾಟಕ ಪ್ರಕಾಶನದ ಡಾ. ಜಿ. ರಾಮಕೃಷ್ಣ ಮಾತನಾಡಿ,

ಸಮಾಜವಾದಕ್ಕೆ ವೈಚಾರಿಕತೆಯೇ ಬುನಾದಿ. ದೇಶಕ್ಕೀಗ ಶುದ್ಧ ವೈಚಾರಿಕೆಯ ಅಗತ್ಯವಿದೆ. ಮೌಢ್ಯಗಳನ್ನು ಬಿಟ್ಟು, ಸಂಘಟಿತರಾದರೆ ಸಮಾಜದಲ್ಲಿ ಬದಲಾವಣೆ ತರಬಹುದು. ಸುಳ್ಳು ಪ್ರಚಾರವನ್ನು ನಂಬಬೇಡಿ ಎಂದರು.

ವೇದಿಕೆಯಲ್ಲಿ ನವಕರ್ನಾಟಕ ಪ್ರಕಾಶನದ ನಿರ್ದೇಶಕ ಯು. ಪ್ರೇಮಚಂದ್ರ, ಸಿಪಿಐ ರಾಜ್ಯ ಕಾರ್ಯದರ್ಶಿ ಸಾತಿ ಸುಂದರೇಶ್, ಸಿಪಿಐ ಮುಖಂಡರಾದ ಪಿ.ವಿ. ಲೋಕೇಶ್, ನಾಗಭೂಷಣ, ಬಿ. ಅಮ್ಜದ್, ಜಿಲ್ಲಾ ಕಾರ್ಯದರ್ಶಿ ಆವರಗೆರೆ ಚಂದ್ರು, ಸಹ ಕಾರ್ಯದರ್ಶಿ ಎಚ್.ಜಿ. ಉಮೇಶ್ ಉಪಸ್ಥಿತರಿದ್ದರು.


## ಕರ್ತವ್ಯ ಲೋಪ: ಪಿಡಿಒಗೆ ಶಾಸಕ ಬಸವಂತಪ್ಪ ತರಾಟೆ

**ದಾವಣಗೆರೆ:** ಇ–ಸ್ವತ್ತು ವಿಳಂಬ ಮಾಡಲಾಗುತ್ತಿದೆ ಎಂಬ ಆರೋಪ ಹಿನ್ನೆಲೆಯಲ್ಲಿ ನವಿಲೇಹಾಳ್ ಗ್ರಾಮ ಪಂಚಾಯಿತಿಗೆ ಭೇಟಿ ನೀಡಿದಾಗ ಅಧಿಕಾರಿಗಳು ಮತ್ತು ಸಿಬ್ಬಂದಿಗಳ ಕರ್ತವ್ಯ ಲೋಪ ಕಂಡು ಶಾಸಕ ಕೆ.ಎಸ್. ಬಸವಂತಪ್ಪ ಗರಂ ಆದರು.

ಮಾಯಕೊಂಡ ಕ್ಷೇತ್ರದ ವ್ಯಾಪ್ತಿಯ ನವಿಲೇಹಾಳ್ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಗ್ರಾಮಗಳ ಜನರಿಗೆ ಇ–ಸ್ವತ್ತು ಮಾಡಿಕೊಂಡಲು ವಿಳಂಬ ಮತ್ತು ಕಚೇರಿಗೆ ಅಲೆದಾಡಿಸುವ ಬಗ್ಗೆ ಗ್ರಾಮಸ್ಥರು ಶಾಸಕರಿಗೆ ದೂರು ಸಲ್ಲಿಸಿದ್ದರು.

ಈ ಹಿನ್ನೆಲೆಯಲ್ಲಿ ಸೋಮವಾರ ಗ್ರಾಮ ಪಂಚಾಯಿತಿ ಕಚೇರಿಗೆ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿದಾಗ ಅಧಿಕಾರಿಗಳು ಮತ್ತು ಸಿಬ್ಬಂದಿಗಳ ಕರ್ತವ್ಯ ಲೋಪ ಕಂಡು ಬಂದಿತು. ಬೆಳಗ್ಗೆ ಪಿಡಿಒ ಕರ್ತವ್ಯಕ್ಕೆ ಬಂದಿದ್ದರೂ ಸರ್ಕಾರದ ಹಾಜರಿ ಪುಸ್ತಕದಲ್ಲಿ ಸಹಿ ಮಾಡಿರಲಿಲ್ಲ. ಇವರಲ್ಲದೇ, ಕೆಲವು ಅಧಿಕಾರಿ, ಸಿಬ್ಬಂದಿಗಳು ಸಹಿ ಮಾಡಿರಲಿಲ್ಲ. ಅಲ್ಲದೇ ಕಳೆದ ಮೂರು ದಿನಗಳಿಂದ ಕೆಲವರು ಸಹಿ ಮಾಡಿಲ್ಲದಿರುವುದನ್ನು ಕಂಡು ಶಾಸಕ ಕೆ.ಎಸ್.ಬಸವಂತಪ್ಪ ಪಿಡಿಒಗೆ ತರಾಟೆಗೆ ತೆಗೆದುಕೊಂಡರು.

ನಿಮ್ಮ ಬೆಳಗಿನ ಕರ್ತವ್ಯವನ್ನೇ ಸರಿಯಾಗಿ ಮಾಡದ ನೀವು, ಇನ್ನು ಗ್ರಾಮ ಪಂಚಾಯಿತಿ ಕಚೇರಿಗೆ ಸಮಸ್ಯೆಗಳನ್ನು ಹೊತ್ತು ಬರುವ ಜನರಿಗೆ ಯಾವ ರೀತಿ ನ್ಯಾಯ ಒದಗಿಸುತ್ತೀರಿ, ಪರಿಹಾರ ನೀಡ್ತೀರಿ. ಇ–ಸ್ವತ್ತು ಮಾಡಿಕೊಡಲು ಏಕೆ ವಿಳಂಬ ಮಾಡ್ತೀರಿ. ಕಳೆದ ಮೂರು ದಿನಗಳಿಂದ ಹಾಜರಿ ಪುಸ್ತಕದಲ್ಲಿ ಸಹಿ ಹಾಕದಿರುವುದನ್ನು ನೋಡಿ–ದರೆ ನಿಮ್ಮ ಕರ್ತವ್ಯ ಲೋಪ ಎದ್ದು ಕಾಣುತ್ತಿದೆ ಎಂದರು.



## ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ನಿಮ್ಮನ್ನು ಪ್ರೇರೇಪಿಸುವ ಭಾವನೆಗಳನ್ನು ಗುರುತಿಸಿ. ನೀವು ಭಯ, ಅನುಮಾನ, ಕೋಪ, ದುರಾಸೆಯಂಥ ನಕಾರಾತ್ಮಕ ಆಲೋಚನೆಗಳನ್ನು ಬಿಡಬೇಕು. ಏಕೆಂದರೆ ಇವುಗಳು ನೀವು ಬಯಸುವುದಕ್ಕೆ ವಿರುದ್ಧವಾದವುಗಳನ್ನು ಆಕರ್ಷಿಸಲು ಆಯಸ್ಕಾಂತದಂತೆ ಕೆಲಸ ಮಾಡುತ್ತದೆ. ಹಣದ ಪ್ರಾಮುಖ್ಯತೆ ನಿಮಗೆ ಚೆನ್ನಾಗಿ ಗೊತ್ತಿದೆ, ಆದ್ದರಿಂದ ಇಂದು ನಿಮ್ಮ ಮೂಲಕ ಉಳಿಸಲಾಗಿರುವ ಹಣ ನಿಮ್ಮ ತುಂಬಾ ಕೆಲಸಕ್ಕೆ ಬರಬಹುದು ಮತ್ತು ನೀವು ಯಾವುದೇ ದೊಡ್ಡ ಸಮಸ್ಯೆಯಿಂದ ಹೊರಬರಬಹುದು.

### ವೃಷಭ ರಾಶಿ

ನಿಮ್ಮ ಬಗ್ಗೆ ನಿಮಗೇ ಉತ್ತಮ ಅಭಿಪ್ರಾಯ ಬರಲು ಕೆಲಸಗಳನ್ನು ಮಾಡಲು ಒಂದು ಅದ್ಭುತ ದಿನ. ಹೆಚ್ಚು ಖರೀದಿಸಲು ಧಾವಿಸುವ ಮೊದಲು ನೀವು ಈಗಾಗಲೇ ಹೊಂದಿರುವುದನ್ನು ಬಳಸಿ. ಭಾವನಾತ್ಮಕ ಅಪಾಯ ನಿಮ್ಮ ಪರವಾಗಿರುತ್ತದೆ. ಪ್ರೀತಿ ನಿಮಗಾಗಿ ಗಾಳಿಯಲ್ಲಿದೆ. ಸುತ್ತಲೂ ನೋಡಿ ಎಲ್ಲವೂ ಗುಲಾಬಿಯಾಗಿದೆ. ಇಂದು ನೀವು ಶಿಷ್ಟರೂ ಮತ್ತು ಸಹಾಯ ಮಾಡುವವರೂ ಆಗಿದ್ದಲ್ಲಿ ನಿಮ್ಮ ಪಾಲುದಾರರಿಂದ ಸಕಾರಾತ್ಮಕ ಪ್ರತಿಕ್ರಿಯೆ ಬರಬಹುದು.

### ಮಿಥುನ ರಾಶಿ

ದೈಹಿಕ ಅನಾರೋಗ್ಯದಿಂದ ಚೇತರಿಸಿಕೊಳ್ಳುವ ಸಾಧ್ಯತೆಗಳಿವೆ. ನೀವು ತ್ವರಿತ ಹಣ ಪಡೆಯುವ ಬಯಕೆ ಹೊಂದಿರುತ್ತೀರಿ. ಮಕ್ಕಳ ಅವರ ಸಾಧನೆಗಳಿಂದ ನೀವು ಹೆಮ್ಮೆ ಪಡುವಂತೆ ಮಾಡಬಹುದು. ನಿಮ್ಮ ಸಂಗಾತಿ ನಿಮ್ಮ ಬಗ್ಗೆ ಒಳ್ಳೆಯದನ್ನು ಯೋಚಿಸುತ್ತಾನೆ, ಆದ್ದರಿಂದ ಕೆಲವೊಮ್ಮೆ ನಿಮ್ಮ ಮೇಲೆ ಕೋಪವನ್ನು ಸಹ ತೋರಿಸಬಹುದು. ಅವರ ಕೋಪಕ್ಕೆ ಕೋಪಗೊಳ್ಳುವುದಕ್ಕಿಂತ ಅವರ ಮಾತುಗಳನ್ನು ನೀವು ಅರ್ಥಮಾಡಿಕೊಳ್ಳುವುದು ಉತ್ತಮ.

### ಕರ್ಕ ರಾಶಿ

ಒಂದು ಲಾಭಕರ ದಿನ ಮತ್ತು ನೀವು ಧೀರ್ಘಕಾಲದ ಅನಾರೋಗ್ಯಕ್ಕೆ ಪರಿಹಾರ ಹುಡುಕಲು ಸಾಧ್ಯವಾಗಬಹುದು. ತಮ್ಮ ಆಪ್ತರು ಅಥವಾ ಸಂಬಂಧಿಕರೊಂದಿಗೆ ಸೇರಿ ವ್ಯಾಪಾರವನ್ನು ಮಾಡುತ್ತಿರುವ ಜನರು ಇಂದು ತುಂಬಾ ಯೋಚಿಸಿ ಅರ್ಥಮಾಡಿಕೊಂಡು ಹೆಜ್ಜೆಯನ್ನು ಹಾಕುವ ಅಗತ್ಯವಿದೆ , ಇಲ್ಲದಿದ್ದರೆ ಆರ್ಥಿಕ ನಷ್ಟವಾಗಬಹುದು ಸ್ನೇಹಿತರು ಮತ್ತು ಹತ್ತಿರದವರು ನಿಮಗೆ ತಮ್ಮ ಸಹಾಯ ಹಸ್ತ ಚಾಚುತ್ತಾರೆ. ನಿಮ್ಮ ಪ್ರೀತಿಪಾತ್ರರ ತೋಳುಗಳಲ್ಲಿ ಆರಾಮ– ಆನಂದ ಮತ್ತು ಭಾವಪರವಶತೆಯನ್ನು ನೀವು ಕಾಣುವುದರಿಂದ ನಿಮ್ಮ ಕೆಲಸ ಹಿಂದೆ ಬೀಳುತ್ತದೆ

### ಸಿಂಹ ರಾಶಿ

ವಿಶ್ರಾಂತಿ ತೆಗೆದುಕೊಳ್ಳಿ ಮತ್ತು ಕೆಲಸದ ನಡುವೆ ಸಾಧ್ಯವಾದಷ್ಟೂ ವಿಶ್ರಾಂತಿ ಪಡೆಯಲು ಪ್ರಯತ್ನಿಸಿ. ಆಸ್ತಿ ವ್ಯವಹಾರಗಳು ಅಸಾಧಾರಣ ಲಾಭ ತರುತ್ತವೆ. ಸ್ನೇಹಿತರು ಮತ್ತು ಸಂಬಂಧಿಗಳು ಉಪಕಾರ ಮಾಡುತ್ತಾರೆ ಮತ್ತು ನೀವು ಅವರ ಸಂಗದಲ್ಲಿ ಸಾಕಷ್ಟು ಸಂತೋಷವಾಗಿರುವಿರಿ. ಪ್ರಣಯದ ಮನೋಭಾವದಲ್ಲಿನ ಹಠಾತ್ ಬದಲಾವಣೆ ನಿಮಗೆ ಅಸಮಾಧಾನ ಇರಬಹುದು.

### ಕನ್ಯಾ ರಾಶಿ

ಮೋಜಿಗಾಗಿ ಹೊರಹೋಗುವವರಿಗೆ ಸಂತೋಷ ಮತ್ತು ಆನಂದವನ್ನು ಹಂಚಿಕೊಳ್ಳಿ. ಯಾರಿಂದಲೂ ಸಲಹೆಯನ್ನು ತೆಗದುಕೊಳ್ಳದೆ ನೀವು ಹಣವನ್ನು ಎಲ್ಲಿಯೂ ಹೂಡಿಕೆ ಮಾಡಬಾರದು. ಸ್ನೇಹಿತರು ಮತ್ತು ಕುಟುಂಬದ ಸದಸ್ಯರು ನಿಮಗೆ ನೆರವು ಮತ್ತು ಪ್ರೀತಿ ಒದಗಿಸುತ್ತಾರೆ. ನಿಮ್ಮ ಪ್ರಿಯತಮೆಯ ಜೊತೆ ಇಂದು ಸಭ್ಯತೆಯಿಂದ ವರ್ತಿಸಿ. ನೀವು ಕೆಲಸದಲ್ಲಿ ಇಂದು ನಿಜವಾಗಿಯೂ ಏನಾದರೂ ಅದ್ಭುತವಾದದ್ದನ್ನು ಮಾಡಬಹುದು. ಈ ರಾಶಿಚಕ್ರದ ಜನರು ಇಂದು ತಮಗಾಗಿ ಸಾಕಷ್ಟು ಸಮಯವನ್ನು ಪಡೆಯುತ್ತಾರೆ.

### ತುಲಾ ರಾಶಿ

ಅತಿಯಾಗಿ ತಿನ್ನುವುದನ್ನು ತಪ್ಪಿಸಿ ಮತ್ತು ನಿಮ್ಮ ತೂಕದ ಮೇಲೆ ಹಿಡಿತ ಹೊಂದಿರಿ. ಹಣಕಾಸಿನಲ್ಲಿ ಸುಧಾರಣೆ ನಿಶ್ಚಿತ. ನಿಮ್ಮ ಮಕ್ಕಳು ನಿಮ್ಮನ್ನು ಸಂತೋಷವಾಗಿರಿಸಲು ತಮಗೆ ಸಾಧ್ಯವಿರುವುದೆಲ್ಲವನ್ನೂ ಮಾಡುತ್ತಾರೆ. ನಿಮ್ಮ ಪ್ರಿಯತಮೆ ಇಡೀ ದಿನ ನಿಮಗಾಗಿ ಪರಿತಪಿಸುತ್ತಾಳೆ. ಒಂದು ಅಚ್ಚರಿಯನ್ನು ಯೋಜಿಸಿ ಮತ್ತು ಇದನ್ನು ನಿಮ್ಮ ಜೀವನದ ಅತ್ಯಂತ ಸುಂದರ ದಿನವನ್ನಾಗಿ ಮಾಡಿ.

### ವೃಶ್ಚಿಕ ರಾಶಿ

ನಿಮ್ಮ ದಯಾಳು ಪ್ರಕೃತಿ ಇಂದು ಅನೇಕ ಸಂತೋಷದ ಕ್ಷಣಗಳನ್ನು ತರುತ್ತದೆ. ನೀವು ನಿಮ್ಮ ಇಂದಿನ ದಿನವನ್ನು ಉತ್ತಮಗೊಳಿಸಲು ಕಳೆದ ದಿನಗಳಲ್ಲಿ ಹಣವನ್ನು ಹೂಡಿಕೆ ಮಾಡಿದ್ದರೆ, ಅದರ ಪ್ರಯೋಜನವನ್ನು ಇಂದು ನೀವು ಪಡೆಯಬಹುದು. ಮಗಳ ಅನಾರೋಗ್ಯ ನಿಮ್ಮ ಮನಸ್ಸಿಗೆ ಅಸಮಾಧಾನ ತರುತ್ತದೆ. ಅವಳು ತನ್ನ ಅನಾರೋಗ್ಯದ ಜೊತೆ ಹೋರಾಡುತ್ತಿದ್ದ ಹಾಗೆ ಅವಳ ಚೈತನ್ಯವನ್ನು ಉದ್ದೀಪನಗೊಳಿಸಲು ಅವಳಿಗೆ ನಿಮ್ಮ ಪ್ರೀತಿಯನ್ನು ನೀಡಿ. ಪ್ರೀತಿಯ ಶಕ್ತಿ ಗಮನಾರ್ಹವಾದ ಚಿಕಿತ್ಸೆಯ ಸಾಮರ್ಥ್ಯವನ್ನು ಹೊಂದಿದೆ

### ಧನು ರಾಶಿ

ನಿಮ್ಮ ದೈಹಿಕ ರಚನೆಯನ್ನು ಕಾಯ್ದುಕೊಳ್ಳಲು ನೆರವಾಗುವ ಕೆಲವು ಕ್ರೀಡಾ ಚಟುವಟಿಕೆಗಳನ್ನು ನೀವು ಇಂದು ಆನಂದಿಸಬಹುದು. ವ್ಯಾಪರದಲ್ಲಿ ಪ್ರಯೋಜನ ಇಂದು ಅನೇಕ ವ್ಯಾಪಾರಿಗಳ ಮುಖದ ಮೇಲೆ ಸಂತೋಷವನ್ನು ತರಬಹುದು. ಅಗತ್ಯವಿದ್ದರೆ ಸ್ನೇಹಿತರು ನಿಮ್ಮ ನೆರವಿಗೆ ಬರುತ್ತಾರೆ. ನೀವು ಪ್ರೀತಿಯ ಮನೋಭಾವದಲ್ಲಿರುತ್ತೀರಿ ಮತ್ತು ಅದಕ್ಕೆ ಅವಕಾಶಗಳೂ ಸಾಕಷ್ಟಿರುತ್ತವೆ. ಕೇವಲ ಒಂದೇ ಒಂದು ಉತ್ತಮ ಕೆಲಸದಿಂದ ಕೆಲಸದಲ್ಲಿ ನಿಮ್ಮ ಶತ್ರುಗಳು ಇಂದು ನಿಮ್ಮ ಸ್ನೇಹಿತರಾಗಬಹುದು.

### ಮಕರ ರಾಶಿ

ಬಹಳಷ್ಟು ವಿಷಯಗಳು ನೀವು ಬಯಸಿದಂತಿರುವ ಹಾಸ್ಯದಿಂದ ತುಂಬಿದ ಒಂದು ದಿನ. ನಿಮ್ಮ ಪೋಷಕರು ನೀಡಿದ ಬೆಂಬಲದಿಂದ ಹಣಕಾಸು ಸಮಸ್ಯೆಗಳು ನಿವಾರಣೆಯಾದಂತೆನಿಸುತ್ತವೆ. ಸ್ನೇಹಿತರು ಮತ್ತು ಸಂಬಂಧಿಗಳು ಹೆಚ್ಚು ಸಮಯ ಕೇಳಿದರೂ ಈ ಜಗತ್ತಿನ ಬಾಗಿಲುಗಳನ್ನು ಮುಚ್ಚಿ ನಿಮಗೆ ನೀವೇ ಒಳ್ಳೆಯ ವೈಭೋಗ ನೀಡಿಕೊಳ್ಳುವುದೊಳ್ಳೆಯದು. ನಿಮ್ಮ ಪ್ರೀತಿಪಾತ್ರರ ತೋಳುಗಳಲ್ಲಿ ಆರಾಮ– ಆನಂದ ಮತ್ತು ಭಾವಪರವಶತೆಯನ್ನು ನೀವು ಕಾಣುವುದರಿಂದ ನಿಮ್ಮ ಕೆಲಸ ಹಿಂದೆ ಬೀಳುತ್ತದೆ

### ಕುಂಭ ರಾಶಿ

ಸ್ನೇಹಿತರ ಮೂಲಕ ದೊರಕುವ ಜ್ಯೋತಿಶ್ಶಾಸ್ತ್ರದ ಮಾರ್ಗದರ್ಶನ ನಿಮ್ಮ ಆರೋಗ್ಯವನ್ನು ಸುಧಾರಿಸಲು ನಿಮ್ಮನ್ನು ಉತ್ತೇಜಿಸುತ್ತದೆ. ಇಂದು ಹಣದ ಆಗಮನವು ನಿಮ್ಮನ್ನು ಯಾವುದೇ ಸಮಸ್ಯೆಗಳಿಂದ ಮುಕ್ತಗೊಳಿಸಬಹುದು ನೀವು ಕುಟುಂಬದ ಸದಸ್ಯರ ಜೊತೆ ಸ್ವಲ್ಪ ತೊಂದರೆ ಹೊಂದಿದ್ದರೂ ಇದು ನಿಮ್ಮ ಮನಶ್ಶಾಂತಿಯನ್ನು ಹಾಳು ಮಾಡಲು ಅವಕಾಶ ನೀಡಬೇಡಿ. ಇಂದು ನೀವು ನಿಮ್ಮ ಸ್ನೇಹಿತನ ಅನುಪಸ್ಥಿತಿಯಲ್ಲಿ ಅವರ ಸುಗಂಧವನ್ನು ಅನುಭವಿಸುತ್ತೀರಿ.

### ಮೀನ ರಾಶಿ


ನಿಮ್ಮ ಆರೋಗ್ಯದ ಬಗ್ಗೆ ಎಚ್ಚರ ವಹಿಸಿ. ತಮ್ಮ ಹಣವನ್ನು ಬೆಟ್ಟಿಂಗ್‌ನಲ್ಲಿ ಖರ್ಚು ಮಾಡಿದವರು ಇಂದು ನಷ್ಟ ಅನುಭವಿಸುವ ಸಾಧ್ಯತೆಯಿದೆ. ಬೆಟ್ಟಿಂಗ್‌ನಿಂದ ದೂರವಿರಲು ನಿಮಗೆ ಸೂಚಿಸಲಾಗಿದೆ. ನಿಮ್ಮ ಸಂಗಾತಿಯ ಆರೋಗ್ಯ ಒತ್ತಡ ಮತ್ತು ಆತಂಕಕ್ಕೆ ಕಾರಣವಾಗಬಹುದು ನಿಮ್ಮ ಧೈರ್ಯ ಪ್ರೀತಿಯನ್ನು ಗೆಲ್ಲಬಹುದು. ಇಂದು ನಿಮ್ಮ ಮನಸ್ಸಿನಲ್ಲಿ ಉದ್ಭವವಾಗುವ ಹೊಸ ಹಣಗಳಿಕೆಯ ವಿಚಾರಗಳ ಲಾಭ ತೆಗೆದುಕೊಳ್ಳಿ.

## ವಿಶೇಷಚೇತನರಿಗೆ ತ್ರಿಚಕ್ರ ವಾಹನ ವಿತರಣೆ, ಸಂಚಾರಿ ನಿಯಮ ಪಾಲಿಸಿ :ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್

**ದಾವಣಗೆರೆ:** ನಗರದ ಜಿಲ್ಲಾಧಿಕಾರಿಗಳ ಕಚೇರಿ ಆವರಣದಲ್ಲಿ ನಗರಸಭೆಯ ಎಸ್‌ಎಫ್ ಸಿ ಮತ್ತು ಪಾಲಿಕೆ ಸಾಮಾನ್ಯ ನಿಧಿಯಿಂದ ಜಿಲ್ಲೆಯ ಅರ್ಹ 16 ವಿಶೇಷಚೇತನ ವ್ಯಕ್ತಿಗಳಿಗೆ ತ್ರಿಚಕ್ರ ವಾಹನಗಳನ್ನು ಹಸ್ತಾಂತರಿಸಿ ಅವರು ಸೋಮವಾರ ಮಾತನಾಡಿದರು.

ಅರ್ಹ 16 ವಿಶೇಷ ಚೇತನ ವ್ಯಕ್ತಿಗಳಿಗೆ ವಾಹನ ವಿತರಿಸಿಲಾಗಿದೆ. ಪ್ರಸಕ್ತ ಸಾಲಿನಲ್ಲಿ ಇಂದಿನ 16 ವಾಹನಗಳು ಸೇರಿದಂತೆ ಒಟ್ಟು 40 ವಾಹನಗಳನ್ನು ವಿತರಿಸಲಾಗಿದ್ದು, ಸಂಚಾರಿ ನಿಯಮಗಳನ್ನು ಅಚ್ಚುಕಟ್ಟಾಗಿ ಪಾಲಿಸುವುದರೊಂದಿಗೆ ಅತ್ಯಂತ ಜಾಗೃತವಾಗಿ ಚಾಲನೆ ಮಾಡಬೇಕು ಎಂದ ಅವರು, ಎಲ್ಲಾ ಫಲಾನುಭವಿಗಳಿಗೆ ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಹಾಗೂ ಜಿ.ಪಂ. ಸಿಇಓ ಸುರೇಶ್ ಬಿ ಇಟ್ನಾಳ್, ಅಪರ ಜಿಲ್ಲಾಧಿಕಾರಿ ಪಿ.ಎನ್.ಲೋಕೇಶ್, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಮಂಜುನಾಥ್, ಪಾಲಿಕೆ ಆಯುಕ್ತೆ ರೇಣುಕಾ ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.



## ಅಣಬೇರು ರಾಜಣ್ಣನವರಿಗೆ 80ರ ಸಂಭ್ರಮದ ಸನ್ಮಾನ



**ದಾವಣಗೆರೆ:** ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯ ವತಿಯಿಂದ ದಾವಣಗೆರೆಯ ಖ್ಯಾತ ಹೋಟೆಲ್ ಉದ್ಯಮಿ, ಸಮಾಜ ಸೇವಕರಾದ ಅಣಬೇರು ರಾಜಣ್ಣನವರಿಗೆ ಇತ್ತೀಚಿಗೆ ಅಪೂರ್ವ ಹೋಟೆಲ್ ಸಭಾಂಗಣದಲ್ಲಿ ಅವರ 80ನೇ ವರ್ಷದ ಜನಮದಿನದ ಸಂಭ್ರಮಕ್ಕೆ ಸನ್ಮಾನಿಸಿ ಗೌರವಿಸಲಾಯಿತು ಎಂದು ಕಲಾಕುಂಚದ ಸಂಸ್ಥಾಪಕರಾದ ಸಾಲಿಗ್ರಾಮ ಗಣೇಶ್ ಶೆಣೈ ತಿಳಿಸಿದ್ದಾರೆ.

ರಾಜಣ್ಣನವರು ಕಳೆದ 6 ದಶಮಾನದಿಂದ ನಿರಂತರವಾಗಿ ಸಾಮಾಜಿಕ ಕಾಳಜಿಯೊಂದಿಗೆ ಹೋಟೆಲ್ ಉದ್ಯಮದೊಂದಿಗೆ ಸಮಾಜ ಸೇವೆಯಲ್ಲಿ ತೊಡಗಿಸಿಕೊಂಡು ನಿಸ್ವಾರ್ಥವಾಗಿ ಯಾವುದೇ ಪ್ರಚಾರವಿಲ್ಲದೇ ಕರ್ತವ್ಯ ನಿಷ್ಠೆಯಿಂದ ಕಾಯಕ ಮಾಡುತ್ತಿದ್ದು ಅವರಿಗೆ ಕಲಾಕುಂಚದಿಂದ ಅಭಿಮಾನದಿಂದ ಅಭಿನಂದಿಸಲಾಯಿತು.

ಕಲಾಕುಂಚ ಸಂಸ್ಥೆಯ ಅಧ್ಯಕ್ಷರಾದ ಕೆ.ಹೆಚ್. ಮಂಜುನಾಥ್, ಪ್ರಧಾನ ಕಾರ್ಯದರ್ಶಿ ಕೆ.ಸಿ.ಉಮೇಶ್, ಕಲಾಕುಂಚ ಡಿ.ಸಿ.ಎಂ.ಟೌನ್‌ಶಿಪ್ ಶಾಖೆಯ ಅಧ್ಯಕ್ಷರಾದ ಶ್ರೀಮತಿ ಶಾರದಮ್ಮ ಶಿವನಪ್ಪ ದಂಪತಿಗಳು, ಕಲಾಕುಂಚ ಎಂ.ಸಿ.ಸಿ. ಬ್ಲಾಕ್ ಶಾಖೆಯ ಅಧ್ಯಕ್ಷರಾದ ಶ್ರೀಮತಿ ಪ್ರಭಾ ರವೀಂದ್ರ, ಕಲಾಕುಂಚ ಕೆ.ಬಿ.ಬಡಾವಣೆ ಶಾಖೆಯ ಅಧ್ಯಕ್ಷರಾದ ವಿ.ಕೃಷ್ಣಮೂರ್ತಿ ಮುಂತಾದವರು ಉಪಸ್ಥಿತರಿದ್ದರು.

## ಪ್ರಸ್ತುತ ಜಗತ್ತಿನಲ್ಲಿ ಸಂವಹನ ಮಾಧ್ಯಮದ ಪಾತ್ರ

**ಹಾಸನ** : ಸಂವಹನ ಮಾಧ್ಯಮದ ಮೂಲ ಜನಪದ ಸಾಹಿತ್ಯವಾಗಿತ್ತು, ಸಾಮಾಜಿಕ, ರಾಜಕೀಯ ಮತ್ತು ಆರ್ಥಿಕ ಪ್ರಭಾವದಿಂದ ಇಂದು ಜನಪದ ಸಾಹಿತ್ಯ ಸಂವಹನ ಮಾಧ್ಯಮವಾಗಿ ಬೆಳೆದುಬಂದಿದೆ ಎಂದು ವಕೀಲರಾದ ಭರತ್ ಟಿ.ಸಿ ಹೇಳಿದರು.

ನಗರದ ಸರ್ಕಾರಿ ಕಾನೂನು ಕಾಲೇಜಿನ ವತಿಯಿಂದ ದುದ್ದ ಗ್ರಾಮದಲ್ಲಿ ಏರ್ಪಡಿಸಲಾಗಿದ್ದ ಪ್ರಸ್ತುತ ಜಗತ್ತಿನಲ್ಲಿ ಸಂವಹನ ಮಾಧ್ಯಮದ ಪಾತ್ರ ಎಂಬ ಕಾರ್ಯಕ್ರಮದಲ್ಲಿ ಮುಖ್ಯ ಅಥಿತಿಯಾಗಿ ಭಾಗವಹಿಸಿ ಮಾತನಾಡಿದ ಅವರು, ರೇಡಿಯೋ, ದೂರದರ್ಶನ, ಪತ್ರಿಕೆಗಳು ಮತ್ತು ಚಲನಚಿತ್ರಗಳು ಸಮೂಹ ಸಂವಹನದ ಉತ್ತಮ ಮಾಧ್ಯಮಗಳಿವೆ. ಹಿಂದೆ, ವಿವರಣಾತ್ಮಕ ರೂಪದಲ್ಲಿ ಸಮೂಹ ಮಾಧ್ಯಮವನ್ನು ವೈಯಕ್ತಿಕ ಬಳಕೆಗೆ ಮಾತ್ರ ಬಳಸಲಾಗುತ್ತಿತ್ತು. ಶೈಕ್ಷಣಿಕ ಪ್ರಕ್ರಿಯೆಯಲ್ಲಿ ಈ ಮಾಧ್ಯಮಗಳ ಯಾವುದೇ ಸುಸಂಬದ್ಧ ಚಿಂತನೆ ಇರಲಿಲ್ಲ. ಪ್ರಸ್ತುತ ಸಮಾಜದಲ್ಲಿ ಯುವ ಜನತೆಯನ್ನು ಆಕರ್ಷಿಸಲು ಸಮೂಹ ಮಾಧ್ಯಮಗಳು ಮುಗಿಬಿದ್ದಿವೆ ಇಂತಹ




ಸಂದರ್ಭದಲ್ಲಿ ವಸ್ತುನಿಷ್ಠ ವಿಷಯಗಳತ್ತ ಮಾತ್ರ ಗಮನಹರಿಸಬೇಕು ಎಂದು ಹೇಳಿದರು

ಮತ್ತೋರ್ವ ಅಥಿತಿಯಾಗಿ ಆಗಮಿಸಿದ್ದ ಉಪನ್ಯಾಸಕರಾದ ಮೋಹನ್ ಕುಮಾರ್ ಮಾತನಾಡಿ, ಆಧುನಿಕ ಜಗತ್ತಿನಲ್ಲಿ ಯುವ ಜನರು ಪುಸ್ತಕ ಬಿಟ್ಟು ಮೊಬೈಲ್‌ನತ್ತ ಹೆಚ್ಚು ಒಲವು ತೋರುತ್ತಿದ್ದಾರೆ ಇದು ಭವಿಷ್ಯದ ದೃಷ್ಟಿಯಿಂದ ಒಳ್ಳೆ ಹವ್ಯಾಸವಲ್ಲ. ವಿದ್ಯಾರ್ಥಿಗಳು ಪ್ರತಿದಿನ ಕನಿಷ್ಠ 2 ದಿನಪತ್ರಿಕೆಗಳನ್ನಾದರೂ ಓದುವ ಹವ್ಯಾಸ ರೂಢಿಸಿಕೊಳ್ಳಬೇಕು. ಶೈಕ್ಷಣಿಕ ಸಾಧನೆಯತ್ತ ಗಮನ ಹರಿಸಬೇಕು ಎಂದು ಹೇಳಿದರು.

ನಂತರ ಉಪನ್ಯಾಸಕರಾದ ತೇಜಸ್ ಕುಮಾರ್ ಹೆಚ್.ಆರ್ ಮಾತನಾಡಿ, ಪ್ರಸ್ತುತ ದಿನಗಳಲ್ಲಿ ಸಂವಹನ ಮಾಧ್ಯಮವು ಅತ್ಯುತ್ತಮ ತಂತ್ರಜ್ಞಾನದಿಂದ ಕೂಡಿದೆ, ಈ ಹಿಂದೆ ಇದ್ದ ಗ್ರಾಮೀಣ ಸೊಗಡಿನ ಸಂಹನ ಸುಂದರವಾಗಿತ್ತು ಮತ್ತು ಅಂದಿನ ಸಮಾಜವನ್ನು ವಸ್ತುನಿಷ್ಠವಾಗಿ ಅರ್ಥೈಸುವಲ್ಲಿ ಮುಂಚೂಣಿಯಲ್ಲಿತ್ತು. ಆದರೆ ಇಂದು ಮೊಬೈಲ್‌ನಿಂದಲೇ ಇಡೀ ಪ್ರಪಂಚದ ವಿಚಾರಗಳನ್ನು ತಿಳಿದುಕೊಳ್ಳುವ ಹಂತಕ್ಕೆ ನಾವು ತಲುಪಿದ್ದೇವೆ. ಇದನ್ನು ವಿದ್ಯಾರ್ಥಿಗಳು ಒಳ್ಳೆಯ ರೀತಿ ಬಳಸಿಕೊಳ್ಳಬೇಕು ಎಂದು ತಿಳಿ ಹೇಳಿದರು.

ಕಾರ್ಯಕ್ರಮದಲ್ಲಿ ಎನ್.ಎಸ್.ಎಸ್ ಕಾರ್ಯಕ್ರಮಾಧಿಕಾರಿ ಲೇಪಾಕ್ಷಯ್ಯ ಎಸ್.ವಿ, ಕೃಷ್ಣಾಚಾರಿ ಹೆಚ್.ಕೆ ಹಾಗೂ ಎನ್.ಎಸ್.ಎಸ್ ವಿದ್ಯಾರ್ಥಿಗಳು ಹಾಜರಿದ್ದರು.

## ರಾಜಕಾರಣದಲ್ಲಿ ಯುವಕರಿಗೆ ಹೆಚ್ಚಿನ ಆದ್ಯತೆ ಸಿಗಬೇಕು

**ದಾವಣಗೆರೆ:** ಇಂದಿನ ಮಕ್ಕಳೇ ದೇಶದ ಮುಂದಿನ ಭವಿಷ್ಯ. ಹಾಗಾಗಿ ಯುವಕರಿಗೆ ರಾಜಕಾರಣದಲ್ಲಿ ಹೆಚ್ಚಿನ ಅವಕಾಶ ನೀಡುವ ಅಗತ್ಯತೆ ಇದೆ ಎಂದು ಸಂಸದೆ ಡಾ. ಪ್ರಭಾ ಮಲ್ಲಿಕಾರ್ಜುನ್ ಅವರು ಪ್ರತಿಪಾದಿಸಿದರು.

ನಗರದ ದೃಶ್ಯಕಲಾ ಮಹಾವಿದ್ಯಾಲಯ ಕಾಲೇಜಿನ ಮಕ್ಕಳ ಥೀಮ್ ಪಾರ್ಕ್ ನಲ್ಲಿ ಜವಾಹರ್ ಬಾಲ್ ಮಂಚ್ ವತಿಯಿಂದ ಹಮ್ಮಿಕೊಂಡಿದ್ದ ರಾಜ್ಯಮಟ್ಟದ ಮಕ್ಕಳೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳಿಗೆ ಪರಿಸರ, ನೀರು ಸಂರಕ್ಷಣೆ ಬಗ್ಗೆ ತಿಳಿಸಿ. ಹಿರಿಯರನ್ನು ಗೌರವಿಸುವ ಬಗ್ಗೆ ಹೇಳಿಕೊಡಿ. ಮಕ್ಕಳು ಪಠ್ಯದ ಜೊತೆಗೆ ಪಠ್ಯೇತರ ಚಟುವಟಿಕೆಗಳಲ್ಲಿಯೂ ಹೆಚ್ಚಾಗಿ ಪಾಲ್ಗೊಳ್ಳುವಂತಾಗಬೇಕು. ಈ ನಿಟ್ಟಿನಲ್ಲಿ ವಿಶೇಷ ಗಮನ ನೀಡಿ ಎಂದು ಸಲಹೆ ನೀಡಿ–ದರು.

ಇತ್ತೀಚಿನ ದಿನಗಳಲ್ಲಿ ಸಮಾಜದ ಎಲ್ಲಾ ಜನರು ರಾಜಕೀಯದ ಜಂಜಾಟದಲ್ಲಿ ಮುಳುಗಿ ಹೋಗಿದ್ದಾರೆ. ಇದೆಲ್ಲದರ ನಡುವೆ ಯಾವುದೇ ರಾಜಕೀಯದ ಪ್ರಭಾವವಿಲ್ಲದೆ ಕೇವಲ ಮಕ್ಕಳಿಗಾಗಿ ಅನೇಕ ಸಮಾಜಮುಖಿ ಕೆಲಸಗಳು ಹೆಚ್ಚಾಗಿ ನಡೆಯುವಂತಾಗಬೇಕು. ಈ ನಿಟ್ಟಿನಲ್ಲಿ ಜವಾಹರ್ ಬಾಲ್ ಮಂಚ್ ಏರ್ಪಡಿಸಿರುವ ರಾಜ್ಯಮಟ್ಟದ ಮಕ್ಕಳೋತ್ಸವ ಕಾರ್ಯಕ್ರಮ ನಿಜಕ್ಕೂ ಶ್ಲಾಘನೀಯ ಎಂದು ಪ್ರಭಾ ಮಲ್ಲಿಕಾರ್ಜುನ್ ಅವರು ಮೆಚ್ಚುಗೆ ವ್ಯಕ್ತಪಡಿಸಿದರು.

ಮಕ್ಕಳ ಭವಿಷ್ಯದ ಹಿತದೃಷ್ಟಿಯಿಂದ ಸಂವಿಧಾನ, ಮಕ್ಕಳ ಹಕ್ಕು, ಹಾಗೂ ಇನ್ನಿತರ ಮಕ್ಕಳ ಉಪಯೋಗಿ ಚರ್ಚಾ ಸ್ಪರ್ಧೆ, ಪ್ರಬಂಧ ಸ್ಪರ್ಧೆ, ಚಿತ್ರಕಲೆ ಸ್ಪರ್ಧೆಯಂಥ ಅತ್ಯುತ್ತಮ ಕಾರ್ಯಕ್ರಮಗಳನ್ನು ಏರ್ಪಡಿಸಿರುವುದು ಅತ್ಯುತ್ತಮ ಕೆಲಸ. ಇಂಥ ಅನೇಕ ಕಾರ್ಯಕ್ರಮ ಏರ್ಪಡಿಸಿ ಮಕ್ಕಳಿಗೆ ಸ್ಫೂರ್ತಿ ತುಂಬುತ್ತಿರುವ ಜವಾಹರ್ ಬಾಲ್ ಮಂಚ್ ಸಂಘಟನೆ ಒಂದು ಉತ್ತಮ ಮಕ್ಕಳ ಸ್ನೇಹಿ ಸಂಘಟನೆಯಾಗಿದೆ. ಸಂಘಟಕರ ಕಾರ್ಯವನ್ನು ನಾನು ಸುಮಾರು ದಿನಗಳಿಂದ ಗಮನಿಸುತ್ತಿದ್ದು ಉಪಯುಕ್ತ ಕಾರ್ಯಕ್ರಮ ಆಯೋಜನೆ ಮಾಡುತ್ತಿದ್ದಾರೆ. ಇಂಥ ಸಂಘಟನೆಗಳಿಗೆ ಹೆಚ್ಚಿನ ಪ್ರೋತ್ಸಾಹ ದೊರೆಯುವಂತಾಗಬೇಕು ಎಂದು ಆಶಿಸಿದರು.

ಭಾರತನಾಟ್ಯ, ಯಕ್ಷಗಾನ, ಚಿತ್ರಕಲೆ, ಪ್ರಬಂಧ, ಕರಾಟೆ, ಹಾಡುಗಾರಿಕೆ, ಭಾಷಣ, ವೇಷಭೂಷಣ,ಸ್ಪರ್ಧೆಗಳಲ್ಲಿ ಮಕ್ಕಳು ಭಾಗವಹಿಸಿ ಖುಷಿಪಟ್ಟರು. ರಾಜ್ಯದ ವಿವಿಧ ಜಿಲ್ಲೆಗಳಿಂದ ಸುಮಾರು 200ರಿಂದ 300 ಮಕ್ಕಳು

ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ಮಕ್ಕಳಿಗೆ ನೆನಪಿನ ಕಾಣಿಕೆ ಹಾಗೂ ಪ್ರಮಾಣ ಪತ್ರವನ್ನು ಇದೇ ವೇಳೆ ವಿತರಿಸಲಾಯಿತು. ಸಂವಿಧಾನ ಪೀಠಿಕೆಯನ್ನು ಇದೇ ವೇಳೆ ಬೋಧಿಸಲಾಯಿತು.

ಬಾಲ್ ಮಂಚ್ ದಾವಣಗೆರೆ ಜಿಲ್ಲಾಧ್ಯಕ್ಷ ಮೊಹಮದ್ ಜಿಕ್ರಿಯಾ ಎಲ್ಲರನ್ನೂ ಸ್ವಾಗತಿಸಿದರು. ರಾಜ್ಯಾಧ್ಯಕ್ಷ ಮೈನುದ್ದಿನ್ ಕಾರ್ಯಕ್ರಮ ಕುರಿತು ಮಾತನಾಡಿದರು. ವೇದಿಕೆಯಲ್ಲಿ ಜವಾಹರ್ ಬಾಲ್ ಮಂಚ್ ರಾಷ್ಟ್ರೀಯ ಸಂಯೋಜಕ ಜಯ ಕುಮಾರ್ ಪಿಳ್ಳಯ್ , ದಾವಣಗೆರೆ ಉಸ್ತುವಾರಿ ಸೋಮಶೇಖರ್, ಮಂಚ್ ನ ಪದಾಧಿಕಾರಿಗಳಾದ ಪ್ರೇಮ ಕೆ. ಹೆಚ್., ಶಿಲ್ಪಾ ಪರಶುರಾಮ್, ಫಯಾಜ್ ಅಹ್ಮದ್, ನಾಗರಾಜ್, ಮಂಜುನಾಥ, ದರ್ಶನ್, ಪ್ರವೀಣ್, ವೀರೇಶ್, ಆಫ್ರಿದ್, ತೇಜಸ್ವಿ,ಹಾಗೂ ರಾಜ್ಯ ಪದಾಧಿಕಾರಿಗಳು, ಜಿಲ್ಲಾ ಅಧ್ಯಕ್ಷರು ಹಾಜರಿದ್ದರು. ವಿದ್ಯಾ ಸಾಗರ ಶಾಲೆಯ ಎನ್. ಎಂ. ಪ್ರಜ್ಞಾ ನಿರೂಪಣೆ ನಡೆಸಿಕೊಟ್ಟರು.

## ಕರ್ನಾಟಕ ಪ್ರಾದೇಶಿಕ ಅಸಮತೋಲನ : ಮರು ಪರಿಶೀಲನೆ

**ಹಾಸನ** : ನಂಜುಂಡಪ್ಪ ಸಮಿತಿಯು ನೀಡಿರುವ ಶಿಫಾರಸ್ಸುಗಳು, ಹಾಗೂ ಆ ವರದಿಯಲ್ಲೇನಿದೆ ಜೊತೆಗೆ ಮುಂದೆ ಯಾವ ಅಂಶಗಳನ್ನು ಅಳವಡಿಸಿಕೊಳ್ಳಬೇಕು ಹಾಗೂ ಪ್ರಸ್ತುತದ ಗೋವಿಂದ ರಾವ್ ಸಮಿತಿಯ ವರದಿಗಳು, ಪರಿಕಲ್ಪನೆ, ಒಳನೋಟಗಳು ಮತ್ತು ಹಾಸನ ಜಿಲ್ಲೆಯಲ್ಲಿ ಅಭಿವೃದ್ಧಿಗೆ ಇರುವ ಸವಾಲುಗಳ ಕುರಿತಾಗಿ ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿಯ ಸದಸ್ಯರಾದ ಸೂರ್ಯನಾಯಣ ಎಂ.ಹೆಚ್ ಅವರು ಸವಿವರವಾಗಿ ವಿವರಿಸಿದರು.

ಹಾಸನ ಜಿಲ್ಲಾ ಪಂಚಾಯಿತಿಯ ಸಭಾಂಗಣದಲ್ಲಿಂದು ಕರ್ನಾಟಕ ಪ್ರಾದೇಶಿಕ ಅಸಮತೋಲನ ನಿವಾರಣಾ ಸಮಿತಿಯ ಸಂವಾದ ಸಭೆಯಲ್ಲಿ ಮಾತನಾಡಿದ ಅವರು ನಂಜುಂಡಪ್ಪ ಸಮಿತಿಯರವರು ಎರಡು ತಪ್ಪುಗಳನ್ನು ಮಾಡಿದ್ದಾರೆ, ಅಭಿವೃದ್ಧಿ ಅಂ–ದರೆ ಏನು ಎಂಬ ವ್ಯಾಖ್ಯಾನವನ್ನೆ ನೀಡಿಲ್ಲ, ಅಭಿವೃದ್ಧಿಯ ಮಾಪನವಾಗಿ ಕೇವಲ ಸಾಕ್ಷರತಾ ಪ್ರಮಾಣವನ್ನಷ್ಟೆ ತೆಗೆದುಕೊಂಡಿದ್ದಾರೆ ಎಂದು ಹೇಳಿದರು.

ನಂಜುಂಡಪ್ಪ ಸಮಿತಿ ವರದಿಯು ಅತ್ಯಂತ ಹಿಂದುಳಿದವರು 39, ಹೆಚ್ಚು ಹಿಂದುಳಿದವರು 40, ಹಿಂದುಳಿದವರು 35 ಎಂದು ಸಮಗ್ರ ಅಭಿವೃದ್ಧಿ ಸೂಚ್ಯಂಕದ ಆಧಾರದ ಮೇಲೆ ತಾಲ್ಲೂಕುಗಳು ಅಥವಾ ಜಿಲ್ಲೆಗಳ ವರ್ಗೀಕರಣ ಮಾಡಿದೆ ಎಂದರು.

ಗೋವಿಂದ ರಾವ್ ಸಮಿತಿಯು ಡಾ.ಡಿ.ಎಮ್ ನಂಜುಂಡಪ್ಪ ಸಮಿತಿಯು ವರದಿ ಸಲ್ಲಿಸಿದ ನಂತರದಲ್ಲಿ ಅಂತರಜಿಲ್ಲಾ ಮಾನವ ಪ್ರವೃತ್ತಿಗಳು ಹಾಗೂ ಜಿಲ್ಲೆಯ ಜೀವನ ಮಟ್ಟಗಳ ಸುಧಾರಣೆ ಹಾಗೂ ಮಾನವ ಅಭಿವೃದ್ಧಿಯ ವ್ಯತ್ಯಾಸಗಳ ಕುರಿತು ವಿಶ್ಲೇಷಣೆ ನಡೆಸಿ ವರದಿಯಲ್ಲಿ ಚರ್ಚಿಸಲಾಗುವುದು ಎಂದು ತಿಳಿಸಿದರು.

ಗೋವಿಂದ ರಾವ್ ಸಮಿತಿಯಲ್ಲಿ ಅಭಿವೃದ್ಧಿ ಸೂಚಕಗಳಾಗಿ ಆರ್ಥಿಕವಾಗಿ ಒಟ್ಟು ದೇಶೀಯ ಉತ್ಪನ್ನ, ತಲಾ ಆದಾಯ, ಆರ್ಥಿಕ ರಚನೆ,



ಸಾಮಾಜಿಕವಾಗಿ ಜೀವಿತಾವಧಿ, ಶಿಶು ಮರಣ ಪ್ರಮಾಣ ಮತ್ತು ಸಾಕ್ಷರತಾ ಪ್ರಮಾಣ, ಪರಿಸರ ಸಂಬಂಧಿತವಾದ ನೈಸರ್ಗಿಕ ಸಂಪನ್ಮೂಲ, ಸವಕಳಿ ಸೂಚಕಗಳನ್ನು ಪರಿಗಣಿಸಲಾಗಿದೆ ಎಂದು ಹೇಳಿದರು.

2011–12 ಹಾಗೂ 2019–20 ರಲ್ಲಿ ರಾಜ್ಯದಲ್ಲಿ ಏನೆಲ್ಲಾ ಅಭಿವೃದ್ಧಿಯಾಗಿದೆ ಎಂಬುದನ್ನು ತಿಳಿಸಿದ ಅವರು, ಹಾಸನ ಅಭಿವೃದ್ಧಿಗೆ ನೀರು ಮತ್ತು ರಾಸಯನಿಕ ಒಳಹರಿವಿನ ಅತಿಯಾದ ಬಳಕೆಯಿಂದ ಮಣ್ಣಿನ ಅವನತಿಯಾಗಿ ಇಳುವರಿ ನಿಂತಿದೆ, ರಾಸಯನಿಕ ಮತ್ತು ಸಾವಯವ ಒಳಹರಿವಿನ ಸಮತೋಲಿತ ಬಳಕೆಯ ಬಗ್ಗೆ ಜಾಗೃತಿ ಮೂಡಿಸುವ ಅಗತ್ಯವಿದೆ, ಕೃಷಿ ಮೂಲಸೌಕರ್ಯಗಳಾದ ಶೇಖರಣಾ ಸೌಲಭ್ಯಗಳು, ಭೂ ಅಭಿವೃದ್ಧಿ, ಮಣ್ಣಿನ ಸಂರಕ್ಷಣೆ ಮತ್ತು ನೀರಿನ ಅಭಿವೃದ್ಧಿ, ಸಾಮಾಜಿಕ ಮೂಲಸೌಕರ್ಯಗಳಾದ ಆರೋಗ್ಯ ಮತ್ತು ಶಿಕ್ಷಣ ಹಾಸನ ಅಭಿವೃದ್ಧಿಗೆ ಸವಾಲಾಗಿವೆ ಎಂದರು.

ಜಿಲ್ಲಾಧಿಕಾರಿ ಸತ್ಯಭಾಮ ಅವರು ಮಾತನಾಡಿ ಆರೋಗ್ಯ, ನೀರು, ಲಿಂಗಾನುಪಾತವು ಜಿಲ್ಲೆಯಲ್ಲಿ ಉತ್ತಮವಾಗಿದೆ, ಗುಣಮಟ್ಟದ ಶಿಕ್ಷಣ ನೀಡುವ ಮೂಲಕ ಸುಧಾರಣೆ ಆಗಬೇಕು, ಅಂಗನವಾಡಿ ಕೇಂದ್ರಗಳಲ್ಲಿ ಶಾಲಾ ಪೂರ್ವ ಶಿಕ್ಷಣದಲ್ಲಿಯೇ ಮಕ್ಕಳಿಗೆ ಅಕ್ಷರ ಕಲಿಸುವುದರ ಜೊತೆಗೆ ಹೇಗೆ ಸ್ವಚ್ಛವಾಗಿರಬೇಕೆಂಬುದರ ಕುರಿತು ಕಲಿಸಿಕೊಡಬೇಕು, ನಿಗದಿತ ಪ್ರಮಾಣದ ಆಹಾರವನ್ನು ನೀಡಬೇಕು ಮತ್ತು ಸಂಸ್ಕಾರಯುತ ಮೌಲ್ಯಗಳನ್ನು ಕಲಿಸಿಕೊಡಬೇಕು ಎಂದರು.

ರೈತರು ಬೆಳೆಯುವ ಬೆಳೆಗಳನ್ನು ಶೇಖರಣೆ ಮಾಡಿಟ್ಟು, ಉತ್ತಮ ಬೆಲೆ ಬಂದಾಗ ಮಾರಾಟ ಮಾಡಲು ಅನುಕೂಲವಾಗುವಂತೆ ಶೈತ್ಯಾಗಾರಗಳ ಅವಶ್ಯಕತೆಯಿದೆ ಎಂದು ತಿಳಿಸಿದರು.

ಭೂಮಿಯ ಫಲವತ್ತತೆ ಕಾಪಾಡಲು ರೈತರು ಮಿಶ್ರಬೇಸಾಯ ಪದ್ಧತಿಯನ್ನು ಅಳವಡಿಸಿಕೊಳ್ಳಬೇಕು ಎಂದ ಅವರು ಜಿಲ್ಲೆಯಲ್ಲಿ ಸ್ಥಳೀಯವಾಗಿ ದೊರಕುವ ಕಚ್ಚಾ ವಸ್ತುಗಳಿಂದ ಸಿದ್ಧವಸ್ತುಗಳನ್ನು ತಯಾರಿಸುವ ನಿಟ್ಟಿನಲ್ಲಿ ಸ್ಥಳೀಯವಾಗಿ ಉತ್ಪಾದನ ಘಟಕಗಳನ್ನು ಸ್ಥಾಪಿಸಬೇಕು ಇದರಿಂದ ಆರ್ಥಿಕವಾಗಿ ಅಭಿವೃದ್ಧಿ ಹೊಂದಲು ಸಹಕಾರಿಯಾಗಲಿದೆ. ಜಿಲ್ಲೆಯಲ್ಲಿ ಪ್ರತಿಯೊಂದು ತಾಲ್ಲೂಕುಗಳ ಪೈಕಿ ನೀವು ಸಮೀಕ್ಷೆ ಮಾಡಿ ವರದಿ ಮಾಡಿದರೆ ಉತ್ತಮವಾಗಿರುತ್ತದೆ ಎಂದು ತಿಳಿಸಿದರು.

ಬಿ.ಸಿ.ಎಂ ಹಾಸ್ಟೇಲ್‌ಗಳನ್ನು ಉತ್ತಮ ಪಡಿಸಬೇಕೆಂದು ಜಿಲ್ಲಾಧಿಕಾರಿಯವರು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಯವರು ಅಭಿಪ್ರಾಯ ವ್ಯಕ್ತಪಡಿಸಿದರು.

ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪೂರ್ಣಿಮಾ ಬಿ.ಆರ್ ಅವರು ಮಾತನಾಡಿ ಶಿಕ್ಷಣದಲ್ಲಿ ಹಿಂದುಳಿದ ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡಿ ಪ್ರಾಥಮಿಕ ಹಂತದಲ್ಲಿಯೆ ಸುಧಾರಣೆ ಮಾಡಲು ಶಿಕ್ಷಕರುಗಳಿಗೆ ಕಾರ್ಯಗಾರಗಳನ್ನು ಮಾಡಲು ಯೋಜನೆ ತಯಾರಿಸಲಾಗಿದೆ ಎಂದು ತಿಳಿಸಿದರು.

## ಕೆಎಸ್‌ಆರ್‌ಟಿಸಿ ಬಸ್ ಸಂಚಾರ ಸ್ಥಗಿತ ಗ್ರಾಮಸ್ಥರಿಗೆ ತೊಂದರೆ

**ಚಿಕ್ಕಮಗಳೂರು:** ಚಂದ್ರದ್ರೋಣ ಪರ್ವತ ಶ್ರೇಣಿಯ ತಪ್ಪಲಿನಲ್ಲಿ ಬರುವ ಇನಾಂ ದತ್ತಾತ್ರೇಯ ಪೀಠ, ಅತ್ತಿಗುಂಡಿ, ಮಹಲ್, ಬಿಸಗ್ನಿಮಠ ಗ್ರಾಮಗಳಿಗೆ ಕೆಎಸ್‌ಆರ್‌ಟಿಸಿ ಬಸ್ ಸಂಚಾರ ಸ್ಥಗಿತಗೊಂಡಿದ್ದು, ಇದರಿಂದ ಈ ಭಾಗದ ಗ್ರಾಮಸ್ಥರಿಗೆ ತುಂಬಾ ತೊಂದರೆಯಾಗುತ್ತಿದೆ ಎಂದು ದೂರಿದ್ದಾ–ರೆ.


ಈ ಕುರಿತು ಪತ್ರಿಕಾ ಹೇಳಿಕೆಯಲ್ಲಿ ತಿಳಿಸಿರುವ ಗ್ರಾಮಸ್ಥರು, ಈ ಹಿಂದೆ ನಮ್ಮ ಗ್ರಾಮಗಳಿಗೆ ಸರಿಯಾದ ಸಮಯಕ್ಕೆ ಸರ್ಕಾರಿ ಬಸ್ ಬರುತ್ತಿತ್ತು, ಇತ್ತೀಚಿನ ಕೆಲವು ಒಂದು ವಾರದಿಂದ ಬಸ್ ಸೇವೆಯನ್ನು ಸ್ಥಗಿತಗೊಳಿಸಿರುವುದರಿಂದ ವಿದ್ಯಾರ್ಥಿಗಳಿಗೆ ಹಾಗೂ ಸಾರ್ವಜನಿಕರಿಗೆ ತುಂಬಾ ಸಮಸ್ಯೆಯಾಗುತ್ತಿದೆ ಎಂದು ಹೇಳಿದ್ದಾರೆ.

ಈ ಭಾಗದ ಜನರು ತಮ್ಮ ದೈನಂದಿನ ಕೆಲಸ ಕಾರ್ಯಗಳಿಗೆ ಚಿಕ್ಕಮಗಳೂರಿಗೆ ಬರಬೇಕಾಗಿದೆ. ಬಸ್ ಸ್ಥಗಿತಗೊಂಡಿದ್ದ–ರಿಂದ ತಮ್ಮ ಕೆಲಸ ಕಾರ್ಯಗಳು ವಿಳಂಬವಾಗುತ್ತಿವೆ. ತುರ್ತು ಸೇವೆಗಳಿಗಾಗಿ ಖಾಸಗಿ ವಾಹನಗಳಿಗೆ ಹೆಚ್ಚಿನ ಹಣ ವ್ಯಯಿಸಿ, ಬರಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಬೇಸರ ವ್ಯಕ್ತಪಡಿಸಿದ್ದಾರೆ.

ಕೆಎಸ್‌ಆರ್‌ಟಿಸಿ ವಿಭಾಗೀಯ ನಿಯಂತ್ರಣಾಧಿಕಾರಿಗಳಿಗೆ ನಮ್ಮ ಸಮಸ್ಯೆಗಳನ್ನು ಲಿಖಿತವಾಗಿ ಮನವಿ ಮಾಡಿಕೊಂಡರೂ ಸಹ ನಮ್ಮಗಳಿಗೆ ಸ್ಪಂದಿಸುತ್ತಿಲ್ಲ. ಬಸ್ ಎಫ್.ಸಿಗೆ ಹೋಗಿದೆ ಬರುವುದು ತುಂಬಾ ದಿನಗಳಾಗುತ್ತದೆ ಎಂದು ಸಬೂಬು ಹೇಳಿ ಕಳುಹಿಸುವುದು ಸಾಮಾನ್ಯವಾಗಿದೆ ಎಂದಿದ್ದಾರೆ.

ಜಿಲ್ಲಾಧಿಕಾರಿಗಳು ಈ ಕುಗ್ರಾಮಗಳ ಗ್ರಾಮಸ್ಥರ ಸಮಸ್ಯೆಯನ್ನು ಅರಿತು ಆದಷ್ಟು ಬೇಗ ಈ ಮೇಲಿನ ಗ್ರಾಮಗಳಿಗೆ ಕೆಎಸ್‌ಆರ್‌ಟಿಸಿ ಬಸ್ ಸಂಚಾರವನ್ನು ಆರಂಭಿಸಲು ಸಾರಿಗೆ ವಿಭಾಗೀಯ ನಿಯಂತ್ರಣಾಧಿಕಾರಿಗಳಿಗೆ ಸೂಚಿಸುವಂತೆ ಮನವಿ ಮಾಡಿದ್ದಾರೆ.

## ನಾಗೇಂದ್ರ ಕೆ.ವಿ ಅವರಿಗೆ ಪಿಹೆಚ್‌ಡಿ ಪದವಿ



**ಚಿಕ್ಕಮಗಳೂರು:** ನಗರ ಸಮೀಪದ ಶಾಂತಿನಗರ ನಿವಾಸಿ ನಾಗೇಂದ್ರ ಕೆ.ವಿ ಅವರು ಮಂಡಿಸಿದ ಸಂಶೋಧನಾ ಮಹಾ ಪ್ರಬಂಧಕ್ಕೆ ರಾಜಸ್ಥಾನದ ಸನ್ ರೈಸ್ ವಿಶ್ವವಿದ್ಯಾಲಯವು ಪಿ.ಹೆಚ್.ಡಿ ಪದವಿ ಪ್ರದಾನ ಮಾಡಿ ಗೌರವಿಸಿದೆ.

ಶಾಂತಿನಗರದ ವಾಸಪ್ಪ ನಾಯಕ ಮತ್ತು ಲಲಿತಮ್ಮ ದಂಪತಿಗಳ ಪುತ್ರರಾದ ನಾಗೇಂದ್ರ ಕೆ.ವಿ ಅವರು ಸನ್ ರೈಸ್ ವಿಶ್ವವಿದ್ಯಾಲಯದ ಪ್ರಾಧ್ಯಾಪಕರಾದ ಡಾ.ಬ್ರಜ್ ಮೋಹನ್ ಮೋರ್ಯಾ ಅವರ ಮಾರ್ಗದರ್ಶನದಲ್ಲಿ "ಂಓ ಂಓಂಐಜಖಖಖ ಔಈ ಖಔಐಇ ಔಈ ಈಖಇಇಆಔಓ ಒಔಗಿಇಒಇಓಖ ಖಓ ಓಔಖಖಿಊ ಏಂಖಓಂಖಿಂಏಂ ಈಖಔಓ 1800 ಖಿಔ 1947" ಎಂಬ ವಿಷಯದ ಮೇಲೆ ಸಂಶೋಧನಾ ಮಹಾ ಪ್ರಬಂಧವನ್ನು ಮಂಡಿಸಿದ್ದರು.

## ನಿಧನ ಸುದ್ದಿಗಳು

### ಶ್ರೀಮತಿ ನೀಲಮ್ಮ ನಿಧನ

**ದಾವಣಗೆರೆ:** ಎಸ್.ಎಸ್. ಬಡಾವಣೆ 'ಬಿ' ಬ್ಲಾಕ್ ನಿವಾಸಿ ಗೌಡ್ರ ಸಿದ್ದರಾಮಪ್ಪ ಅವರ ಧರ್ಮಪತ್ನಿಅವರು ದಿನಾಂಕ 21.04.2025ರ ಸೋಮವಾರ ರಾತ್ರಿ 11.45ಕ್ಕೆ ನಿಧನರಾದರೆಂದು ತಿಳಿಸಲು ವಿಷಾದಿಸುತ್ತೇವೆ. ಮೃತರಿಗೆ 65 ವರ್ಷ ವಯಸ್ಸಾಗಿತ್ತು. ಮೃತರು ಪತಿ, ಇಬ್ಬರು ಪುತ್ರರು, ಓರ್ವ ಪುತ್ರಿ, ಸೊಸೆಯಂದಿರು, ಮೊಮ್ಮಕ್ಕಳು ಹಾಗೂ ಅಪಾರ ಬಂಧುಗಳನ್ನು ಆಗಲಿದ್ದಾರೆ. ಮಂಗಳವಾರ ಮಧ್ಯಾಹ್ನ 12:00 ಗಂಟೆಯವರೆಗೆ ದಾವಣಗೆರೆಯ ಮೃತರ ಸ್ವಗೃಹದಲ್ಲಿ ಸಾರ್ವಜನಿಕರ ದರ್ಶನಕ್ಕಿಡಲಾಗಿತ್ತು. ತದನಂತರ ದೊಡ್ಡ ಬೂದಿಹಾಳ್ ಗ್ರಾಮದ ಮೃತರ ಸ್ವಗೃಹದಲ್ಲಿ ಅಂತಿಮ ದರ್ಶನಕ್ಕಿಡಲಾಗುವುದು. ಮೃತರ ಅಂತ್ಯಕ್ರಿಯೆಯನ್ನು ದಿನಾಂಕ 22.04.2025ರ ಮಂಗಳವಾರ ಮಧ್ಯಾಹ್ನ 2:00 ಗಂಟೆಗೆ ದಾವಣಗೆರೆ ತಾಲ್ಲೂಕು ದೇವರಹಟ್ಟಿಯ ಮೃತರ ತೋಟದಲ್ಲಿ ನೆರವೇರಿಸಲಾಯಿತು. ದುಃಖತಪ್ತ ಕುಟುಂಬ ವರ್ಗ ದೊಡ್ಡಬೂದಿಹಾಳ್ ಗೌಡ್ರ ವಂಶಸ್ಥರು . 98446–09069, 98446–43060

### ಎಲ್.ಎಂ. ವನಜಾಕ್ಷಮ್ಮ ನಿಧನ

**ದಾವಣಗೆರೆ:** ಎಂ.ಸಿ.ಸಿ ಬಿ.ಬಾಕ್ಲ್ 7ಮೇನ್ ವಾಸಿ ದಿ.ಎಲ್. ಎಂ.ನಿರಂಜನಮೂರ್ತಿ ಅವರ ಧರ್ಮಪತ್ನಿ ಶ್ರೀಮತಿ ಎಲ್. ಎಂ ವನಜಾಕ್ಷಮ್ಮ ಇವರು ದಿನಾಂಕ 21.04.2025 ರ ಸೋಮವಾರ ಸಂಜೆ 7 ಗಂಟೆಗೆ ನಿಧನರಾದರೆಂದು ತಿಳಿಸಲು ವಿಷಾದಿಸುತ್ತೇವೆ ಮೃತರಿಗೆ 79 ವರ್ಷ ವಯಸ್ಸಾಗಿತ್ತು. ಮಕ್ಕಳು, ಅಳಿಯಂದಿರು, ಸೊಸೆಯಂದಿರು, ಮೊಮ್ಮಕ್ಕಳು ಹಾಗೂ ಅಪಾರ ಬಂಧು–ಬಳಗವನ್ನು ಆಗಲಿರುವ ಮೃತರ ಪಾರ್ಥಿವ ಶರೀರವನ್ನು ದಿನಾಂಕ 22.04.2025ರ ಮಂಗಳವಾರ ಎಂ.ಸಿ.ಸಿ ಬಿಬಾಕ್ಲ್ 7ಮೇನ್ ದಾವಣಗೆರೆ ಮೃತರ ,ಸ್ವಗೃಹದಲ್ಲಿ ಮಧ್ಯಾಹ್ನ 12 ಗಂಟೆಯವರೆಗೆ ಅಂತಿಮ ದರ್ಶನಕ್ಕೆ ಇಡಲಾಗುವುದು. ನಂತರ ಸ್ವಗ್ರಾಮವಾದ ಲೋಕಿಕೆರೆಯಲ್ಲಿ ಮಧ್ಯಾಹ್ನ 2 ಗಂಟೆಗೆ ಅಂತ್ಯಕ್ರಿಯೆಯನ್ನು ನೆರವೇರಿಸಲಾಯಿತು.

# 50 ಕೋಟಿ ನಾಯಿ ಖರೀದಿಸಿದ್ದಾಗಿ ಹೇಳಿದ್ದ ಸತೀಶ್ ಗೆ ಇ.ಡಿ ಶಾಕ್

**ಬೆಂಗಳೂರು :** ಬರೋಬರಿ 50 ಕೋಟಿ ರೂಗಳಿಗೆ ವಿಶ್ವದಲ್ಲೇ ದುಬಾರಿಯಾಗಿರುವ ಸಿಂಹದಂತಿರುವ ಶ್ವಾನವನ್ನು ಖರೀದಿ ಮಾಡಿದ್ದೇನೆ ಎಂದು ಬೀಗುತ್ತಿದ್ದ ಶ್ವಾನ ಪ್ರೇಮಿ ಸತೀಶ್ ಮನೆ ಮೇಲೆ ಜಾರಿ ನಿರ್ದೇಶನಾಲಯದ ಅಧಿಕಾರಿಗಳು ದಾಳಿ ನಡೆಸಿದ್ದಾರೆ.

ಸತೀಶ್ ವಿರುದ್ಧ ಪ್ರಕರಣ ದಾಖಲಿಸಿಕೊಂಡಿದ್ದ ಇಡಿ ಅಧಿಕಾರಿಗಳು ಮನೆ ಮೇಲೆ ದಾಳಿ ನಡೆಸಿ ದಾಖಲೆ ಪರಿಶೀಲನೆ ನಡೆಸಿದ್ದಾರೆ. ಈ ವೇಳೆ ನಾಯಿಯ ಬೆಲೆ 50 ಕೋಟಿ ಎನ್ನುವುದು ಸುಳ್ಳು ಎಂಬುದು ಗೊತ್ತಾಗಿದೆ.

ಸದ್ಯ ಸ್ಥಳದಲ್ಲೇ ಬೀಡುಬಿಟ್ಟಿರುವ ಅಧಿಕಾರಿಗಳು ಪರಿಶೀಲನೆ ಮುಂದುವರಿಸಿದ್ದಾರೆ.

ಸತೀಶ್ 50 ಕೋಟಿ ರೂ. ಕೊಟ್ಟು ಶ್ವಾನವೊಂದನ್ನು ಖರೀದಿ ಮಾಡಿರುವಿದಾಗಿ ಹೇಳಿಕೊಂಡಿದ್ದರು. ಕಾಡು ತೋಳ ಮತತ್ತು ಕಕೇಶಿಯನ್ ಶೆಫರ್ಡ್ ತಳಿಯ ಮಿಶ್ರಣವಾಗಿರುವ ಇದನ್ನು ತೋಳನಾಯಿ ಎಂದೂ ಕರೆಯುತ್ತಾರೆ.

ನಗರದ ಶ್ವಾನಪ್ರಿಯ ಸತೀಶ್ ಹಲವು ಶ್ವಾನ ತಳಿ ಸಂಘಗಳನ್ನು ಮುನ್ನಡೆಸುತ್ತಿದ್ದಾರೆ. ಹಲವು ವರ್ಷಗಳ ಹಿಂದೆಯೇ ನಾಯಿ ಸಾಕುವುದನ್ನು ಬಿಟ್ಟಿದ್ದರೂ ಆಗಾಗ್ಗೆ ಅಪರೂಪದ ನಾಯಿಗಳೊಂದಿಗೆ ಪ್ರದರ್ಶನಕ್ಕೆ ಬರುತ್ತಿರುತ್ತಾರೆ. ಅಲ್ಲದೇ ಸತೀಶ್ ಯಾವುದೇ ಕಾರ್ಯಕ್ರಮಕ್ಕೆ ತಮ್ಮ ಅಪರೂಪದ ಶ್ವಾನದೊಂದಿಗೆ ಹೋದರೂ ಅದಕ್ಕೆ ನಿರ್ದಿಷ್ಟ ಮೊತ್ತವನ್ನು ಪಡೆಯುವುದಾಗಿ ಎಂದು ಈ ಹಿಂದೆ ಹೇಳಿಕೊಂಡಿದ್ದರು.

ಕಕೇಷ್ಯನ್ ಶೆಫರ್ಡ್: ಕ್ಯಾಡಾಬೊಮ್ಸ್ ಹೇಡರ್' ಹೆಸರಿನ ಕಕೇಷ್ಯನ್ ಶೆಫರ್ಡ್ ಶ್ವಾನವು ಬರೋಬ್ಬರಿ 100 ಕೆ.ಜಿ ತೂಕವಿದೆ. ನೋಡಲು ಸಿಂಹದಂತೆಯೇ ಕಾಣುವ ಈ ಶ್ವಾನದ ತಲೆಬುರುಡೆ ಗಾತ್ರವು 38 ಇಂಚುಗಳಿದ್ದು, ಭುಜಗಳು 34 ಇಂಚುಗಳಿವೆ. ಅಲ್ಲದೇ ಶ್ವಾನದ ಕಾಲುಗಳು 2 ಲೀಟರ್ ಜ್ಯೂಸ್ ಬಾಟಲಿ ಗಾತ್ರದಷ್ಟು ದೊಡ್ಡದಾಗಿದೆ. ಕ್ಯಾಸ್ಪಿಯನ್ ಮತ್ತು ಕಪ್ಪು ಸಮುದ್ರ ಮಧ್ಯೆ ಇರುವ ಕಕೇಷ್ಯಾ ಪ್ರಾಂತ್ಯದ ಬಳಿ ಇರುವ ಕಕೇಷಿಯನ್ ಶೆಫರ್ಡ್ ಶ್ವಾನವನ್ನು ಜಾನುವಾರುಗಳ ರಕ್ಷಣೆಗೆ ನೋಡಿಕೊಳ್ಳಲು ಸಾಕುತ್ತಾರೆ. ಈ ತಳಿಯ ಶ್ವಾನವು ಜಾರ್ಜಿಯಾ, ಅರ್ಮೇನಿಯಾ, ಅಜೆರ್ಬೈಜಾನ್, ಒಸ್ಸೆಟಿಯಾ, ಸರ್ಕಾಸಿಯಾ, ಟರ್ಕಿ, ರಷ್ಯಾ ಮತ್ತು ಡಾಗೆಸ್ತಾನ್ ದೇಶಗಳಲ್ಲಿ ಕಾಣಸಿಗುತ್ತವೆ.

# ಮೂಲಭೂತ ಸೌಕರ್ಯ ಒದಗಿಸುವಂತೆ ಆಗ್ರಹ

**ಚಿಕ್ಕಮಗಳೂರು :** ನಮ್ಮ ಕಾಫಿನಾಡಿನ ನಗರಸಭೆ ಉತ್ಕೃಷ್ಟ ದರ್ಜೆಗೆ ಏರಲು ಹೊರಡಲು ಹವಣಿಸುತ್ತಿದೆ ಆದರೆ ಇದರ ಮದ್ಯ ನಗರದ ವಾರ್ಡ್ ಸಂಖ್ಯೆ 4 ರ ವಸತಿ ಪ್ರದೇಶದಲ್ಲಿ ನಗರಸಭೆಯು ಕನಿಷ್ಠ ಮೂಲಭೂತ ಸೌಕರ್ಯಗಳನ್ನು ನೀಡಲು ವಿಫಲವಾಗಿ ಅಲ್ಲಿನ ನಿವಾಸಿಗಳು ಪ್ರತಿನಿತ್ಯ ಪರದಾಡುತ್ತ ನಗರಸಭೆಗೆ ಇಡಿಶಾಪ ಹಾಕುತ್ತಿದ್ದಾರೆ.

ನಗರದ ವಾರ್ಡ್ ಸಂಖ್ಯೆ 4ರ ಚೆನ್ನಾಪುರ ರಸ್ತೆಗೆ ತೆರಳುವ ಮಾರ್ಗದ ಎಡ ತಿರುವಿನಲ್ಲಿ ಸುಮಾರು 12 ಕುಟುಂಬಗಳು ಕಳೆದ ಹಲವು ವರ್ಷಗಳಿಂದ ವಾಸಿಸುತ್ತಿದ್ದರು ಈ ಮನೆಗಳಿಗೆ ನಗರಸಭೆಯು ಕನಿಷ್ಠ ಮೂಲಭೂತ ಸೌಕರ್ಯಗಳನ್ನು ಸಮರ್ಪಕವಾಗಿ ತಲುಪಿಸುವಲ್ಲಿ ವಿಫಲವಾಗಿದೆ.

ಈ ರಸ್ತೆಗೆ ಇದುವರೆಗೂ ಡಾಂಬರೀಕರಣದ ಸ್ಪರ್ಷವೇ ಆಗಿಲ್ಲ ಅಲ್ಲದೆ ಚರಂಡಿ ಮತ್ತು ಒಳಚರಂಡಿ ವ್ಯವಸ್ಥೆ ಇಲ್ಲದೆ ಇಲ್ಲಿನ ನಿವಾಸಿಗಳು ಪರಿತಪ್ಪಿಸುತ್ತಿರುವುದು ನಿಜಕ್ಕೂ ಶೋಚನೀಯವಾಗಿದೆ. ಇದ-ರಿಂದ ಸಾಂಕ್ರಾಮಿಕ ಖಾಯಿಲೆಗಳು ಹರಡುವ ಭೀತಿಯಲ್ಲಿ ಇಲ್ಲಿನ ನಿವಾಸಿಗಳು



ಬದುಕುತ್ತಿದ್ದು, ಈ ವ್ಯವಸ್ಥೆಯನ್ನು ಸರಿಪಡಿಸಿ ಸಾಮಾನ್ಯವಾಗಿ ನಗರದಲ್ಲಿ ವಾಸಿಸುವ ನಗರವಾಸಿಗಳಂತೆ ನಮ್ಮ ಬದುಕನ್ನು ನಡೆಸಲು ಅನುಕೂಲ ಮಾಡಿಕೊಡಿ ಎಂದು ಅಲ್ಲಿನ ನಿವಾಸಿಗಳ ಆಗ್ರಹವಾಗಿದೆ.

ಸುಮಾರು 12 ವರ್ಷಗಳಿಂದ ಮನೆ ಕಟ್ಟಿಕೊಂಡು ಅದರ ಜೊತೆಯಲ್ಲಿ ನಗರಸಭೆಗೆ ಸಲ್ಲಿಸಬೇಕಾದ ಸಮರ್ಪಕ ಆದಾಯವನ್ನು ಪಾವತಿ ಮಾಡುತ್ತಿರುವ ಇಲ್ಲಿನ ಹಲವು ಕುಟುಂಬಗಳ ಆಕ್ರಂದನ ನಿಜಕ್ಕೂ ಮುಗಿಲು ಮುಟ್ಟುವಂತಿದೆ, ಗ್ರಾಮೀಣ ಭಾಗಗಳಲ್ಲಿ ಈ ಅವ್ಯವಸ್ಥೆ ಸಾಮಾನ್ಯ ಆದರೆ ನಗರದಲ್ಲಿಯೂ ಈ ರೀತಿಯ ದುರಾವಸ್ಥೆ ಸಲ್ಲದು,

ಸರಿಯಾದ ಚರಂಡಿ ವ್ಯವಸ್ಥೆ ಇಲ್ಲದೆ ಮನೆಯ ಕೊಳಚೆ ನೀರು ಒಂದೆಡೆ ಶೇಖರಣೆಯಾಗುತ್ತಿದ್ದು ಇದರಿಂದ ಸೊಳ್ಳೆಗಳು ಉತ್ಪತ್ತಿಯಾಗಿ ಹಲವು ರೋಗ ರುಜಿನ ಹರಡುವ ಭೀತಿಯಲ್ಲಿ ಇಲ್ಲಿನ ವಾಸಿಗಳು ಪರಿ ತಪ್ಪಿಸುತ್ತಿದ್ದಾರೆ,

ಈ ರಸ್ತೆಯು ಕೇವಲ ಸರಿಸುಮಾರು 180 ಮೀಟರ್ ಉದ್ದದ ಮಾರ್ಗವಾಗಿದ್ದು ಈ ರಸ್ತೆಗೆ ಇದುವರೆಗೂ ಡಾಂಬರೀಕರಣವಾಗದೆ ವಾಹನಗಳು ಸ್ಥಳದಲ್ಲೇ ಜಕಮ್ ಆಗಿ ಸ್ಥಳೀಯ ನಿವಾಸಿಗಳ ಆಕ್ರೋಶಕ್ಕೆ ಕಾರಣವಾಗಿದೆ ಮತ್ತು ನಗರದ ಹಲವೆಡೆ ಕೇವಲ ಒಂದು ಮನೆ ಇರುವ ರಸ್ತೆಗಳಿಗೆ ಎಲ್ಲಾ ರೀತಿಯ ಮೂಲಭೂತ ವ್ಯವಸ್ಥೆ ನೀಡಲಾಗುತ್ತಿದ್ದು ಹಲವು ಕುಟುಂಬಗಳು ವಾಸಿಸುವ ಈ ರಸ್ತೆಗೆ ಚರಂಡಿ, ಒಳ ಚರಂಡಿ ವ್ಯವಸ್ಥೆ ಕಲ್ಪಿಸುವಂತೆ ನಗರಸಭೆಗೆ ಹಲವು ವರ್ಷಗಳಿಂದ ಮನವಿ ಸಲ್ಲಿಸಿದರು ನಮ್ಮ ಈ ರಸ್ತೆಯ ಅಭಿವೃದ್ಧಿಗೆ ತಾರತಮ್ಯ ಧೋರಣೆ ಮಾಡಲಾಗುತ್ತಿದೆ ಎಂದು ಅಲ್ಲಿನ ಸ್ಥಳೀಯರು ಆರೋಪಿಸುತ್ತಿದ್ದಾರೆ.

ಇಲ್ಲಿನ ಒಳಚರಂಡಿ ವ್ಯವಸ್ಥೆ ಸಂಪೂರ್ಣ ಮರೀಚಿಕೆಯಾಗಿದ್ದು ಅಂಧಕಾಲದ ವ್ಯವಸ್ಥೆಯಲ್ಲಿಯೇ ಇಲ್ಲಿನ ನಿವಾಸಿಗಳು ಬದುಕುವ ದುಸ್ಥಿತಿಗೆ ಬಂದಿದ್ದು ಕೂಡಲೇ ನಗರಸಭೆಯು ನಮ್ಮ ರಸ್ತೆಯನ್ನು ಪುನಃಪರಿಶೀಲಿಸಿ ನಮಗೆ ಬೇಕಾದಂತಹ ಮೂಲಭೂತ ಸೌಕರ್ಯಗಳನ್ನು ನೀಡಬೇಕು ಎಂದು ಆಗ್ರಹ ಮಾಡಿದ್ದಾರೆ,

# ದಾಂಡೇಲಿಯಲ್ಲಿ ನಕಲಿ ನೋಟು ಪತ್ತೆ: ಉತ್ತರಪ್ರದೇಶದಲ್ಲಿ ಆರೋಪಿ ಬಂಧನ

**ಬೆಂಗಳೂರು :** ಉತ್ತರ ಕನ್ನಡ ಜಿಲ್ಲೆಯ ದಾಂಡೇಲಿಯ ಗಾಂಧಿನಗರ ಬಡಾವಣೆಯ ಮನೆಯೊಂದರಲ್ಲಿ ಕಂತೆ ಕಂತೆ ನಕಲಿ ಕರೆನ್ಸಿ ನೋಟುಗಳು ಪತ್ತೆಯಾದ ಪ್ರಕರಣ ಸಂಬಂಧ ಆರೋಪಿಯನ್ನು ಪತ್ತೆ ಹಚ್ಚಿ ಬಂಧಿಸುವಲ್ಲಿ ಕೊನೆಗೂ ಪೊಲೀಸರು ಯಶಸ್ವಿಯಾಗಿದ್ದಾರೆ.

ಗೋವಾ,ಹೈದರಾಬಾದ್ ಎಂದು ಪೊಲೀಸರನ್ನು ಯಾಮಾರಿಸಿದ್ದ ಆರೋಪಿ ಅರ್ಷದ್ ಅಂಜುಂ ಖಾನ್‌ನನ್ನು ಉತ್ತರ ಪ್ರದೇಶದ ಲಖನೌನಲ್ಲಿ ಬಂಧಿಸಿ ನಗರಕ್ಕೆ ಕರೆತಂದಿರುವ ಪೊಲೀಸರು ವಿಚಾರಣೆ ನಡೆಸುತ್ತಿದ್ದಾರೆ.

ಮನೆಯಲ್ಲಿ ನಕಲಿ ನೋಟುಗಳ ಪತ್ತೆಯಾದ 10 ದಿನಗಳ ಬಳಿಕ ಆರೋಪಿ ಪೊಲೀಸರ ಬಲೆಗೆ ಬಿದ್ದಿದ್ದಾನೆ. ಆರಂಭದಲ್ಲಿ, ನಕಲಿ ನೋಟಿನ ಕಂತೆಗಳ ಮೇಲೆ, 'ಮೂವಿ ಪರ್ಪಸ್ ಓನ್ಲಿ' ಎಂದು ಬರೆದಿದ್ದರಿಂದ ಪೊಲೀಸರು ಸುಮ್ಮನಾಗಿದ್ದರು. ಆದರೆ ಆರೋಪಿ ಹೈದರಾಬಾದ್‌ನಲ್ಲಿದ್ದೇನೆ, ಗೋವಾದಲ್ಲಿದ್ದೇನೆ ಎಂದು ಯಾಮಾರಿಸಿದ್ದರಿಂದ ಅನುಮಾನ ಹೆಚ್ಚಾಗಿತ್ತು.

ನಂತರ ಆರೋಪಿಯ ಮೊಬೈಲ್ ಟವರ್ ಲೊಕೇಶನ್ ಹಾಗೂ ತಾಂತ್ರಿಕ ಸಹಾಯದ ಮೂಲಕ ಆತನನ್ನು ಪೊಲೀಸರು ಯಶಸ್ವಿಯಾಗಿದ್ದಾರೆ.

ಆರೋಪಿಯನ್ನು ಸದ್ಯ ದಾಂಡೇಲಿ ನ್ಯಾಯಾಲಯಕ್ಕೆ ಹಾಜರುಪಡಿಸಿ, ಹೆಚ್ಚಿನ ವಿಚಾರಣೆಗಾಗಿ ವಶಕ್ಕೆ ನೀಡುವಂತೆ ಪೊಲೀಸರು ಮನವಿ ಮಾಡಿದ್ದು, ಇದಕ್ಕೆ ನ್ಯಾಯಾಲಯ ಸಮ್ಮತಿ ಸೂಚಿಸಿದೆ. ಸದ್ಯ ಪೊಲೀಸ್ ಕಸ್ಟಡಿಯಲ್ಲಿರುವ ಆರೋಪಿಯ ವಿಚಾರಣೆ ತೀವ್ರಗೊಳಿಸಲಾಗಿದ್ದು, ನಕಲಿ ನೋಟಿನ ಹಿಂದಿನ ಅಸಲಿ ಕಾರಣ ತಿಳಿಯಬೇಕಿದೆ.

ಪ್ರಕರಣದ ಹಿನ್ನೆಲೆ:

ಗಾಂಧಿನಗರದ ನೂರಜಾನ್ ಜುಂಜುವಾಡ್ಕರ ಎಂಬವವರ ಮನೆಯಲ್ಲಿ ಅರ್ಷದ್ ಬಾಡಿಗೆಗೆ ವಾಸವಾಗಿದ್ದ. ಕಳೆದ ಒಂದು ತಿಂಗಳಿನಿಂದ ಈತ ಆ ಮನೆಯಲ್ಲಿ ಇಲ್ಲದೇ ಇರುವುದನ್ನು ಗಮನಿಸಿ ಮತ್ತು ಆ ಮನೆಯ ಹಿಂಬದಿಯ ಬಾಗಿಲ ಚಿಲಕ ಸರಿ ಹಾಕದೇ ಇರುವುದನ್ನು ತಿಳಿದು, ಪೊಲೀಸರಿಗೆ ಸ್ಥಳೀಯರು ಮಾಹಿತಿ ನೀಡಿದ್ದರು. ದಾಂಡೇಲಿ ನಗರ ಠಾಣೆಯ ಪೊಲೀಸರು ಮನೆಗೆ ಬಂದು ಬಾಗಿಲು ತೆರೆಯುತ್ತಿದ್ದಂತೆಯೇ, 500 ರೂ. ಮುಖ ಬೆಲೆಯ ಕಂತೆ ಕಂತೆ ನೋಟುಗಳು ಕಾಣಿಸಿದ್ದವು

ಸುಮಾರು 14 ಕೋಟಿ ರೂ ಗೂ ಹೆಚ್ಚು ಮುಖಬೆಲೆಯ ನಕಲಿ ನೋಟುಗಳು ಕಾಣಿಸಿದ್ದವು. ಅವುಗಳ ಬಂಡಲ್ ಮೇಲೆ 'ಮೂವಿ ಪರ್ಪಸ್ ಓನ್ಲಿ' ಎಂದು ಬರೆದಿತ್ತು. ನಂತರ ಅರ್ಷದ್ಗೆ ಕರೆ ಮಾಡಿ ಪೊಲೀಸರು ವಿಚಾರಿಸಿದ್ದರು. ಆಗ ಆತ, ಗೋವಾದಲ್ಲಿ ಇದ್ದು ಬರುವುದಾಗಿ ಮಾಹಿತಿ ನೀಡಿದ್ದ. ಆದರೆ, ಆತ ಯಾಮಾರಿಸುತ್ತಿದ್ದಾನೆ ಎಂಬುದು ಅರಿವಾದ ಕೂಡಲೇ ಪೊಲೀಸರು ಮೊಬೈಲ್ ಟವರ್ ಲೊಕೇಶನ್ ಟ್ರೇಸ್ ಮಾಡಿದ್ದಾರೆ. ಆಗ ಆರೋಪಿ ಲಖನೌನಲ್ಲಿರುವುದು ಗೊತ್ತಾಗಿದ್ದು, ಬಂಧನಕ್ಕೆ ಕ್ರಮ ಕೈಗೊಂಡಿದ್ದಾರೆ.

# ರಾಷ್ಟ್ರೀಯ ಪಕ್ಷಗಳು ಅಂಬೇಡ್ಕರ್ ಕನಸನ್ನು ನೂಚ್ಚುನೂರು ಮಾಡಿದವು : ಝೂಕೀರ್



**ಚಿಕ್ಕಮಗಳೂರು:** ದೇಶವನ್ನಾಳಿದ ರಾಷ್ಟ್ರೀಯ ಪಕ್ಷಗಳು ಬಿ.ಆರ್.ಅಂಬೇಡ್ಕರ್ ಕನಸನ್ನು ನುಚ್ಚುನೂರು ಮಾಡಿದವು. ಪ್ರತಿಯೊಂದು ಹೆಜ್ಜೆಯಲ್ಲೂ ಅವಮಾನಿಸುವ ಜೊತೆಗೆ ಪರಿಶಿಷ್ಟರನ್ನು ಷಡ್ಯಂತ್ರದಿಂದ ಎತ್ತಿಕಟ್ಟಿ ಮೋಸದ ರಾಜಕಾರಣ ಮಾಡಿದ್ದಾರೆ ಎಂದು ಬಿ.ಎಸ್.ಪಿ. ರಾಜ್ಯ ಉಪಾಧ್ಯಕ್ಷ ಝೂಕೀರ್ ಹುಸೇನ್ ಹೇಳಿದರು.

ನಗರದ ಅಂಬೇಡ್ಕರ್ ಸಮುದಾಯ ಭವನದಲ್ಲಿ ಬಹುಜನ ಸಮಾಜ ಪಾರ್ಟಿ ಇಂದು ಆಯೋಜಿಸಿದ್ದ ಬಾಬಾ ಸಾಹೇಬ್ ಡಾ.ಬಿ.ಆರ್.ಅಂಬೇಡ್ಕರ್ 134ನೇ ಜಯಂತಿ ಹಾಗೂ ಬಿ.ಎಸ್.ಪಿ. ಸಂಸ್ಥಾಪನಾ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಭಾರತಕ್ಕೆ ಸ್ವಾತಂತ್ರ್ಯ ಬಂದು ಏಳು ದಶಕ ಪೂರೈಸಿದ ಮೇಲೆ ಕಾಂಗ್ರೆಸ್ ಸಂವಿಧಾನ ಹಾಗೂ ಅಂಬೇಡ್ಕರನ್ನು ಅಪ್ಪಿಕೊಳ್ಳುತ್ತಿದೆ. ಬಿಜೆಪಿ ಕೇವಲ ಟೀಕೆ ಟಿಪ್ಪಣಿಗಳಿಗೆ ಸೀಮಿತವಾಗಿದೆ. ಆದರೆ ಬಿಎಸ್ಪಿ ಸಂಸ್ಥಾಪಕ ಕಾನ್ಸಿರಾಮ್ ದೇಶಾದ್ಯಂತ ಸಂಚರಿಸಿ ಪಕ್ಷ ಸದೃಢಗೊಳಿಸಿ ಅಂಬೇಡ್ಕರ್ ತತ್ವ, ಸಿದ್ಧಾಂತಗಳನ್ನು ಬಿತ್ತುವ ಕೆಲಸ ಮಾಡಿದರು ಎಂದರು.

ಜಾತಿ-ತಾರತಮ್ಯ, ಮೇಲು-ಕೀಳು ಎಂಬ ಮನೋರೋಗಕ್ಕೆ ಅಂಬೇಡ್ಕರ್ ಸಂವಿಧಾನದಡಿ ಮದ್ದನ್ನು ಕೊಟ್ಟವರು. ಬಡವ, ಶ್ರೀಮಂತ ಎಂಬ ಬೇಧ-ಭಾವ ದೂರಾಗಿಸಿ, ಮನುಷ್ಯ ಧರ್ಮದ ಮಾನವೀಯ ಮೌಲ್ಯಗಳನ್ನು ಉಣಬಡಿಸಿದವರು. ಹೀಗಾಗಿಯೇ ವಿಶ್ವಾದ್ಯಂತ ಅಂಬೇಡ್ಕರ್‌ಗೆ ಅತಿಹೆಚ್ಚು ಮನ್ನಣೆ ದಕ್ಕಲು ಕಾರಣವಾಗಿದೆ ಎಂದು ಹೇಳಿದರು.

ಬಿ.ಆರ್.ಅಂಬೇಡ್ಕರ್ ಚಿಂತನೆಗಳು ಜನತೆಗೆ ತಲುಪಿಸಲು ಕ್ರಾಂತಿಕಾರಿ ಚಳುವಳಿ ಮತ್ತು ದೇಶಾದ್ಯಂತ ಕಾನ್ಸಿರಾಮ್ ಸಂಚರಿಸಿ ಜೀವನಚರಿತ್ರೆ ತೆರೆದಿಟ್ಟರು. ಅಧಿಕಾರದಿಂದ ಮಾತ್ರ ಬಹುಸಂಖ್ಯಾತರ ಏಳಿಗೆ ವೃದ್ಧಿಯಾಗಲಿದೆ ಎಂದು ಬಿಎಸ್ಪಿ ಪಕ್ಷವನ್ನು ಸ್ಥಾಪಿಸಿ, ಸಂಘಟಿಸಿ ಉತ್ತರ ಪ್ರದೇಶದ ಅಧಿಕಾರದ ಚುಕ್ಕಾಣಿ ಹಿಡಿದು ಭೂರಹಿತರು, ಅಲ್ಪಸಂಖ್ಯಾತರಿಗೆ ನೆರವಾದರು ಎಂದರು.

ಪ್ರಾಸ್ತಾವಿಕವಾಗಿ ಮಾತನಾಡಿದ ಬಿಎಸ್ಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಕೆ.ಟಿ.ರಾಧಾಕೃಷ್ಣ ಮನುವಾದಿಗಳು ರಾಮ, ರಾಮ ಎಂದರೆ. ನಮ್ಮ ಕಾರ್ಯಕರ್ತರು ಕಾನ್ಸಿರಾಮ ನಾಮಜಪಿಸಬೇಕು. ನೌಕರಿ, ಕುಟುಂಬ, ಐಶರಾಮಿ ಜೀವನ ತ್ಯಜಿಸಿ, ಶೋಷಿತರ ಪರವಾಗಿ ನಿಂತ ಕಾನ್ಸಿರಾಮ್ ಅತಿದೊಡ್ಡ ರಾಜಕೀಯ ಆಂದೋಲನಕ್ಕೆ ಕಾರಣೀಭೂತರು ಎಂದು ತಿಳಿಸಿದರು.


ಅಂಬೇಡ್ಕರ್ ಸಿದ್ಧಾಂತ, ಬುದ್ಧನ ಅಶೋತ್ತರಗಳನ್ನು ಸಾಕಾರಗೊಳಿಸುವಲ್ಲಿ ಪ್ರಮುಖ ಪಾತ್ರ ಕಾನ್ಸಿರಾಮ್ ವಹಿಸಿದ್ದರು. ಪ್ರತಿ ಹೆಜ್ಜೆಯಲ್ಲೂ ಅಂಬೇಡ್ಕರ್ ಕನಸನ್ನು ಈಡೇರಿಸುವುದೇ ದೊಡ್ಡಗುರಿಯಾಗಿತ್ತು. ಮತ ನಮ್ಮದು, ಅಧಿಕಾರ ನಿಮ್ಮದು ಎಂಬುದರ ವಿರುದ್ಧ ಸಿಡಿದೆದ್ದು, ಮತ ನಮ್ಮದು, ಅಧಿಕಾರವು ನಮ್ಮದು ಎಂಬ ಧ್ಯೇಯವನ್ನು ಜನತೆಗೆ ಮುಟ್ಟಿಸಿದ ಕೀರ್ತಿ ಅವರಿಗೆ ಸಲ್ಲುತ್ತದೆ ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಬಿಎಸ್ಪಿ ಜಿಲ್ಲಾಧ್ಯಕ್ಷ ಪಿ.ಪರಮೇಶ್ವರ್ ದೇಶದಲ್ಲಿ ಜೆಡಿಎಸ್, ಸಮಾಜವಾದಿ, ತೃಣಮೂಲ ಕಾಂಗ್ರೆಸ್, ಡಿಎಂಕೆ ಪ್ರಾದೇಶಿಕ ಪಕ್ಷಗಳು ಆಯಾ ರಾಜ್ಯಕ್ಕೆ ಸೀಮಿತವಾಗಿವೆ. ಆದರೆ ಏಕಮಾತ್ರ ಪಕ್ಷ ಬಿಎಸ್ಪಿ ಪ್ರಾದೇಶಿಕವಾಗಿ ಉಗಮಿಸಿ, ದೇಶವ್ಯಾಪಿ ಹಬ್ಬಿಕೊಂಡು ಮೂರನೇ ಅತಿದೊಡ್ಡ ರಾಷ್ಟ್ರೀಯ ಪಕ್ಷವಾಗಿ ಬೆಳೆಯಲು ಕಾನ್ಸಿರಾಮ್ ಸಂಘಟನೆಯೇ ಕಾರಣ ಎಂದರು.

ರಾಜ್ಯದಲ್ಲಿ ಬಿಎಸ್ಪಿ ಅಧಿಕಾರ ಗಳಿಸಲು ಸರ್ವರ ಸಹಕಾರ ಅತ್ಯಗತ್ಯ. ವಿಶೇಷವಾಗಿ ದಸಂಸ ಸಂಘಟನೆಗಳು ಪ್ರಮುಖ ಪಾತ್ರವಹಿಸುತ್ತವೆ, ಹೀಗಾಗಿ ಅಂಬೇಡ್ಕರ್ ಸಂಪೂರ್ಣ ಚಿಂತನೆಗಳಡಿ ರಾಜಕಾರಣ ಮಾಡುತ್ತಿರುವ ಬಿಎಸ್ಪಿ ಪಕ್ಷವನ್ನು ಮುಂಬರುವ ಚುನಾವಣೆಗಳಲ್ಲಿ ಕೈಬಲಪಡಿಸಬೇಕು ಎಂದು ಮನವಿ ಮಾಡಿದರು.

ಕಾರ್ಯಕ್ರಮಕ್ಕೂ ಮುನ್ನ ಪಕ್ಷದ ನೂರಾರು ಕಾರ್ಯಕರ್ತರು ತಾಲ್ಲೂಕು ಕಚೇರಿಯಿಂದ ಅಂಬೇಡ್ಕರ್ ಭವನದವರೆಗೆ ಮೆರವಣಿಗೆ ಜಾಥಾ ನಡೆಸಿದರು.

# ಸಾಧಕರಿಗೆ ಕಾಂಗ್ರೆಸ್ ಕಚೇರಿಯಲ್ಲಿ ಗೌರವ



**ಚಿಕ್ಕಮಗಳೂರು:** ಇತ್ತೀಚೆಗೆ ಬಿಹಾರ ಹಾಗೂ ಉತ್ತರಖಂಡ್ ರಾಜ್ಯದಲ್ಲಿ ನಡೆದ ರಾಷ್ಟ್ರಮಟ್ಟದ ಮಹಿಳಾ ಕಬ್ಬಡ್ಡಿ ಪಂದ್ಯಾವಳಿಯಲ್ಲಿ ಭಾಗವಹಿಸಿ ಗೆಲುವು ಸಾಧಿಸಿದ ಗೌಡನಹಳ್ಳಿ ಗ್ರಾಮದ ಜಿ.ಕೆ. ಅನುಷಾ ಹಾಗೂ ಟೌನ್ ಕೋ-ಆಪರೇಟಿವ್ ಸೊಸೈಟಿಗೆ ನೂತನ ನಿರ್ದೇಶಕರಾಗಿ ಆಯ್ಕೆಯಾದ ಯೋಗೀಶ್ ಅವರಿಗೆ ನಗರದ ಕಾಂಗ್ರೆಸ್ ಕಚೇರಿಯಲ್ಲಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಕೆಪಿಸಿಸಿ ಪ್ರಧಾನ ಕಾರ್ಯದರ್ಶಿಗಳಾದ ಡಾ. ಡಿ.ಎಲ್.ವಿಜಯ್‌ಕುಮಾರ್, ರೇಖಾ ಹುಲಿಯಪ್ಪಗೌಡ, ಗ್ಯಾರಂಟಿ ಪ್ರಾಧಿಕಾರದ ಜಿಲ್ಲಾಧ್ಯಕ್ಷ ಎಂ.ಸಿ.ಶಿವಾನಂದಸ್ವಾಮಿ, ಮುಖಂಡರುಗಳಾದ ಬಿ.ಹೆಚ್. ಹರೀಶ್, ಉಪ್ಪಳ್ಳಿ ಕೆ.ಭರತ್, ಹೆಚ್.ಪಿ.ಮಂಜೇಗೌಡ, ಬಿ.ಎಂ.ಸಂದೀಪ್, ಮಲ್ಲೇಶಸ್ವಾಮಿ, ಕುಸುಮ ಭರತ್, ತನೋಜ್‌ನಾಯ್ಡು ಮತ್ತಿತರರು ಹಾಜರಿದ್ದರು.

## ಮುಸುಲ್ಮಾನರಿಗೆ ಶೇಕಡ 4 ರಷ್ಟು ಮೀಸಲಾತಿ : ರಾಷ್ಟ್ರಪತಿಗೆ ಮಸೂದೆ ಕಳಿಸಿದ ರಾಜ್ಯಪಾಲರು

**ಬೆಂಗಳೂರು :** ಕಾಮಗಾರಿಗಳ ಗುತ್ತಿಗೆಯಲ್ಲಿ ಶೇಕಡ 4ರಷ್ಟು ಮೀಸಲಾತಿ ಕಲ್ಪಿಸುವ ರಾಜ್ಯ ಸರ್ಕಾರದ ತೀರ್ಮಾನಕ್ಕೆ ತಕರಾರು ಎತ್ತಿರುವ ರಾಜ್ಯಪಾಲ ಥಾವರಚಂದ್ ಗೆಹಲೋತ್ ಅವರು, ತಿದ್ದುಪಡಿ ಮಸೂದೆಗೆ ಅಂಕಿತ ಹಾಕಲು ನಿರಾಕರಿಸಿದ್ದು ಅದನ್ನು ರಾಷ್ಟ್ರಪತಿಗಳಿಗೆ ರವಾನಿಸಿದ್ದಾರೆ.


ಈ ತಿದ್ದುಪಡಿ ಮಸೂದೆಯಲ್ಲಿ ಸಾಂವಿಧಾನಿಕ ತೊಡಕು ಮತ್ತು ನಿರ್ಬಂಧಗಳಿರುವುದರಿಂದ ಪ್ರಸ್ತಾಪಿತ ಮಸೂದೆಗೆ ಅಂಕಿತ ಹಾಕುವ ಬದಲು, ರಾಷ್ಟ್ರಪತಿಯ ಪರಿಶೀಲನೆಗೆ ಬಿಡುವುದು ಸೂಕ್ತವೆಂದು ಭಾವಿಸಿದ್ದೇನೆ' ಎಂದು ರಾಜ್ಯಪಾಲರು ರಾಜ್ಯ ಸರ್ಕಾರಕ್ಕೆ ಮಾಹಿತಿ ನೀಡಿದ್ದಾರೆ.

ಈ ಕುರಿತಂತೆ ಸರ್ಕಾರಕ್ಕೆ ಪತ್ರವನ್ನು ರವಾನಿಸಿರುವ ಅವರು, ರಾಜ್ಯ ಸರ್ಕಾರವು 1994 ಸೆ. 17ರ ಅಧಿಸೂಚನೆಯ ಪ್ರಕಾರ ಮುಸ್ಲಿಂ ಸಮುದಾಯವನ್ನು 2ಬಿ ಪ್ರವರ್ಗದಡಿ ಹಿಂದುಳಿದ ವರ್ಗವೆಂದು ಗುರುತಿಸಿ, ಶಿಕ್ಷಣ ಮತ್ತು ಉದ್ಯೋಗದಲ್ಲಿ ಮೀಸಲಾತಿ ನೀಡಲಾಗಿದೆ. ಪ್ರವರ್ಗ 1ರಲ್ಲಿ 95 ಜಾತಿಗಳು, 2ಎಯಲ್ಲಿ 102, 2ಬಿಯಲ್ಲಿ 1, 3ಎಯಲ್ಲಿ 3 ಮತ್ತು 3ಬಿಯಲ್ಲಿ 6 ಜಾತಿಗಳಿವೆ. ಈ ಹಿಂದಿನ ರಾಜ್ಯ ಸರ್ಕಾರವು 2023ರ ಮಾರ್ಚ್ 27ರ ಆದೇಶದಲ್ಲಿ ಪ್ರವರ್ಗ 2ಬಿಗೆ ನೀಡಿದ್ದ ಶೇ 4 ಮೀಸಲಾತಿ ವಾಪಸ್ ಪಡೆದಿದೆ.

# ಏ.26 ಹೊಸದುರ್ಗದಲ್ಲಿ ಪುಷ್ಪಗಿರಿ ಮಹಿಳಾ ಸ್ವ-ಸಹಾಯ ಸಂಘಗಳ ಸಮಾವೇಶ

**ತರೀಕೆರೆ:** ಶ್ರೀ ಕ್ಷೇತ್ರ ಪುಷ್ಪಗಿರಿ ಗ್ರಾಮೀಣಾಭಿವೃದ್ಧಿ ಸಂಸ್ಥೆ, ಶ್ರೀಮಠ ಪುಷ್ಪಗಿರಿ ಹಳೇಬೀಡು ವತಿಯಿಂದ ಏಪ್ರಿಲ್ 26 ರಂದು ಮಧ್ಯಾಹ್ನ 3 ಗಂಟೆಗೆ ಹೊಸದುರ್ಗದ ಶ್ರೀ ಸಿದ್ದರಾಮೇಶ್ವರ ಸಮುದಾಯ ಭವನದಲ್ಲಿ ಸೋಮಶೇಖರ ಶಿವಾಚಾರ್ಯ ಸ್ವಾಮಿಗಳ ದಿವ್ಯ ಸಾನಿಧ್ಯದಲ್ಲಿ ಪುಷ್ಪಗಿರಿ ಮಹಿಳಾ ಸ್ವ-ಸಹಾಯ ಸಂಘಗಳ ಸಮಾವೇಶ ಮತ್ತು ಸಾಂಸ್ಕೃತಿಕ ಉತ್ಸವ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ ಎಂದು ಸೋಮಶೇಖರ ಶಿವಾಚಾರ್ಯ ಸ್ವಾಮಿ ತಿಳಿಸಿದ್ದಾರೆ.

ಅವರು ಪಟ್ಟಣದ ಶ್ರೀ ಬೂದಿ ಬಸವೇಶ್ವರ ದೇವಸ್ಥಾನದಲ್ಲಿ ಹಮ್ಮಿಕೊಳ್ಳಲಾಗಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದರು.



ಶ್ರೀ ಕ್ಷೇತ್ರ ಪುಷ್ಪಗಿರಿ ಮಹಾ ಸಂಸ್ಥಾನವು ಸುಂದರ ಪ್ರವಾಸಿ ತಾಣವಾಗಿ ಬೆಳೆದಿದೆ. ಸಾಂಸ್ಕೃತಿಕ, ಶೈಕ್ಷಣಿಕ ಮತ್ತು ಧಾರ್ಮಿಕ ಕಾರ್ಯಕ್ರಮಗಳ ಮೂಲಕ ಮುನ್ನೆಡೆಗೆ ಬಂದಿದೆ. 2020 ರಲ್ಲಿ ಶ್ರೀ ಕ್ಷೇತ್ರ ಪುಷ್ಪಗಿರಿ ಗ್ರಾಮೀಣಾಭಿವೃದ್ಧಿ ಸಂಸ್ಥೆಯನ್ನು ಸ್ಥಾಪಿಸಲಾಗಿದೆ. 12 ಜಿಲ್ಲೆಗಳಲ್ಲಿ ಸ್ವ-ಸಹಾಯ ಸಂಘಗಳನ್ನು ಸ್ಥಾಪಿಸಲಾಗಿದ್ದು, ಧಾರ್ಮಿಕ, ಶೈಕ್ಷಣಿಕ ಮತ್ತು ಸಾಮಾಜಿಕವಾಗಿ ಮಹಿಳೆಯರು ಮುನ್ನೆಲೆಗೆ ಬರಬೇಕು. ಸಂಘದ ಸದಸ್ಯರಿಗೆ ಸ್ವಯಂ ಉದ್ಯೋಗದ ಬಗ್ಗೆ ಮತ್ತು ಮಹಿಳೆಯರು ಸ್ವಾವಲಂಬಿಗಳಾಗಲು ತರಬೇತಿ ನೀಡಲಾಗುತ್ತಿದೆ ಎಂದರು.

ಗ್ರಾಮಗಳಲ್ಲಿ ಯುವಕರನ್ನು ಗುರುತಿಸಿ ಕೃಷಿಯನ್ನು ಉತ್ತೇಜಿಸಲು ಹತ್ತುಜನ ಯುವ ರೈತರನ್ನು ಒಗ್ಗೂಡಿಸಿ, ಕಾಲ ಕಾಲಕ್ಕೆ ಸೂಕ್ತ ಮಾರ್ಗದರ್ಶನ ಮತ್ತು ತರಬೇತಿಯನ್ನು ನೀಡಿ, ಅವರನ್ನು ಸಮಾಜದ ಮುನ್ನೆಡೆಗೆ ತರಲಾಗುವುದು. ಜಾತಿ ಧರ್ಮಕ್ಕೆ ಸೀಮಿತವಾಗದೆ ನಿರಂತರವಾಗಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದರು.

ಪುಷ್ಪಗಿರಿ ಮಹಿಳಾ ಸ್ವ-ಸಹಾಯ ಸಂಘಗಳ ಸಮಾವೇಶದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಹಾಗೂ ಮಾಜಿ ಮುಖ್ಯಮಂತ್ರಿ, ಸಚಿವರು, ಸಂಸದರು, ಶಾಸಕರು, ಚಲನಚಿತ್ರ ನಟರು, ಮತ್ತಿತರರು ಭಾಗವಹಿಸಲಿದ್ದಾರೆ.

# ವಕ್ಫ್ ನೇಮಕಾತಿಗೆ ತಡೆ; ಮುಂದಿನ ವಿಚಾರಣೆಯವರೆಗೆ ಯಥಾಸ್ಥಿತಿ ಕಾಪಾಡಿ: ಸುಪ್ರೀಂ ಕೋರ್ಟ್ ಆದೇಶ

**ನವದೆಹಲಿ:** ಮುಂದಿನ ವಿಚಾರಣೆಯವರೆಗೆ ವಕ್ಫ್ ಮಂಡಳಿಗೆ ಮುಸ್ಲಿಮೇತರರನ್ನು ನೇಮಕ ಮಾಡುವಂತಿಲ್ಲ ಮತ್ತು ವಕ್ಫ್ ಕಾಯ್ದೆ ವಿಚಾರದಲ್ಲಿ ಯಥಾಸ್ಥಿತಿ ಕಾಪಾಡುವಂತೆ ಸುಪ್ರೀಂ ಕೋರ್ಟ್ ಗುರುವಾರ ಆದೇಶ ನೀಡಿದೆ.

ವಕ್ಫ್ (ತಿದ್ದುಪಡಿ) ಕಾಯ್ದೆ 2025ರ ಸಾಂವಿಧಾನಿಕ ಸಿಂಧುತ್ವ ಪ್ರಶ್ನಿಸಿ ಸಲ್ಲಿಸಿರುವ ಹಲವು ಅರ್ಜಿಗಳ ವಿಚಾರಣೆಯನ್ನು ಸುಪ್ರೀಂ ಕೋರ್ಟ್ ಬುಧವಾರ ಪ್ರಾರಂಭಿಸಿದೆ.

ಇಂದು ಸಹ ವಿಚಾರಣೆ ಮುಂದುವರೆಸಿದ ಮುಖ್ಯ ನ್ಯಾಯಮೂರ್ತಿ ಸಂಜೀವ್ ಖನ್ನಾ ಮತ್ತು ನ್ಯಾಯಮೂರ್ತಿಗಳಾದ ಸಂಜಯ್



ಕುಮಾರ್ ಹಾಗೂ ಕೆ.ವಿ. ವಿಶ್ವನಾಥನ್ ಅವರನ್ನೊಳಗೊಂಡ ತ್ರಿಸದಸ್ಯ ಪೀಠ, ಸಿಂಧುತ್ವ ಪ್ರಶ್ನಿಸಿದ ಅರ್ಜಿಗಳಿಗೆ ಪ್ರತಿಕ್ರಿಯಿಸಲು ಕೇಂದ್ರ ಸರ್ಕಾರಕ್ಕೆ 7 ದಿನಗಳ ಕಾಲಾವಕಾಶ ನೀಡಿದೆ.

"ಇಷ್ಟು ಅರ್ಜಿಗಳನ್ನು ನಿಭಾಯಿಸುವುದು ಅಸಾಧ್ಯ. ಕೇವಲ 5 ಅರ್ಜಿಗಳನ್ನು ಮಾತ್ರ ಆಲಿಸಲಾಗುವುದು. ಯಾವ ಐದು ಅರ್ಜಿಗಳನ್ನು ವಿಚಾರಣೆ ನಡೆಸಬೇಕು ಎಂಬುದನ್ನು ನೀವೇ ಆಯ್ಕೆ" ಎಂದು ಸುಪ್ರೀಂ ಕೋರ್ಟ್ ಹೇಳಿದೆ.

ಅರ್ಜಿದಾರರು 5 ದಿನಗಳಲ್ಲಿ ಕೇಂದ್ರದ ಉತ್ತರಕ್ಕೆ ಮರು ಪ್ರತಿಕ್ರಿಯೆ ಸಲ್ಲಿಸಬಹುದು, ನಂತರ ಮಧ್ಯಂತರ ಆದೇಶಗಳಿಗಾಗಿ ವಿಷಯವನ್ನು ಪಟ್ಟಿ ಮಾಡಲಾಗುವುದು ಎಂದು ಹೇಳಿ, ವಿಚಾರಣೆಯನ್ನು ಮೇ 5ಕ್ಕೆ ಸುಪ್ರೀಂ ಕೋರ್ಟ್ ಮುಂದೂಡಿದೆ.

"ಕೇಂದ್ರ ಸರ್ಕಾರದ ಪರವಾಗಿ ವಿಚಾರಣೆಗೆ ಹಾಜರಾದ ಸಾಲಿಸಿಟರ್ ಜನರಲ್ ತುಷಾರ್ ಮೆಹ್ತಾ ಅವರು, ಕೆಲವು ಸಾಮಗ್ರಿಗಳೊಂದಿಗೆ ಪ್ರಾಥಮಿಕ ಉತ್ತರ ನೀಡಲು ನನಗೆ ಒಂದು ವಾರ ಸಮಯ ನೀಡಿ" ಎಂದು ಸುಪ್ರೀಂ ಕೋರ್ಟ್ ಅನ್ನು ಕೇಳಿಕೊಂಡರು.

## ಜಾತಿ ಜನಗಣತಿ ಲೆಕ್ಕ- ಇಲ್ಲ ಪಕ್ಕಾ: ವರದಿಗೆ ಸ್ವಪಕ್ಷೀಯರಿಂದಲೇ ತೀವ್ರ ವಿರೋಧ; ಪ್ರತಿಭಟನೆ ಎಚ್ಚರಿಕೆ

**ಮೈಸೂರು:** ಜಾತಿ ಜನಗಣತಿ ವರದಿಯನ್ನು ವಿವರವಾಗಿ ಚರ್ಚಿಸಲು ಮುಖ್ಯಮಂತ್ರಿ ಸಿದ್ದರಾಮಯ್ಯ ಗುರುವಾರ ವಿಶೇಷ ಸಚಿವ ಸಂಪುಟ ಸಭೆ ಕರೆದಿದ್ದು, ಎಲ್ಲರ ದೃಷ್ಟಿ ಸಭೆಯ ಫಲಿತಾಂಶದ ಮೇಲೆ ನೆಟ್ಟಿದೆ.

ಕಳೆದ ವಾರ ಈ ವರದಿಯನ್ನು ಸಚಿವ ಸಂಪುಟ ಅಂಗೀಕರಿಸಿದಾಗಿನಿಂದ, ಅನೇಕ ಪ್ರಬಲ ಸಮುದಾಯಗಳು ಮತ್ತು ವಿರೋಧ ಪಕ್ಷಗಳು ಸರ್ಕಾರದ ವಿರುದ್ಧ ತೀವ್ರ ಆಕ್ರೋಶ ವ್ಯಕ್ತ ಪಡಿಸಿವೆ. ಒಕ್ಕಲಿಗ ಮತ್ತು ವೀರಶೈವ-ಲಿಂಗಾಯತ ಸಮುದಾಯಗಳು ವರದಿಯನ್ನು "ಅವೈಜ್ಞಾನಿಕ" ಎಂದು ಕರೆದು ಆಕ್ಷೇಪ ವ್ಯಕ್ತಪಡಿಸಿವೆ. ವರದಿಯ ಪರಿಣಾಮಗಳ ಕುರಿತು ಚರ್ಚಿಸಲು ಅನೇಕ ಜಾತಿ ಆಧಾರಿತ ಸಂಘಟನೆಗಳು ಸಭೆಗಳನ್ನು ಕರೆದಿವೆ ಮತ್ತು ಗುರುವಾರದ ಸಭೆಯ ಬೆಳವಣಿಗೆಗಳು ಮತ್ತು ಫಲಿತಾಂಶವನ್ನು ಸೂಕ್ಷ್ಮವಾಗಿ ಗಮನಿಸುತ್ತಿವೆ.

ಒಕ್ಕಲಿಗ ಸಂಘ ಬಂದ್‌ಗೆ ಕರೆ ನೀಡುವುದಾಗಿ ಬೆದರಿಕೆ ಹಾಕಿದೆ. ಸಮುದಾಯದ ಸಚಿವರು ಮತ್ತು ಶಾಸಕರ ರಾಜೀನಾಮೆ ನೀಡಬೇಕೆಂದು ಒಕ್ಕಲಿಗರ ಸಂಘ ಆಗ್ರಹಿಸಿದೆ. ಸಮುದಾಯಗಳ ಹಿತದೃಷ್ಟಿಯಿಂದ ಪಾರದರ್ಶಕತೆಯನ್ನು ಕಾಯ್ದುಕೊಳ್ಳುವ ಮೂಲಕ ಮರು ಸಮೀಕ್ಷೆ ನಡೆಸಬೇಕೆಂದು ಒಕ್ಕಲಿಗ ನಾಯಕ ಪಿಳ್ಳಪ್ಪ ಒತ್ತಾಯಿಸಿದ್ದಾರೆ. ವರದಿಯನ್ನು ಸ್ವೀಕರಿಸುವ ಯಾವುದೇ ಆತುರದ ನಿರ್ಧಾರವು ವಿನಾಶಕ್ಕೆ ಕಾರಣವಾಗುತ್ತದೆ ಎಂದು ಅವರು ಹೇಳಿದರು, ಏಕೆಂದರೆ ಕಾಂಗ್ರೆಸ್‌ನ ಅನೇಕರು ಇದನ್ನು ವಿರೋಧಿಸಿದ್ದಾರೆ ಎಂದಿದ್ದಾರೆ.ಜಾತಿ ಎಣಿ-ಕೆ ಮಾಡಲು ಯಾರೂ ತಮ್ಮ ಮನೆಗೆ ಭೇಟಿ ನೀಡಿಲ್ಲ ಹೀಗಾಗಿ ವರದಿಯನ್ನು ಸ್ವೀಕರಿಸುವುದಿಲ್ಲ ಎಂದು ಕಾಂಗ್ರೆಸ್ ಶಾಸಕ ರವಿಕುಮಾರ್ ಹೇಳಿದ್ದಾರೆ. ಒಕ್ಕಲಿಗ ಜನಸಂಖ್ಯೆಯು ಒಂದು ಕೋಟಿಗಿಂತ ಹೆಚ್ಚು ಎಂದು ಅವರು ಹೇಳಿಕೊಂಡಿದ್ದು, ವರದಿಯನ್ನು ಪರಿಶೀಲಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ ಮನವಿ ಮಾಡಿದ್ದಾರೆ.

# ಮನುಮೈನಹಟ್ಟಿ : ಸಮೃದ್ಧಿ ಹಾಗೂ ಫಲವಂತಿಕೆಯ ಪ್ರತೀಕ ಗೋಧಿಹಬ್ಬ

**ನಾಯಕನಹಟ್ಟಿ:** ಸಮೃದ್ಧಿ ಹಾಗೂ ಫಲವಂತಿಕೆಯ ಪ್ರತೀಕವಾದ ಗೋಧಿ ಹಬ್ಬವನ್ನು ಲಂಬಾಣಿ ಸಮುದಾಯವು ಸಕಲ ಶಾಸ್ತ್ರ ಸಂಪ್ರದಾಯದಂತೆ ಮನುಮೈನಹಟ್ಟಿ ಗ್ರಾಮದಲ್ಲಿ ಬುಧವಾರ ಸಂಜೆ ಸಂಭ್ರಮದಿಂದ ಆಚರಿಸಿದರು.

ಲಂಬಾಣಿ ಜನಾಂಗದ ಅರಾಧ್ಯ ದೈವ ಸಂತಸೇವಾಲಾಲ್ ದೇವರಿಗೆ ಪೂಜೆ ಸಲ್ಲಿಸಲು ಪ್ರತಿ ಎರಡು ವರ್ಷಗಳಿಗೊಮ್ಮೆ ಗೋಧಿಹಬ್ಬ ಆಚರಿಸಲಾಗುತ್ತದೆ. ಈ ಹುವು 9 ದಿನಗಳ ಪೂಜಾ ವಿಧಾನಗಳನ್ನು ಹೊಂದಿದ್ದು, ಮೊದಲದಿನ ಗ್ರಾಮದ ಮದುವೆಯಾಗದ ಯುವತಿಯರು ದೇವರ ಉತ್ಸವಮೂರ್ತಿಯೊಂದಿಗೆ ಗ್ರಾಮದ ಹೊರವಲಯದಲ್ಲಿರುವ ಹಳ್ಳಕ್ಕೆ

ಹೋಗಿ ಗಂಗಾಪೂಜೆ ಮಾಡುತ್ತಾರೆ.

ಅಲ್ಲಿಂದ ಬರುವಾಗ ಗಂಗಾ ಜಲವನ್ನು ತಂದು ಮನೆಗಳಲ್ಲಿ ಬಿದಿರುಬುಟ್ಟಿಯಲ್ಲಿ ಗೋಧಿಯನ್ನು ಹಾಕಿ ಬೆಳೆಸುತ್ತಾರೆ. 9ನೇ ದಿನವಾದ ಬುಧವಾರ ಯುವತಿಯರು ಅಲಂಕಾರ ಮಾಡಿಕೊಂಡು ಸಕಲ ಪೂಜಾ ವಿಧಾನಗಳ ಮೂಲಕ ಗೋಧಿಬುಟ್ಟಿಯನ್ನು ಹೊತ್ತು ದೇವಾಲಯದ ಬಳಿ ಬಂದು ಗ್ರಾಮದ ಯಜಮಾನರಾದ ನಾಯ್ಕ, ದಾವೋ, ಕಾರ್ಬಾರಿಗಳ ಅಪ್ಪಣೆಯ ಮೇರೆಗೆ ಪೂಜೆಮಾಡಿ ಮೆರವಣಿಗೆಗೆ ಚಾಲನೆ ನೀಡಲಾಗುತ್ತದೆ.



ಮೆರವಣಿಗೆಯಲ್ಲಿ ಮಹಿಳೆಯರು, ಪುರುಷರು, ಮಕ್ಕಳು ಸೇರಿ ಎಲ್ಲ ವಯೋಮಾನದವರು ಸಡಗರದಿಂದ ವಿವಿಧ ವಾದ್ಯಗಳ ನಿನಾದಕ್ಕೆ ಲಂಬಾಣಿ ನೃತ್ಯ ಮಾಡಿದರು. ಇನ್ನು ಕೆಲ ಮಹಿಳೆಯರು ಲಂಬಾಣಿ ಜನಾಂಗದ ಸಾಂಪ್ರಾದಾಯಿಕ ಉಡುಪು ಧರಿಸಿ ಲಂಬಾಣಿ ನೃತ್ಯ ಮಾಡಿದ್ದು ಅಕರ್ಷಣೀಯವಾಗಿತ್ತು.

ಫೀಜ್ ಮೆರವಣಿಗೆ ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಾಗಿ ನಂತರ ಗ್ರಾಮದ ಹೊರವಲಯದಲ್ಲಿರುವ ಹಳ್ಳದ ಬಳಿ ಬಂದು ಗೋಧಿಬುಟ್ಟಿಗಳನ್ನು ವಿಸರ್ಜಿಸಲಾಯಿತು. ನಂತರ ಗ್ರಾಮದ ಐದು ಯುವತಿಯರು ಪೀಠ ಎನ್ನುವ ಹಲಗೆಯನ್ನು ನೀರಿನಲ್ಲಿ ಆಡಿಸಿ, ಅದನ್ನು ಹಿಡಿದು ಸಂಭ್ರಮಪಟ್ಟರು. ಈ ರೀತಿ ಮಾಡಿದರೆ ಗ್ರಾಮದಲ್ಲಿ ಸುಖ, ಶಾಂತಿ, ನೆಮ್ಮದಿ, ಆರೋಗ್ಯ ಹಾಗೂ ಗ್ರಾಮಕ್ಕೆ ಉತ್ತಮವಾದ ಮಳೆ ಬೆಳೆಯಾಗುತ್ತದೆ ಎಂಬ ನಂಬಿಕೆ ಗ್ರಾಮಸ್ಥರಲ್ಲಿದೆ.

ಕಾರ್ಯಕ್ರಮದಲ್ಲಿ ಗ್ರಾಮದ ಪ್ರಮುಖರಾದ ಹರಿದಾಸ ನಾಯ್ಕ, ಮೂರ್ತಿನಾಯ್ಕ, ಜಯಣ್ಣ, ಮಹಾಂತೇಶ್, ಕಾಂತೇಶ್‌ನಾಯ್ಕ, ತಿಪ್ಪೇಸ್ವಾಮಿ, ಶಿವಣ್ಣ, ಸಾಮ್ಯನಾಯ್ಕ, ಪ್ರಕಾಶ್, ನಿರಂಜನ್, ಯಶವಂತನಾಯ್ಕ, ಶಿವಣ್ಣ, ದೇವಾನಂದ, ಲೋಕ್ಯಾನಾಯ್ಕ, ರೆಡ್ಡಿನಾಯ್ಕ ಇದ್ದರು.

## ಶ್ರೀ ಮುರುಘಾಮಠದಲ್ಲಿ ಏ.28 ರಿಂದ 30ರವರೆಗೆ ಬಸವೇಶ್ವರರ ಜಯಂತಿ ಅಂಗವಾಗಿ ವಿವಿಧ ಸ್ಪರ್ಧೆಗಳ ಆಯೋಜನೆ

**ಚಿತ್ರದುರ್ಗ :** ಏಪ್ರಿಲ್ 28, 29 ಹಾಗೂ 30ರಂದು ನಗರದ ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠದಲ್ಲಿ ಬಸವೇಶ್ವರರ ಜಯಂತಿ ಅಂಗವಾಗಿ ವಿಶೇಷ ಕಾರ್ಯಕ್ರಮಗಳು ಹಾಗೂ ವಿವಿಧ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ.

ಏ. 28ರಂದು ಸೋಮವಾರ ಬೆಳಗ್ಗೆ 10ಗಂಟೆಗೆ ಶ್ರೀಮಠದ ಅನುಭವ ಮಂಟಪದಲ್ಲಿ ವಚನ ಕಂಠಪಾಠ ಸ್ಪರ್ಧೆ, ಅದೇ ಸಮಯದಲ್ಲಿ ಶ್ರೀಮಠದ ಅಲ್ಲಮಪ್ರಭು ಸಂಶೋಧನಾ ಕೇಂದ್ರದಲ್ಲಿ ಬಸವಾದಿ ಶಿವಶರಣರ ವೇಷಭೂಷಣ ಸ್ಪರ್ಧೆ ಹಾಗೂ ಶ್ರೀಮಠದ ಆವರಣದಲ್ಲಿ ರಂಗೋಲಿ ಸ್ಪರ್ಧೆ (ಇದರಲ್ಲಿ ಬಸವಾದಿ ಶಿವಶರಣರ ಚಿತ್ರಗಳನ್ನೂ ಬಿಡಿಸಬಹುದಾಗಿದೆ) ನಡೆಯಲಿದೆ.

## ಬೀದಿ ಬದಿ ವ್ಯಾಪಾರಿಗಳ ಕುರಿತು ರಾಹುಲ್ ಗಾಂಧಿ ಕಳವಳ

**ಬೆಂಗಳೂರು:** ಬೀದಿ ಬದಿ ವ್ಯಾಪಾರಿಗಳಿಗೆ ಉತ್ತಮ ವ್ಯಾಪಾರ ಅವಕಾಶಗಳನ್ನು ಕಲ್ಪಿಸಲು ರಾಜ್ಯ ಸರ್ಕಾರವು ವಿದ್ಯುತ್ ಚಾಲಿತ ವಾಹನಗಳನ್ನು ಒದಗಿಸುವ ಪ್ರಕ್ರಿಯೆಯಲ್ಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಕರ್ನಾಟಕದಲ್ಲಿ ಬೀದಿ ವ್ಯಾಪಾರಿಗಳ ಸ್ಥಿತಿಯ ಬಗ್ಗೆ ರಾಹುಲ್ ಗಾಂಧಿ ಮುಖ್ಯಮಂತ್ರಿಗೆ ಬರೆದ ಪತ್ರದ ಮೂಲಕ ಕಳವಳ ವ್ಯಕ್ತಪಡಿಸಿದ್ದರು. ಇದಕ್ಕೆ ಪ್ರತಿಯಾಗಿ ರಾಹುಲ್ ಗಾಂಧಿಗೆ ಬರೆದ ಪತ್ರದಲ್ಲಿ, ಬೀದಿ ಬದಿ ವ್ಯಾಪಾರಿಗಳ ಸಮೀಕ್ಷೆ ಪೂರ್ಣಗೊಂಡಿದ್ದು, ಬೆಂಗಳೂರಿನಲ್ಲಿ 27,655 ಮಾರಾಟಗಾರರನ್ನು ನೋಂದಾಯಿಸಲಾಗಿದೆ ಎಂದು ಮುಖ್ಯಮಂತ್ರಿ ತಿಳಿಸಿದ್ದಾರೆ. ರಾಜ್ಯ ಸರ್ಕಾರ ಬೀದಿ ವ್ಯಾಪಾರಿಗಳ ಒಟ್ಟಾರೆ ಯೋಗಕ್ಷೇಮಕ್ಕೆ ಬದ್ಧವಾಗಿದೆ ಮತ್ತು ಅವರ ಸಮಗ್ರ ಅಭಿವೃದ್ಧಿಯನ್ನು ಖಚಿತಪಡಿಸುತ್ತದೆ ಎಂದು ಭರವಸೆ ನೀಡಿದ್ದಾರೆ.

## ನಟಿ ಸಂಜನಾಗೆ ವಂಚನೆ: ರಾಹುಲ್ ಗೆ 6 ತಿಂಗಳ ಜೈಲು ಶಿಕ್ಷೆ

**ಬೆಂಗಳೂರು:** ಕನ್ನಡದ ನಟಿ ಸಂಜನಾ ಗಲ್ರಾನಿಗೆ ಹಣ ವಂಚಿಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ಅಪರಾಧಿ ರಾಹುಲ್ ತೋನ್ಸೆಗೆ 61.50 ಲಕ್ಷ ರೂ. ದಂಡ ಮತ್ತು 6 ತಿಂಗಳು ಜೈಲು ಶಿಕ್ಷೆ ವಿಧಿಸಿ 33ನೇ ಎಸಿಎಂಎಂ ಕೋರ್ಟ್ ಆದೇಶಿಸಿದೆ. ಸಂಜನಾ ಗಲ್ರಾನಿ ಅವರ ಸ್ನೇಹಿತ ರಾಹುಲ್ ತೋನ್ಸೆ ವಿರುದ್ಧ ಆರೋಪ ಸಾಬೀತಾದ ಹಿನ್ನೆಲೆಯಲ್ಲಿ ನ್ಯಾಯಾಧೀಶ ಪಿಎಸ್ ಸಂತೋಷ್ ಕುಮಾರ್ ದಂಡ ಮತ್ತು ಶಿಕ್ಷೆ ವಿಧಿಸಿ ಆದೇಶ ಪ್ರಕಟಿಸಿದ್ದಾರೆ. ನಿಗದಿತ ಸಮಯದಲ್ಲಿ ದಂಡ ಪಾವತಿಸಿದರೆ ಆರು ತಿಂಗಳ ಜೈಲು ಶಿಕ್ಷೆಯನ್ನು ರದ್ದು ಮಾಡುವುದಾಗಿ ನ್ಯಾಯಧೀಶರು ತಿಳಿಸಿದ್ದಾರೆ. ಇದೇ ಅಲ್ಲದೆ ಉದ್ಯಮಿಯೊಬ್ಬರಿಗೆ 25 ಕೋಟಿ ರೂಪಾಯಿ ವಂಚನೆ ಮಾಡಿದ ಆರೋಪವೂ ರಾಹುಲ್ ತೋನ್ಸೆ ಮೇಲಿದೆ.

## ಕೋರ್ಟ್ ಆವರಣದೊಳಗೆ ಪ್ರವೀಣ್ ನೆಟ್ಟಾರು ಕೊಲೆ ಆರೋಪಿ ಹಣೆಗೆ ಮುತ್ತಿಟ್ಟ ಯುವಕ!

**ಮಂಗಳೂರು:** 2022ರಲ್ಲಿ ನಡೆದಿದ್ದ ಬಿಜೆಪಿ ಯುವ ಮುಖಂಡ ಪ್ರವೀಣ್ ನೆಟ್ಟಾರು ಹತ್ಯೆ ಪ್ರಕರಣದ ಪ್ರಮುಖ ಆರೋಪಿ ಶಾಫಿ ಬೆಳ್ಳಾರೆ ಹಣೆಗೆ ಅಪರಿಚಿತ ಯುವಕನೋರ್ವ ಮುತ್ತಿಟ್ಟಿರುವ ಘಟನೆ ಸೋಮವಾರ ನಡೆದಿದೆ.ಶಾಫಿ ಬೆಳ್ಳಾರೆಯನ್ನು ಇಲ್ಲಿನ ನ್ಯಾಯಾಲಯಕ್ಕೆ ಹಾಜರುಪಡಿಸುವ ವೇಳೆ ಈ ಘಟನೆ ನಡೆದಿದೆ. ಇಬ್ಬರು ಪೊಲೀಸರು ಬೆಂಗಾವಲಾಗಿ ನಿಂತಿದ್ದರೂ ಯುವಕ ಬೆಳ್ಳಾರೆಯ ತಲೆಯನ್ನು ಎರಡೂ ಕೈಗಳಿಂದ ಹಿಡಿದು ಹಣೆಗೆ ಮುತ್ತಿಡುವಲ್ಲಿ ಯಶಸ್ವಿಯಾಗಿದ್ದಾನೆ.ನ್ಯಾಯಾಲಯದ ಆವರಣದಲ್ಲಿ ಪೊಲೀಸರ ಸಮ್ಮುಖದಲ್ಲಿಯೇ ಬಹಿರಂಗವಾಗಿಯೇ ಈ ಘಟನೆ ನಡೆದಿದೆ.ಪ್ರಸ್ತುತ ನ್ಯಾಯಾಂಗ ಬಂಧನದಲ್ಲಿರುವ ಬೆಳ್ಳಾರೆಯನ್ನು 2017 ರಲ್ಲಿ ಆರ್‌ಎಸ್‌ಎಸ್ ಮತ್ತು ಕಲ್ಲಡ್ಕ ಭಟ್ ವಿರುದ್ಧ ಮಾಡಿದ್ದ ಅವಹೇಳನಾಕಾರಿ ಭಾಷಣ ಸಂಬಂಧದ ಪ್ರತ್ಯೇಕ ಕೇಸ್ ಗಳಲ್ಲಿ ಆತನನ್ನು ಬೆಳ್ತಂಗಡಿ ನ್ಯಾಯಾಲಯಕ್ಕೆ ಕರೆತರಲಾಗಿತ್ತು.ಬೆಳ್ಳಾರೆಗೆ ಕಿಸ್ ಮಾಡಿದ ತಕ್ಷಣ ಯುವಕ ಸ್ಥಳದಿಂದ ಪರಾರಿಯಾಗಿದ್ದಾನೆ ಎಂದು ಪೊಲೀಸರು ತಿಳಿಸಿದ್ದಾರೆ. ಆತನನ್ನು ಗುರುತಿಸಿ ಬಂಧಿಸಲು ಶೋಧ ಕಾರ್ಯ ನಡೆಯುತ್ತಿದೆ.

## ಏ.24 ರಿಂದ ದ್ವಿತೀಯ ಪಿಯುಸಿ ಪರೀಕ್ಷೆ-2 : ನಿಷೇಧಾಜ್ಞೆ ಜಾರಿ

**ತುಮಕೂರು :** ಜಿಲ್ಲೆಯಾದ್ಯಂತ 13 ಪರೀಕ್ಷಾ ಕೇಂದ್ರಗಳಲ್ಲಿ ಏಪ್ರಿಲ್ 24 ರಿಂದ ಮೇ 8ರವರೆಗೆ ದ್ವಿತೀಯ ಪಿಯುಸಿ ಪರೀಕ್ಷೆ-2 ನಡೆಯಲಿದ್ದು, ಪರೀಕ್ಷೆಯನ್ನು ಯಾವುದೇ ಲೋಪದೋಷವಿಲ್ಲದಂತೆ ನಡೆಸಲು ಪರೀಕ್ಷಾ ಕೇಂದ್ರಗಳ ಸುತ್ತಮುತ್ತ 200 ಮೀ. ವ್ಯಾಪ್ತಿಯೊಳಗಿನ ಪ್ರದೇಶವನ್ನು ನಿಷೇಧಿತ ಪ್ರದೇಶವೆಂದು ಘೋಷಿಸಿ ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಶುಭ ಕಲ್ಯಾಣ್ ಆದೇಶ ಹೊರಡಿಸಿದ್ದಾರೆ.

ನಿಷೇಧಾಜ್ಞೆಯು ಏಪ್ರಿಲ್ 24 ರಿಂದ ಮೇ 8ರವರೆಗೆ ಸರ್ಕಾರಿ ರಜೆ ಮತ್ತು ಪರೀಕ್ಷೆ ನಡೆಯದೆ ಇರುವ ದಿನಗಳನ್ನು ಹೊರತುಪಡಿಸಿ) ಬೆಳಿಗ್ಗೆ 9 ರಿಂದ ಮಧ್ಯಾಹ್ನ 2 ಗಂಟೆಯವರೆಗೆ ಜಾರಿಯಲ್ಲಿರುತ್ತದೆ. ಈ ನಿಷೇಧಾಜ್ಞೆಯನ್ವಯ ಪರೀಕ್ಷೆ ನಡೆಯುವ ದಿನಾಂಕದಂದು ಪರೀಕ್ಷಾ ಕೇಂದ್ರಗಳ ಸುತ್ತಮುತ್ತ ಇರುವ ಜೆರಾಕ್ಸ್ ಮತ್ತು ಬೆರಳಚ್ಚು ಕೇಂದ್ರಗಳನ್ನು ಮುಚ್ಚತಕ್ಕದ್ದು. ನಿಷೇಧಾಜ್ಞೆ ಜಾರಿಯಲ್ಲಿರುವ ಅವಧಿಯಲ್ಲಿ ಅನಧಿಕೃತ ವ್ಯಕ್ತಿಗಳು ಯಾರೂ ನಿರ್ಬಂಧಿತ ಪ್ರದೇಶದೊಳಗೆ ಪ್ರವೇಶಿಸುವಂತಿಲ್ಲ ಹಾಗೂ ನಿಷೇಧಾಜ್ಞೆಯನ್ನು ಉಲ್ಲಂಘನೆ ಮಾಡಿದ ವ್ಯಕ್ತಿಗಳನ್ನು ಬಂಧಿಸಿ ಅವರ ವಿರುದ್ಧ ಕಾನೂನು ಕ್ರಮ ಜರುಗಿಸಲು ಜಿಲ್ಲಾ ಪೊಲೀಸ್ ಇಲಾಖೆಗೆ ಆದೇಶಿಸಲಾಗಿದೆ.


# ಬಯಲುಸೀಮೆ ಕಲ್ಪವೃಕ್ಷ ಕೃಷಿಕನ ರಕ್ಷಕ

**ಚಳ್ಳಕೆರೆ:** ಬಯಲುಸೀಮೆಯ ಕಲ್ಪವೃಕ್ಷ ಎಂದೇ ಕರೆಸಿಕೊಳ್ಳುವ ಹುಣಸೆ ಮರಗಳು ಮೈ ತುಂಬ ಹಣ್ಣು ಹೊದ್ದು ನಿಂತು ನಾಲಿಗೆಯಲ್ಲಿ ನಿರೂರಿಸುತ್ತಿವೆ.

ನಾಲ್ಕೈದು ವರ್ಷ ನೀರುಣಿಸಿ ಬೆಳೆಸಿದ ಮರಗಳು ಎರಡು ತಲೆಮಾರುಗಳಿಗೆ ಆಗುವಷ್ಟು ಫಲ ನೀಡುತ್ತವೆ. ಕಡಿಮೆ ಮಳೆಯಾಶ್ರಿತ ಪ್ರದೇಶದಲ್ಲಿ ಕೃಷಿ ನಂಬಿಕೊಂಡು ಜೀವನ ಸಾಗಿಸುವ ಮಂದಿಗೆ ಇದು ಭರವಸೆಯ ಬೆಳೆ.

ಕಣ, ಜಮೀನಿನ ಬದು ಹೀಗೆ ಅಲ್ಲಲ್ಲಿ ಹಾಕಿದ್ದ ಮರಗಳು ಕಷ್ಟಕಾಲದಲ್ಲಿ ಕೃಷಿಕನ ಕೈ ಹಿಡಿಯುತ್ತಿವೆ. ಇನ್ನು ರಸ್ತೆ ಇಕ್ಕೆಲಗಳಲ್ಲೂ ಹುಣಸೆ ಹುಲುಸಾಗಿ ಬೆಳೆದಿದ್ದು, ಗುತ್ತಿಗೆದಾರರ ಜೇಬು ತುಂಬಿಸುತ್ತಿವೆ.

ಬಯಲುಸೀಮೆ ಮಟ್ಟಿಗೆ ಹುಣಸೆ ಪ್ರಮುಖ ಬೆಳೆಯಲ್ಲದಿದ್ದರೂ ಕೆಲ ಗ್ರಾಮಗಳಲ್ಲಿ ರೈತರು ನೂರಾರು ಮರಗಳನ್ನು ಸಲಹುತ್ತಿದ್ದಾರೆ. ಉತ್ತಮ ಫಸಲು ಇದೆ. ಬಯಲುಸೀಮೆ ಪ್ರದೇಶದ ಕೆಲವೆಡೆ ಮಳೆ ಕೊರತೆ, ವಿವಿಧ ಕಾರಣಗಳಿಂದ ಹುಣಸೆ ಇಳುವರಿ ಕುಸಿದಿದೆ. ಬೆಲೆ ವಿಚಾರದಲ್ಲೇನೂ ರಾಜಿ ಇಲ್ಲ. ಬೆಳೆಗಾರನ ನಿರೀಕ್ಷೆಗೆ ತಕ್ಕ ಬೆಲೆ ಸಿಗುತ್ತಿದೆ. ಈ ಬಾರಿ ದುಪ್ಪಟ್ಟು ಹೆಚ್ಚಾಗಿದೆ. ರಾಜ್ಯದ ಪ್ರಮುಖ



ಎಪಿಎಂಸಿ ಮಾರುಕಟ್ಟೆಗಳಲ್ಲಿ ಪ್ರಸ್ತುತ ಕ್ವಿಂಟಾಲ್‌ಗೆ 10 ಸಾವಿರದ ವರೆಗೆ ಧಾರಣೆ ಸಿಗುತ್ತಿದೆ.

ಜಿಲ್ಲೆಯಲ್ಲಿ ಬೆಳೆಗಾರರಿಗೆ ಕೊರತೆ ಇಲ್ಲ. 25 ರಿಂದ 30 ಸಾವಿರ ಜನ ಇದನ್ನು ಉಪ ಬೆಳೆಯಾಗಿಸಿಕೊಂಡಿದ್ದಾರೆ. ಬೆಳೆಗಾರರ ನಿರಾಸಕ್ತಿಯೋ, ಮಾಹಿತಿ ಕೊರತೆಯೋ ಗೊತ್ತಿಲ್ಲ. ಜಿಲ್ಲೆಯಲ್ಲಿ ಬೆಳೆದ ಹುಣಸೆ ಹಣ್ಣಿನ ಲಾಭ ನೇರೆ ಪಾವಗಡ ಹಾಗೂ ತುಮಕೂರು ಜಿಲ್ಲೆಯ ವ್ಯಾಪಾರಿಗಳ ಕೈಸೇರುವ ಪದ್ಧತಿ ಮುಂದುವರಿದಿದೆ.

ಮೊಳಕಾಲ್ಮೂರು, ಚಳ್ಳಕೆರೆ, ಹಿರಿಯೂರು, ಹೊಸದುರ್ಗ ತಾಲೂಕಿಗೆ ದೂರದ ಪಾವಗಡದ ವರ್ತಕರು ಬಂದು ಖರೀದಿಸುತ್ತಾರೆ. ಸಮೀಪದ ಹಿಂದೂಪುರದಲ್ಲಿ ಹೆಚ್ಚು ಹುಣಸೆ ಹಣ್ಣು ವಹಿವಾಟು ಜೋರಿದ್ದು, ಇಲ್ಲಿಂದ ವಿದೇಶಗಳಿಗೂ ರಫ್ತಾಗುತ್ತದೆ.

ತುಮಕೂರು ರಾಜಧಾನಿ: ಹುಣಸೆ ಮಾರುಕಟ್ಟೆಗೆ ತುಮಕೂರು ಪ್ರದೇಶವನ್ನು ರಾಜಧಾನಿ ಎನ್ನಬಹುದು. ಅಷ್ಟರ ಮಟ್ಟಿಗೆ ಇಲ್ಲಿ ವಹಿವಾಟು ಹೆಚ್ಚು ಇದೆ. ಕೃಷಿಕರು ಇದನ್ನೇ ಪ್ರಮುಖ ಬೆಳೆ ಮಾಡಿಕೊಂಡಿದ್ದಾರೆ. ಈಗಾಗಲೇ ಹಣ್ಣು ಕೀಳುವ ಪ್ರಕ್ರಿಯೆ ಆರಂಭವಾಗಿದ್ದು, ಎಪಿಎಂಸಿಗೆ ಹುಣಸೆ ಹಣ್ಣು ಲಗ್ಗೆ ಇಟ್ಟಿದ್ದು, ಇನ್ನೂ ಕೆಲ ದಿನಗಳ ಕಾಲ ಇನ್ನಷ್ಟು ಗರಿಗೆದರಲಿದೆ. ಹಿಂದಿನ ವರ್ಷ ನೂರಾರು ಕ್ವಿಂಟಾಲ್ ವಹಿವಾಟು ನಡೆದಿದೆ.

ಆರೋಗ್ಯ ದೃಷ್ಟಿಯಿಂದ ಹುಣಸೆ ಉತ್ತಮ ಆಹಾರ. ಇದಕ್ಕೆ ಹಲವು ರೋಗ ದೂರವಿಡುವ ಶಕ್ತಿ ಇದೆ. ಜತೆಗೆ ಅದರ ಸಿಪ್ಪೆ, ನಾರು ಕೂಡ ಉಪಯುಕ್ತ. ಹುಣಸೆ ಹಣ್ಣಿನಂತೆ ಅದರ ಬೀಜಗಳಿಗೂ ಬೇಡಿಕೆ ಇದೆ. ಶಿವಮೊಗ್ಗ, ಹಾಸನ, ಮೈಸೂರು ಎಪಿಎಂಸಿಗಳಲ್ಲಿ ವಹಿವಾಟು ನಡೆಯುತ್ತದೆ.

## ಕ್ರೀಡೆ ಆರೋಗ್ಯ ಕಾಪಾಡಿಕೊಳ್ಳಲು ಅತ್ಯುತ್ತಮ ಮಾರ್ಗ




ಚಿಕ್ಕಮಗಳೂರು: ಕ್ರೀಡೆ ಆರೋಗ್ಯದ ಒಂದು ಭಾಗವಾಗಿದ್ದು, ನಮ್ಮ ಆರೋಗ್ಯ ಕಾಪಾಡಿಕೊಳ್ಳಲು ಇದು ಅತ್ಯುತ್ತಮ ಮಾರ್ಗ ಎಂದು ಜಿಲ್ಲಾಧಿಕಾರಿ ಸಿ. ಎನ್.ಮೀನಾ ನಾಗರಾಜ್ ಹೇಳಿದರು.

ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಶಾಖೆಯ ಸಂಯುಕ್ತ ಆಶ್ರಯದಲ್ಲಿ ಸೋಮವಾರ ನಗರದ ಕುವೆಂಪು ಕಲಾಮಂದಿರದಲ್ಲಿ ಜಿಲ್ಲಾಮಟ್ಟದ ಸರ್ಕಾರಿ ನೌಕರರ ಕ್ರೀಡಾಕೂಟ ಮತ್ತು ಸಾಂಸ್ಕೃತಿಕ ಸ್ಪರ್ಧಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ರಾಜ್ಯ ಸರ್ಕಾರವು ಸರ್ಕಾರಿ ನೌಕರರ ಹಿತಾಸಕ್ತಿ ಕಾಪಾಡಲು ಅನೇಕ ಉಪಯುಕ್ತ ಕಾರ್ಯಕ್ರಮಗಳನ್ನು ಜಾರಿಗೊಳಿಸಿದೆ. ನೌಕರರು ಕೆಲಸದ ಒತ್ತಡದಲ್ಲಿ ತಮ್ಮ ಕೌಟುಂಬಿಕ ಜೀವನ, ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ಮಾಡಬಾರದು. ಪ್ರತಿದಿನ ವ್ಯಾಯಾಮ, ನಡಿಗೆ, ಯೋಗ ಮಾಡಿ, ಫಿಟ್‌ನೆಸ್ ಕಾಯ್ದುಕೊಳ್ಳಬೇಕು ಎಂದು ತಿಳಿಸಿದರು.

ಪ್ರತಿಯೊಬ್ಬರೂ ದೈಹಿಕ ಮತ್ತು ಮಾನಸಿಕ ಸದೃಢತೆಗೆ ಆರೋಗ್ಯ ಮುಖ್ಯವಾಗಿದೆ. ಉತ್ತಮವಾದ ಓದು, ವ್ಯಾಯಾಮಗಳು ಮನಸ್ಸಿಗೆ ಉಲ್ಲಾಸ, ವಿಶ್ರಾಂತಿ ನೀಡುತ್ತವೆ. ಖುಷಿಯಿಂದ ಕೆಲಸ ಮಾಡಲು ಕ್ರೀಡಾಕೂಟ, ಸಾಂಸ್ಕೃತಿಕ ಕಾರ್ಯಕ್ರಮಗಳ ಅಗತ್ಯವಿದೆ ಎಂದು ಹೇಳಿದರು.ಕಾರ್ಯಕ್ರಮವನ್ನು ಉದ್ಘಾಟಿಸಿದ ಜಿ.ಪಂ. ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಹೆಚ್.ಎಸ್. ಕೀರ್ತನಾ ಅವರು ಮಾತನಾಡಿ, ಎಲ್ಲಾ ಇಲಾಖೆಯ ನೌಕರರನ್ನು ಒಟ್ಟುಗೂಡಿಸಿದ್ದು, ಈ ಕಾರ್ಯಕ್ರಮ ಸಮಾನತೆಯಿಂದ ಮೂಡಿಬಂದಿದೆ. ನಿರಂತರ ಯೋಗ, ವ್ಯಾಯಾಮ, ಕ್ರೀಡಾ ಚಟುವಟಿಕೆಗಳು ನಮ್ಮ ಮಾನಸಿಕ ಮತ್ತು ದೈಹಿಕ ಆರೋಗ್ಯದ ಸುಸ್ಥಿತಿ ಕಾಪಾಡಲು ಸಹಾಯ ಮಾಡುತ್ತವೆ. ಪ್ರತಿ ದಿನ ಯೋಗ, ವಾಕಿಂಗ್ ಮಾಡಬೇಕು ಎಂದು ಅವರು ಹೇಳಿದರು.

ನಗರಸಭೆ ಅಧ್ಯಕ್ಷೆ ಸುಜಾತ ಶಿವಕುಮಾರ್ ಅವರು ಮಾತನಾಡಿ, ಕ್ರೀಡೆಯಲ್ಲಿ ಸೋಲು ಗೆಲುವು ಎಂಬುದು ಇಲ್ಲ. ಗೆಲುವು ಸಿಗುತ್ತದೆ ಅಥವಾ ಆ ಕ್ರೀಡೆಯಿಂದ ಹೊಸದನ್ನು ಕಲಿಯುತ್ತೇವೆ. ಆದ್ದರಿಂದ ಗೆಲುವು ಅಥವಾ ಕಲಿಕೆ ಮಾತ್ರ ಕ್ರೀಡೆಯಿಂದ ಸಿಗುತ್ತದೆ. ಕ್ರೀಡೆಗಳು ಪರಸ್ಪರ ವೈಯಕ್ತಿಕ ಸಂಬಂಧ, ಸೌಹಾರ್ದತೆ, ಸಹೋದರತ್ವ ಗಟ್ಟಿಗೊಳಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತವೆ ಎಂದರು.

ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಶಿವಾನಂದ ಸ್ವಾಮಿ ಮಾತನಾಡಿ, ಕ್ರೀಡೆ ನಮ್ಮನ್ನು ಮಾನಸಿಕವಾಗಿ ಮತ್ತು ದೈಹಿಕವಾಗಿ ಸದೃಢರನ್ನಾಗಿ ಮಾಡುತ್ತದೆ. ಆರೋಗ್ಯವಂತ ಜೀವನಕ್ಕೆ ಕ್ರೀಡೆ ಬಹುಮುಖ್ಯ. ಪ್ರಾಚೀನ ಕಾಲದಿಂದಲೂ ಕ್ರೀಡೆಗೆ ಮಹತ್ವವಾದ ಸ್ಥಾನವನ್ನು ನೀಡಲಾಗಿದೆ. ರಾಮಾಯಣ, ಮಹಾಭಾರತದ ಕಾಲದಲ್ಲಿ ರಾಜರು ಕ್ರೀಡಾಕೂಟಗಳನ್ನು ಏರ್ಪಡಿಸುತ್ತಿದ್ದರು. ಕುಸ್ತಿ, ಬಿಲ್ಲುಗಾರಿಕೆ ಮುಂತಾದವನ್ನು ಕಾಣಬಹುದಾಗಿದೆ ಎಂದರು.

ಜಿಲ್ಲಾ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ದೇವೇಂದ್ರ ಪ್ರಾಸ್ತಾವಿಕವಾಗಿ ಮಾತನಾಡಿ, ಸ್ವಾಗತಿಸಿದರು.

ಕಾರ್ಯಕ್ರಮದಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಉಪ ನಿರ್ದೇಶಕಿ ಡಾ.ಹೆಚ್.ಪಿ. ಮಂಜುಳಾ, ಜಿಲ್ಲಾ ಸರ್ಕಾರಿ ನೌಕರರ ಸಂಘದ ಕಾರ್ಯಾಧ್ಯಕ್ಷ ಬಿ,ಎನ್.ಸುಂದ್ರೇಶ್, ಕಾರ್ಯದರ್ಶಿ ಟಿ. ಪದ್ಮರಾಜ್, ಗೌರವಾಧ್ಯಕ್ಷ ಸಿ.ಎನ್.ಮಂಜುನಾಥ್, ಕೊಪ್ಪ ತಾಲ್ಲೂಕು ಅಧ್ಯಕ್ಷ ರಾಘವೇಂದ್ರ, ವಿವಿಧ ತಾಲ್ಲೂಕು ಅಧ್ಯಕ್ಷರು ಹಾಗೂ ವಿವಿಧ ಇಲಾಖೆಗಳ ನೌಕರರು ಉಪಸ್ಥಿತರಿದ್ದರು.

## ರಾಜ್ಯದ ಬೀದಿ ವ್ಯಾಪಾರಿಗಳ ಕುರಿತು ಸಿಎಂ ಸಿದ್ದರಾಮಯ್ಯಗೆ ಪತ್ರದ ಮೂಲಕ ರಾಹುಲ್ ಗಾಂಧಿ ಕಳವಳ!

**ಬೆಂಗಳೂರು:** ಬೀದಿ ಬದಿ ವ್ಯಾಪಾರಿಗಳಿಗೆ ಉತ್ತಮ ವ್ಯಾಪಾರ ಅವಕಾಶಗಳನ್ನು ಕಲ್ಪಿಸಲು ರಾಜ್ಯ ಸರ್ಕಾರವು ವಿದ್ಯುತ್ ಚಾಲಿತ ವಾಹನಗಳನ್ನು ಒದಗಿಸುವ ಪ್ರಕ್ರಿಯೆಯಲ್ಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಕರ್ನಾಟಕದಲ್ಲಿ ಬೀದಿ ವ್ಯಾಪಾರಿಗಳ ಸ್ಥಿತಿಯ ಬಗ್ಗೆ ರಾಹುಲ್ ಗಾಂಧಿ ಮುಖ್ಯಮಂತ್ರಿಗೆ ಬರೆದ ಪತ್ರದ ಮೂಲಕ ಕಳವಳ ವ್ಯಕ್ತಪಡಿಸಿದ್ದರು. ಇದಕ್ಕೆ ಪ್ರತಿಯಾಗಿ ರಾಹುಲ್ ಗಾಂಧಿಗೆ ಬರೆದ ಪತ್ರದಲ್ಲಿ, ಬೀದಿ ಬದಿ ವ್ಯಾಪಾರಿಗಳ ಸಮೀಕ್ಷೆ ಪೂರ್ಣಗೊಂಡಿದ್ದು, ಬೆಂಗಳೂರಿನಲ್ಲಿ 27,655 ಮಾರಾಟಗಾರರನ್ನು ನೋಂದಾಯಿಸಲಾಗಿದೆ ಎಂದು ಮುಖ್ಯಮಂತ್ರಿ ತಿಳಿಸಿದ್ದಾರೆ. ರಾಜ್ಯ ಸರ್ಕಾರ ಬೀದಿ ವ್ಯಾಪಾರಿಗಳ ಒಟ್ಟಾರೆ ಯೋಗಕ್ಷೇಮಕ್ಕೆ ಬದ್ಧವಾಗಿದೆ ಮತ್ತು ಅವರ ಸಮಗ್ರ ಅಭಿವೃದ್ಧಿಯನ್ನು ಖಚಿತಪಡಿಸುತ್ತದೆ ಎಂದು ಸಿಎಂ ಭರವಸೆ ನೀಡಿದ್ದಾರೆ. 2013 ಮತ್ತು 2018ರ ನಡುವೆ ತಾವು ಮುಖ್ಯಮಂತ್ರಿಯಾಗಿದ್ದ ಅವಧಿಯಲ್ಲಿ ಬೀದಿ ವ್ಯಾಪಾರಿಗಳ ಪರವಾಗಿ ನಿಯಮಗಳನ್ನು ರೂಪಿಸಿದ ರಾಜ್ಯಗಳಲ್ಲಿ ಕರ್ನಾಟಕವೂ ಒಂದು ಎಂದು ಸಿದ್ದರಾಮಯ್ಯ ರಾಹುಲ್ ಗಾಂಧಿಗೆ ತಿಳಿಸಿದರು. ಕರ್ನಾಟಕದ ಹಿಂದಿನ ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಕ್ರಮವಾಗಿ 2017 ಮತ್ತು 2019ರಲ್ಲಿ ಬೀದಿ ವ್ಯಾಪಾರಿಗಳ ಸಮೀಕ್ಷೆ ಮತ್ತು ವಿವಿಧ ಪಟ್ಟಣ ಮಾರಾಟ ಸಮಿತಿಗಳಿಗೆ ಚುನಾವಣೆಗಳನ್ನು ಮೊದಲ ಬಾರಿಗೆ ನಡೆಸಲಾಗಿತ್ತು ಎಂದು ಅವರು ಎತ್ತಿ ತೋರಿಸಿದರು. 2022ರಲ್ಲಿ ಇದೇ ಪ್ರಕ್ರಿಯೆಯನ್ನು ಪುನರಾವರ್ತಿಸಬೇಕಾಗಿತ್ತು. ಆದರೆ ದುರದೃಷ್ಟವಶಾತ್ ಅದನ್ನು ಕೈಗೊಳ್ಳಲಾಗಲಿಲ್ಲ. ಆದರೆ ನಾವು ರಾಜ್ಯದಲ್ಲಿ ಅಧಿಕಾರಕ್ಕೆ ಮರಳಿದ ತಕ್ಷಣ, ಬೀದಿ ವ್ಯಾಪಾರಿಗಳ ಕಾಯ್ದೆ, 2014ರ ಪ್ರಕಾರ ಬೀದಿ ವ್ಯಾಪಾರಿಗಳ ಹೊಸ ಸಮೀಕ್ಷೆಯನ್ನು ನಡೆಸಲಾಗಿದೆ. ಪಟ್ಟಣ ಮಾರಾಟ ಸಮಿತಿಗಳಿಗೆ ಚುನಾವಣೆಗಳು ಏಪ್ರಿಲ್ 2025 ರಲ್ಲಿ ಪೂರ್ಣಗೊಳ್ಳಲಿವೆ. ಒಟ್ಟು 189 ವಿವಿಧ ರೀತಿಯ ಮಾರಾಟ ವಲಯಗಳನ್ನು ಗುರುತಿಸಲಾಗಿದೆ. ಅದರೊಳಗೆ 10,142 ಮಾರಾಟ ಸ್ಥಳಗಳನ್ನು ಮೀಸಲಿಡಲಾಗಿದೆ ಎಂದರು. ಬೀದಿ ವ್ಯಾಪಾರಿಗಳಿಗಾಗಿ ರಾಜ್ಯವು ವಿವಿಧ ಕಲ್ಯಾಣ ಯೋಜನೆಗಳನ್ನು ಪ್ರಾರಂಭಿಸಿದೆ. ಅವರ ಮಕ್ಕಳಿಗೆ ಶಿಕ್ಷಣ, ಆರೋಗ್ಯ ಸೌಲಭ್ಯಗಳು, ವಸತಿ ಮತ್ತು ಅವರ ಉದ್ಯೋಗಾವಕಾಶಗಳನ್ನು ಸುಧಾರಿಸಲು ಕೌಶಲ್ಯ ತರಬೇತಿಯಂತಹ ಪ್ರಮುಖ ಕ್ಷೇತ್ರಗಳ ಮೇಲೆ ಕೇಂದ್ರೀಕರಿಸಿದೆ. ಹೆಚ್ಚುವರಿಯಾಗಿ, ಅವರ ಚಲನಶೀಲತೆಯನ್ನು ಹೆಚ್ಚಿಸಲು ಮತ್ತು ಉತ್ತಮ ವ್ಯಾಪಾರ ಅವಕಾಶಗಳನ್ನು ಸೃಷ್ಟಿಸಲು ನಾವು ಅವರಿಗೆ ವಿದ್ಯುತ್ ಮಾರಾಟ ವಾಹನಗಳನ್ನು ನೀಡುವ ಪ್ರಕ್ರಿಯೆಯಲ್ಲಿದ್ದೇವೆ. 2024-25 ರಲ್ಲಿ, ವಿವಿಧ ರೀತಿಯ ಮಾರಾಟ ವಾಹನಗಳನ್ನು ಪಡೆಯಲು 3,778 ಫಲಾನುಭವಿಗಳನ್ನು ಗುರುತಿಸಲಾಗಿದೆ ಎಂದು ಅವರು ಹೇಳಿದರು.

## ಶೃಂಗೇರಿಯಲ್ಲಿ ಸಂಭ್ರಮದ ರಾಮನವಮಿ ಆಚರಣೆ

ಶೃಂಗೇರಿ: ಶ್ರೀ ರಾಮನವಮಿಯನ್ನು ಸಂಭ್ರಮದಿಂದ ಭಾನುವಾರ ತಾಲ್ಲೂಕಿನಾದ್ಯಂತ ಆಚರರಿಸಲಾಯಿತು. ಶ್ರೀಮದ್ ಭಾಗವತ ಮತ್ತು ರಾಮಾಯಣಗಳನ್ನು ಪಠಿಸಲಾಯಿತು.ಮನೆ-ಮನೆಗಳಲ್ಲಿ ಹಬ್ಬದ ಪ್ರಯುಕ್ತ ರಂಗವಲ್ಲಿ ಚಿತ್ತಾರವ ಬಿಡಿಸಿ,ತಳಿರು ತೋರಣ ಕಟ್ಟಿ ಸಾಲಂಕೃತಗೊಂಡ ದೇವರ ಮನೆಯಲ್ಲಿ ವಿಶೇಷವಾಗಿ ಶ್ರೀರಾಮನಿಗೆ ಪೂಜೆ ಸಲ್ಲಿಸಲಾಯಿತು.ಶ್ರೀ ರಾಮನ ಭಜನೆಗಳು ಹಾಗೂ ಕೀರ್ತನೆಗಳನ್ನು ಹಾಡಿ ಸದ್ಭಕ್ತರು ಶ್ರದ್ಧಾಭಕ್ತಿ ಮೆರೆದರು.ಕೋಸಂಬರಿ,ಪಾಯಸ,ವಿವಿಧ ಖ್ಯಾದಗಳನ್ನು ಸವಿದು ಶ್ರೀ ರಾಮನ ದೇವಾಲಯಗಳಿಗೆ ಭೇಟಿ ನೀಡಿದರು.

ವಿದ್ಯಾರಣ್ಯಪುರ ಶ್ರೀ ರಾಮನಿಗೆ ರಾಮನವಮಿ ಪ್ರಯುಕ್ತ ಮಧ್ಯಾಹ್ನ ಭಜನಾ ಕಾರ್ಯಕ್ರಮ,ಸಂಜೆ ಸೀತಾರಾಮ ಕಲ್ಯಾಣ ಧಾರ್ಮಿಕ ಕಾರ್ಯಕ್ರಮ ನೆರವೇರಿತು.ಶ್ರೀಮಠದ ಕೋದಂಡರಾಮಸ್ವಾಮಿ ದೇವಾಲಯ,ಹೊಳೆಕೊಪ್ಪ ಶ್ರೀ ರಾಮದೇವಸ್ಥಾನದಲ್ಲಿ ಕೂಡಾ ಪೂಜೆ ನೆರವೇರಿತು.



# ತಾಳಿ ಕಟ್ಟುವ ಮುಂಚೆ ಮಾಡುವ ಪ್ರೀತಿಗೂ ತಾಳಿ ಕಟ್ಟಿಸಿಕೊಂಡು ಮಾಡುವ ಪ್ರೀತಿಗೂ ಬಹಳ ಅಜಗ ಜಾಂತರ

ತಾಳಿ ಕಟ್ಟುವ ಮುಂಚೆ ಮಾಡುವ ಪ್ರೀತಿಗೂ ತಾಳಿ ಕಟ್ಟಿಸಿಕೊಂಡು ಮಾಡುವ ಪ್ರೀತಿಗೂ ಬಹಳ ಅಜಾಗಾಜಾಂತರ ವಿದೆ ಆದರೂ ಎಲ್ಲಾರಿಗೂ ಮದುವೆ ಮುಂಚೆ ಮಾಡಿದ ನೆನಪುಗಳೆ ಬಹಳ ಮುದ ನೀಡುತ್ತವೆ. ಆದರೆ ಅವಳು ಮತ್ತು ಅವನ ಪ್ರೇಮ ಕಥೆ ಹಾಗಲ್ಲ. ಬಹಳ ಬಹಳ ಸ್ವಾರಸ್ಯವಾಗಿದೆ . ಹಿಂದೆ ಮುಂದೆ ನೊಡದೆ ಯೋಚನೆ ಮಾಡದೆ, ಭೂತ ಪ್ರೇತ ಯಾವುದನ್ನು ಚಿಂತಿಸದೆ ದೇವರ ಮನೆಯಲ್ಲಿ ಕುಳಿತು ಪೂಜೆ ಮಾಡಿ ಮಹಾ ಲಕ್ಷ್ಮಿ ಕೊರಳಲ್ಲಿ ಇದ್ದ ಹರಿಶಿಣ ಕೊಂಬನ್ನ ಅವಳು ಅವನ ಕೈಗೆ ನೀಡುತ್ತಾಳೆ ಅಷ್ಟೇ. ಯಾಕೆ ಎನು ಬೇಕು ಬೇಡ ಎನನ್ನು ಚಿಂತಿಸದೆ ಅವನು ಕೂಡ ಬಾಗಿ ನಿಂತ ಅವಳ ಕೊರಳಿಗೆ ಮೂರು ಗಂಟು ಹಾಕಿ ಅವಳ ಹಣೆಗೆ ಕುಂಕುಮ ಇಟ್ಟು ಒಬ್ಬರೊನ್ನಬ್ಬರು ಆಲಿಂಗಿಸಿಕೊಳ್ಳುತ್ತಾರೆ. ಅಲ್ಲಿಂದ ಅವರ ಪ್ರೇಮ ಕಥೆ ಸಾಕಷ್ಟು ಸ್ವಾರಸ್ಯಕರ ವಾಗಿ ಮೂಡಿಬರುತ್ತೆ. ನಾನ ತಿರುವುಗಳು. ನಾನ ಅಡೆತಡೆಗಳು . ಆದರೆ ಎಲ್ಲೇ ಎನೇ ಮಾಡಿದರೂ ಅವರ ಇಬ್ಬರ ನಡುವೆ ಇದ್ದ ಪ್ರೀತಿ ಮಾತ್ರ ಕಡಿಮೆ ಆಗ್ತಾನೆ ಇರಲಿಲ್ಲ. ಇನ್ನೇನು ಇಬ್ಬರ ಜೀವನ ಮುಗಿದೇ



ಹೋಯ್ತು ಅನ್ನುವಾಗ ಮತ್ತೆ ಇಬ್ಬರು ಒಟ್ಟೊಟ್ಟಿಗೆ ಅವರ ಮುಂದಿನ ಭವಿಷ್ಯದ ಬಗ್ಗೆ ಮಾತಾಡ್ತಾ ಇರ್ತಾರೆ. ಇನ್ನೇನೂ ಒಬ್ಬರಿಗೊಬ್ಬರು ದೂರ ಆಗಿಯೇ ಬಿಟ್ಟರು ಎಂದು ನೆಂಟರಿಷ್ಟರು ಸ್ನೇಹಿತರು ಯೋಚನೆ ಮಾಡ್ತಾ ಇದ್ರೆ ಒಂದೇ ತಟ್ಟೆಯಲ್ಲಿ ಇಬ್ಬರು ಒಬ್ಬರಿಗೊಬ್ಬರು ತುತ್ತನ್ನ ನೀಡುತ್ತಾ ಮೌನವಾಗಿ ಊಟ ಮಾಡ್ತಾ ಇರ್ತಾರೆ. ಇದನ್ನ ನೋಡಿದ ಪ್ರತೀ ನಿತ್ಯ ಅವರ ನೆಂಟರಿಷ್ಟು ಥಿಟಟಿಜಿಘುಟಟಿ ಮಾಡಿಕೊಂಡು ತಲೆಕೆಡಿಸಿಕೊಂಡು ಅಪ್ಪಿ ತಪ್ಪಿ ಯಾರು ಅವರ ನಡುವೆ ಹೊಗಬೇಡ್ರಿ ಅವ ಅವಳನ್ನ ಬಿಟ್ಟುಕೊಡಲ್ಲ ಅವಳು ಅವನನ್ನಬಿಟ್ಟು ಕೊಡಲ್ಲ ಮದ್ಯ ಹೊದವರು ಮೇಂಟಲ್ ಆಗ್ತಿರಿ ನೋಡಿ ಅಂತ ನಕ್ಕಿದ್ದು ಉಂಟು. ಇಬ್ಬರೀಗೂ ಒಂದೇ ಹಾಸಿಗೆ, ಒಂದೇ ಹೊದಿಕೆ ಒಂದೇ ಕೊಣೆ..ಒಂದೇ ತಟ್ಟೆ.. ಜಚೆಳಿ ಚಿಟಜ ಜತಜಡಿಥಿ ಟಠತಜಟಜಟಣ ಕೂಡ ಹೊಸದು ಅವರಿಗೆ. ಒಬ್ಬರಿಗೊಬ್ಬರು ಒಂದೇ ಪ್ರಾಣ ಎರಡು ದೇಹದಂತೆ ಬದುಕಲು ಪ್ರಾರಂಭ ಮಾಡಿ ನಾಲ್ಕು ವರ್ಷಗಳು ಕಳೆದರೂ ಎನೋ ಈಗ ಅಷ್ಟೇ ಪರಿಚಯ ಆದವರ ಹಾಗೆ ಈಗಷ್ಟೇ ಪ್ರೀತಿ ಆಗಿರುವ ಹಾಗೆ..ಇರುವ ಅವರ ಪ್ರೀತಿ ಆ ದೇವರನ್ನೂ ಥಿಂಟಜಿಘುಂಟಿ ಮಾಡಿಸ್ತಾ ಇತ್ತು.

ನೋಡುಗರಿಗೆ ಒಂದೇ ಸೋಜಿಗ ಇದು ಯಾವ ಸೇಮೆಯ ಸೆಳೆತ ಇವರದು ಒಂದು ಆಕಾಶ ಇನ್ನೊಂದು ಭೂಮಿ ಆದರೆ...ಇಬ್ಬರೂ ಸಾಧಕರು. ಆಧ್ಯಾತ್ಮದ ಚಿಂತಯಲ್ಲಿ ಇರುವವರು, ಯಾರಿಗೂ ಬೇಸರ ಮಾಡುವವರಲ್ಲ ಯಾರಿಗೂ ಬೈಯೋಲ್ಲ ಹೊಡೆಯೋಲ್ಲ ಆದರೆ ಅವರಿಬ್ಬರೂ ಒಬ್ಬರಿಗೊಬ್ಬರು ಹೊಡೆದಾಡುತ್ತಾರೆ ಕಿತ್ತಾಡುತ್ತಾರೆ ಬೈದಾಡುತ್ತಾರೆ..ಒಬ್ಬರಿಗೊಬ್ಬರು ಜಿಗಣೆ ತರ ಅಂಟಿಕೊಂಡಿರುತ್ತಾರೆ..ಆದರೆ ಬೇರೆಯವರ ಎದುರಿಗೆ ಒಬ್ಬರಿಗೊಬ್ಬರನ್ನ ಬಿಟ್ಟುಕೊಡಲ್ಲ....ಇಂತಹ ಅತೀ ಸ್ವಾರಸ್ಯದ ಒಂದು ಕಾದಂಬರಿ ಬರ್ತಾ ಇದೆ...ಸಮಾಜದಲ್ಲಿ ಅಸಾಧಾರಣ ವಾಗಿ ಸಿಗುವ ಯುವ ಹೃದಯಗಳು ಮಿಡಿಯುವ ಹಿರಿಯ ಜೀವಗಳು ಮರುಗುವ " ಪ್ರೇಮಾಗ್ನಿ"" ಕಾದಂಬರಿ ಅದು.

ಹಳ್ಳಿಯಿಂದ ದೆಲ್ಲಿಗೆ- ದೆಲ್ಲಿಯಿಂದ ಹಳ್ಳಿಗೆ... ಕುರಿ, ಧನ ಹೊಲ, ಬೆಕ್ಕು ನಾಯಿ, ಮರ ಗಿಡ ಪ್ರತೀ ಜೀವ ಸಂಕುಲಗಳಿಗೂ ಪ್ರೀತಿಯ ಸ್ಪರ್ಷ ಗಾಂದರ್ವ ವಿವಾಹ ಹಿಂದನ ಕಾಲದಲ್ಲಿ ಇತ್ತು ಅಂತ ಸಿನಿಮಾ ನೋಡಿದ್ದೇವೆ ಕೇಳಿದ್ದೇವೆ... ಈಗಿನ ಕಾಲದಲ್ಲೂ ಇದೆ ಆದರೆ, ಆಸ್ತಿ ಮತ್ತು ಸಂಬಂಧ ಗಳ ಮೇಲೆ ಹಕ್ಕನ್ನು ಚಲಾಯಿಸುವ ಸಲುವಾಗಿ ಹತ್ತಾರು ಜನರ ಮಧ್ಯ ನಡೆಯುವ ವಿವಾಹ ವನ್ನು ಸಾವಿರಾರು ಜನರ ಆಶೀರ್ವಾದ ಪಡೆದು ಆಗಿದ್ದೇವೆ ಅಂತಾರೆ ಆದರೆ ಆ ಸಾವಿರಾರು ಜನರ ಆಶೀರ್ವಾದ ಕ್ಕಾಗಿ ಅಲ್ಲ ಜನರ ನಡುವೆ ವಿವಾಹ ಆಗುವುದು ಸಾಕ್ಷಿ ಗಾಗಿ. ಎಲ್ಲಿ ನನಗೆ ಅವನು ಮೋಸ ಮಾಡ್ತಾನೋ ಇಲ್ಲ ಇವಳು ಮೊಸ ಮಾಡಿ ಬಿಡುತ್ತಾಳೊ ಅನ್ನುವ ಆತಂಕ ಭಯ ಅಷ್ಟೇ. ಸಾಕಷ್ಟು ನೈಜ ಸಂದೇಶಗಳನ್ನ ಈಗಿನ ಸಮಾಜಕ್ಕೆ ಮಾದರಿಯಾಗಿ ಮುಂದಿನ ಪೀಳಿಗೆಗೆ ತಮ್ಮ ಬದುಕನ್ನ ಕೊಡುಗೆ ನೀಡುವ ಅಸಾಧಾರಣ ಜೀವನ ಚರಿತ್ರೆ!. ನಿಮ್ಮ ಆಶೀರ್ವಾದ ಇರಲಿ. ಕಾದು ನೋಡೋಣ ಮುಂದಿನ ಸಂಚಿಕೆಯಲ್ಲಿ

**-ಇಂತಿ ನಿಮ್ಮ ಮುದ್ದು ಭಾಗು.**

### ಉಚಿತ ಕಾಲು ಬಾಯಿ ರೋಗ ಲಸಿಕಾ ಅಭಿಯಾನ ಸಭೆಯಲ್ಲಿ ಜಿಲ್ಲಾಧಿಕಾರಿ ಸುರೇಶ್ ಬಿ.ಇಟ್ನಾಳ್ ಸೂಚನೆ

## ಏಪ್ರಿಲ್ 26 ರಿಂದ ಜೂನ್ 9 ರವರೆಗೆ ಜಾನುವಾರುಗಳಿಗೆ 7ನೇ ಸುತ್ತಿನ ಲಸಿಕಾ ಅಭಿಯಾನ ಕಾರ್ಯಕ್ರಮ ಯಶಸ್ವಿಗೊಳಿಸಿ



**ದಾವಣಗೆರೆ:** ಜಿಲ್ಲೆಯಾದ್ಯಂತ ಇದೇ ಏಪ್ರಿಲ್ 26 ರಿಂದ ಜೂನ್ 9 ರವರೆಗೆ ಜಾನುವಾರುಗಳಿಗೆ ಉಚಿತ ಲಸಿಕಾ ಅಭಿಯಾನ ನಡೆಯಲಿದ್ದು, ಲಸಿಕಾ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಪಂಚಾಯತ್ ಸಿಇಓ ಸುರೇಶ್ ಬಿ. ಇಟ್ನಾಳ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಸೋಮವಾರ ಆಯೋಜಿಸಲಾಗಿದ್ದ "ಉಚಿತ ಕಾಲು ಬಾಯಿ ರೋಗ ಲಸಿಕಾ ಅಭಿಯಾನ" ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಕಾಲು ಬಾಯಿ ರೋಗವು ವೈರಾಣುವಿನಿಂದ ಹರಡುವ ಸಾಂಕ್ರಾಮಿಕ ರೋಗವಾಗಿದ್ದು, ಇದರಿಂದ ರೈತರು ಆರ್ಥಿಕವಾಗಿ ಸಂಕಷ್ಟಕ್ಕೆ ಸಿಲುಕುತ್ತಾರೆ. ಆದ್ದ–ರಿಂದ ಶೇ.100 ರಷ್ಟು ಲಸಿಕೆ ನೀಡುವ ಮೂಲಕ ರೋಗವನ್ನು ಸಂಪೂರ್ಣ ನಿಯಂತ್ರಿಸಿ, ನಿರ್ಮೂಲನೆ ಮಾಡಬೇಕು. ಮಾನವನಿಗೆ ಮಾತು ಬರುವುದರಿಂದ ಸಮಸ್ಯೆಗಳನ್ನು ಹೇಳಿಕೊಂಡು ವೈದ್ಯನ ಬಳಿ ತೆರಳುತ್ತಾನೆ, ಆದರೆ ಮಾತು ಬಾರದ ಮೂಕ ಜೀವಿ ಜಾನುವಾರುಗಳ ಗತಿ ಏನು?. ಆದ್ದರಿಂದ ಸೂಕ್ಷ್ಮವಾಗಿ ಗಮನಿಸಿ ಲೋಪವಾಗದಂತೆ ಪ್ರತಿ ಜಾನುವಾರುಗಳಿಗೆ ಲಸಿಕೆ ನೀಡಬೇಕು ಎಂದ ಅವರು, ಪಶುವೈದ್ಯಕೀಯ ಇಲಾಖೆ ಸಹಾಯವಾಣಿ 1962 ಸಂಖ್ಯೆಯನ್ನು ಪ್ರತಿ ಪಶುವೈದ್ಯಕೀಯ ಇಲಾಖೆಯಲ್ಲಿ ಭಿತ್ತರಿಸಬೇಕು. ಹಾಗೆಯೇ ಇಲಾಖೆ ವತಿಯಿಂದ ಮತ್ತಷ್ಟು ಪರಿಣಾಮಕಾರಿಯಾಗಿ ರೈತರಿಗೆ ತಲುಪುವಂತೆ ಪ್ರಚಾರಪಡಿಸಿ ಎಲ್ಲಾ ಜಾನುವಾರುಗಳಿಗೆ ಲಸಿಕೆ ಹಾಕುವಂತೆ ನೋಡಿಕೊಳ್ಳಬೇಕೆಂದರು.

ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆ ಉಪನಿರ್ದೇಶಕ ಹೆಚ್. ಎಂ.ಮಹಶ್ ಮಾತನಾಡಿ, ಜಿಲ್ಲೆಯಲ್ಲಿ 2,37,801 ದನ, 91,896 ಎಮ್ಮೆ ಸೇರಿ ಒಟ್ಟು 3,29,697 ಜಾನುವಾರುಗಳಿದ್ದು, 3,13,100 ಲಸಿಕೆ ಲಭ್ಯವಿದೆ. ಜಿಲ್ಲಾದ್ಯದಂತ 3000 ಬ್ಲಾಕ್‌ಗಳನ್ನು ಗುರುತಿಸಿದ್ದು, 321 ಲಸಿಕಾದಾರರು ಪ್ರತಿ ಗ್ರಾಮ ಹಾಗೂ ಮನೆಗೆ ತೆರಳಿ ಜಾನುವಾರುಗಳಿಗೆ ಲಸಿಕೆ ನೀಡಲಿದ್ದಾರೆ ಎಂದರು. .

ಕೋಳಿ ವಿತರಣೆಗೆ ಅರ್ಹ ಮಹಿಳೆಯರ ಆಯ್ಕೆ;

ಮಹಿಳೆಯರನ್ನು ಆರ್ಥಿಕವಾಗಿ ಸಬಲರಾಗಿಸಲು ಇಲಾಖೆ ವತಿಯಿಂದ ಅರ್ಹ ಪ.ಜಾತಿ, ಪ.ಪಂಗಡ ಹಾಗೂ ಸಾಮಾನ್ಯ ಮಹಿಳೆಯರಿಗೆ ಉಚಿತವಾಗಿ ಕೋಳಿ ಮರಿ ನೀಡಲಾಗುವುದು. ಜಿಲ್ಲೆಯಾದ್ಯಂತ 168 ಪರಿಶಿಷ್ಟ ಜಾತಿ ಮಹಿಳೆಯರಿಂದ ಅರ್ಜಿಗಳು ಸ್ವೀಕೃತವಾಗಿದ್ದು, ಅದರಲ್ಲಿ 45 ಆಯ್ಕೆ ಗುರಿ ನೀಡಲಾಗಿದೆ.

ಪರಿಶಿಷ್ಟ ಪಂಗಡ ಮಹಿಳೆಯರಿಂದ 659 ಅರ್ಜಿ ಸ್ವೀಕೃತವಾಗಿದ್ದು, 645 ಹಾಗೂ 737 ಸಾಮಾನ್ಯ ಮಹಿಳೆಯರಿಂದ ಅರ್ಜಿ ಸ್ವೀಕೃತವಾಗಿದ್ದು, 238 ಆಯ್ಕೆ ಮಾಡಿಕೊಳ್ಳಲು ಗುರಿ ನೀಡಲಾಗಿದೆ. ಜಿಲ್ಲೆಯಲ್ಲಿ ಒಟ್ಟಾರೆ 1065 ಅರ್ಜಿಗಳು ಸ್ವೀಕೃತವಾಗಿದ್ದು, ಇಲಾಖೆ ವತಿಯಿಂದ 737 ಆಯ್ಕೆಗೆ ಭೌತಿಕ ಗುರಿ ನೀಡಲಾಗಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ರಾಷ್ಟ್ರೀಯ ಜಾನುವಾರು ರೋಗ ನಿಯಂತ್ರಣ ಕಾರ್ಯಕ್ರಮದ "ಉಚಿತ ಕಾಲುಬಾಯಿ ರೋಗ ಲಸಿಕಾ ಅಭಿಯಾನದ" ಪೋಸ್ಟರ್ ಬಿಡುಗಡೆಗೊಳಿಸಲಾಯಿತು.

ಸಭೆಯಲ್ಲಿ ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಎಲ್ಲಾ ಪಶುವೈದ್ಯಾಧಿಕಾರಿಗಳು, ಕರ್ನಾಟಕ ಕುಕ್ಕುಟ ಮಾಹಮಂಡಳಿ ಪ್ರಾದೇಶಿಕ ನಿರ್ದೇಶಕರು, ಸಮಿತಿ ಸದಸ್ಯರು ಉಪಸ್ಥಿತರಿದ್ದರು.

## ಯೋಗ ಗುರು ಡಾ॥ ರಾಘವೇಂದ್ರ ಗುರೂಜಿಯವರಿಗೆ ಜೀವಮಾನ ಸಾಧನೆಗಾಗಿ 'ಪಿನಾಕಲ್' ರಾಷ್ಟ್ರೀಯ ಪುರಸ್ಕಾರ

**ನವದೆಹಲಿ/ದಾವಣಗೆರೆ:** ನವದೆಹಲಿಯ ಭಾರತ ಸರ್ಕಾರದ ಕಾರ್ಪೋರೇಟ್ ವ್ಯವಹಾರಗಳ ಸಚಿವಾಲಯ. ನೀತಿ ಆಯೋಗದ ಸಚಿವಾಲಯ, ಸೂಕ್ಷ್ಮ ಸಣ್ಣ ಮತ್ತು ಮಧ್ಯಮ ಉದ್ಯಮ ಸಚಿವಾಲಯಗಳಿಂದ ಮಾನ್ಯತೆ ಪಡೆದ 'ಲೆಜೆಂಡರಿ ಪೀಸ್ ಅವಾರ್ಡ್ ಕೌನ್ಸಿಲ್' ವತಿಯಿಂದ ಪ್ರತಿವರ್ಷವೂ ಜೀವಮಾನ ಸಾಧನೆಗಾಗಿ ಕೊಡ ಮಾಡುವ ಅತ್ಯುನ್ನತ ರಾಷ್ಟ್ರೀಯ ಪುರಸ್ಕಾರವಾದ 'ಪಿನಾಕಲ್ ಅವಾರ್ಡ್–2025'ರ ಸಾಲಿನ ಗೌರವ ಪುರಸ್ಕಾರವನ್ನು ಆದರ್ಶ ಯೋಗ ಪ್ರತಿಷ್ಠಾನ (ರಿ), ಶ್ರೀ ಮಹಮ್ಮಾಯಿ ವಿಶ್ವ–ಯೋಗ ಮಂದಿರ ಹಾಗೂ ಯೋಗ ಚಿಕಿತ್ಸಾ ಕೇಂದ್ರದ ಮ್ಯಾನೇಜಿಂಗ್ ಟ್ರಸ್ಟಿ ಯೋಗಗುರು, ಯೋಗ ತಜ್ಞ ಡಾ॥ ಯೋಗಾಚಾರ್ಯ ಶ್ರೀ ರಾಘವೇಂದ್ರ ಗುರೂಜಿಯವರಿಗೆ ಪ್ರದಾನ ಮಾಡಲಾಗಿದೆ.



ನವದೆಹಲಿಯ ಸಂಸತ್ ಮಾರ್ಗದಲ್ಲಿರುವ ಕಾನ್ಸ್ಟಿಟ್ಯೂಷನ್ ಆಫ್ ಇಂಡಿಯಾದ ಸಭಾಂಗಣದಲ್ಲಿ ಆಯೋಜಿಸಲಾಗಿದ್ದ ಡೈನಾಮಿಕ್ ಎಕ್ಸಲೆನ್ಸ್ ಪದವಿ ಪ್ರದಾನ ಸಮಾರಂಭದಲ್ಲಿ ರಾಷ್ಟ್ರೀಯ ಲಾಂಛನ, ಬಂಗಾರದ ಲೇಪನವಿರುವ ಪದಕ, ಪರಿಷತ್‌ನ ಖಾಯಂ ಸದಸ್ಯತ್ವ, ಗುರುತಿನ ಚೀಟಿಯನ್ನು ನೀಡಿ ಶಾಲು ಹೊದಿಸಿ ಗೌರವಿಸಿ, ಪ್ರಶಸ್ತಿಯನ್ನು ಪ್ರದಾನ ಮಾಡಲಾಯಿತು.

ಪ್ರಶಸ್ತಿ ಪುರಸ್ಕಾರ ಸಮಾರಂಭದಲ್ಲಿ ಭಾರತ ಸರ್ಕಾರದ ರಾಷ್ಟ್ರೀಯ ಸಫಾಯಿ ಕರ್ಮಚಾರಿ ಆಯೋಗದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಸಚಿವಾಲಯದ ಉಪಾಧ್ಯಕ್ಷರಾದ ಶ್ರೀಮತಿ ಅಂಜನ ಪನ್ವಾರ್, ಪಟೇಲ್ ಲೋಕ್ ಸಾಂಸ್ಕೃತಿಕ ಸಂಸ್ಥಾನ ನವದೆಹಲಿಯ ಶ್ರೀ ಬ್ರಹ್ಮಪಾಲ್ ನಗರ್, ಪೂರ್ವಾಂಚಲ ಮೋರ್ಚಾದ ರಾಜ್ಯಾಧ್ಯಕ್ಷರಾದ ಶ್ರೀ ಸಂತೋಷ್ ಓಜಾ, ಪರಿಷತ್‌ನ ಮುಖ್ಯಸ್ಥರಾದ ತರ್‌ವಿಂದರ್ ಸಿಂಗ್ ಮತ್ತು ಸೋನಿಯಾವಾಲಿಯಾ ಮತ್ತಿತರ ಗಣ್ಯ ಮಾನ್ಯರ ಉಪಸ್ಥಿತಿಯಲ್ಲಿ ಡಾ॥ ರಾಘವೇಂದ್ರ ಗುರೂಜಜಿಯವರಿಗೆ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಡಾ॥ ರಾಘವೇಂದ್ರ ಗುರೂಜಿಯವರು ಕಳೆದ ಸುಮಾರು 47 ವರ್ಷಗಳಿಂದ ಯೋಗ ಕ್ಷೇತ್ರದಲ್ಲಿ ಸಾಧನೆ ಮತ್ತು ಸೇವೆಯನ್ನು ನಾಡಿನ ಹೊರಗೂ, ಒಳಗೂ 1250 ಕ್ಕೂ ಹೆಚ್ಚು ಉಚಿತ ಯೋಗ ಶಿಬಿರಗಳನ್ನು ಆಯೋಜಿಸಿ 2536 ಕ್ಕೂ ಹೆಚ್ಚು ಜನರಿಗೆ ಯೋಗ ಚಿಕಿತ್ಸೆಯ ಮೂಲಕ ಔಷಧಿ ರಹಿತ ಚಿಕಿತ್ಸೆ ನೀಡಿರುತ್ತಾರೆ, ಸಾವಿರಾರು ಯೋಗ ಲೇಖನಗಳನ್ನು ಬರೆದು, ಹಲವು ಪ್ರಮುಖ ರಾಷ್ಟ್ರೀಯ ಮತ್ತು ಅಂತಾರಾಷ್ಟ್ರೀಯ ಸಮ್ಮೇಳನಗಳಲ್ಲಿ ಪ್ರಬಂಧ ಮಂಡಿಸಿ, ಹಲವು ಯೋಗ ಕೃತಿಗಳನ್ನು ರಚಿಸಿ ಪ್ರಕಟಿಸಿರುತ್ತಾರೆ. ಅಲ್ಲದೇ ಯೋಗ ಡಿ.ವಿ.ಡಿ., ಸಿ.ಡಿ., ಕ್ಯಾಸೆಟ್‌ಗಳನ್ನು ಬಿಡುಗಡೆಗೊಳಿಸಿರುತ್ತಾರೆ. ಇವರು ಮಂಡಿಸಿದ ಮಹಾಪ್ರಬಂಧಕ್ಕಾಗಿ ಪಿ.ಹೆಚ್.ಡಿ. ಡಾಕ್ಟರೇಟ್ ಪದವಿಯೊಂದಿಗೆ ಬಂಗಾರದ ಪದಕವು ಲಭಿಸಿರುತ್ತದೆ. ಯು.ಎಸ್.ಎ.ಯ ಎಫ್.ಡಬ್ಲ್ಯೂ.ಎಸ್.ಐ.ಎಂ. ಫೆಲೋಶಿಪ್, ರಾಷ್ಟ್ರೀಯ ಲೋಕನಾಯಕ ಜಯಪ್ರಕಾಶ್ ನಾರಾಯಣ್ ಪುರಸ್ಕಾರ, ಪತಂಜಲಿ ಪುರಸ್ಕಾರ, ಬಸವಜ್ಯೋತಿ, ಯೋಗ ಚೇತನ, ಯೋಗರತ್ನ, ಕರ್ನಾಟಕ ಯೋಗ ಶಿಕ್ಷಣ ರತ್ನ, ಯೋಗ ಪ್ರಭಾಕರ, ಯೋಗಾಚಾರ್ಯ ಶ್ರೀ ಹೀಗೆ ಹತ್ತು ಹಲವು ಬಿರುದು, ಪ್ರಶಸ್ತಿ–ಪುರಸ್ಕಾರಗಳನ್ನು ತಮ್ಮ ಮುಡಿಗೇರಿಸಿಕೊಂಡಿರುವ ಡಾ॥ ರಾಘವೇಂದ್ರ ಗುರೂಜಿಯವರು ಪ್ರಸ್ತುತ ದಾವಣಗೆರೆಯ ದೇವರಾಜ ಅರಸು ಲೇಔಟ್ 'ಸಿ' ಬ್ಲಾಕ್‌ನಲ್ಲಿ ನಿತ್ಯವೂ ಜನಸಾಮಾನ್ಯರಿಗೆ ಆರೋಗ್ಯಕ್ಕಾಗಿ, ಯೋಗ ತರಗತಿ, ತರಬೇತಿ ಮತ್ತು ಎಲ್ಲಾ ದೀರ್ಘತರವಾದ ಖಾಯಿಲೆಗಳಿಗೆ ಔಷಧಿ ರಹಿತ ಯೋಗ ಚಿಕಿತ್ಸೆಯನ್ನು ಕಳೆದ ಹಲವಾರು ವರ್ಷಗಳಿಂದ ಸೇವೆಯನ್ನು ಸಲ್ಲಿಸುತ್ತಿದ್ದಾರೆ. ಗುರೂಜಿಯವರ ಉನ್ನತ ಸಾಧನೆ ಮತ್ತು ಸೇವೆಯನ್ನು ಪರಿಗಣಿಸಿ ಈ ಪ್ರತಿಷ್ಠಿತ ಪುರಸ್ಕಾರವನ್ನು ನೀಡಲಾಗಿದೆ. ಈ ಪ್ರಶಸ್ತಿಯನ್ನು ತಮ್ಮ ಮೂಲ ಗುರುಗಳಾದ ಮಲ್ಲಾಡಿಹಳ್ಳಿಯ ಪರಮ ಪೂಜ್ಯ ಶ್ರೀ ಶ್ರೀ ರಾಘವೇಂದ್ರ ಸ್ವಾಮೀಜಿಯವರಿಗೆ ಶ್ರದ್ಧೆಯಿಂದ ಸಮರ್ಪಿಸಲಾಗಿದೆ ಎಂದು ತಮ್ಮ ಸಂತೋಷವನ್ನು ಈ ಮೂಲಕ ಹಂಚಿಕೊಂಡಿರುತ್ತಾರೆ

## ನಾಳೆ ಡಾ.ರಾಜ್‌ಕುಮಾರ್ ಅವರ 97ನೇ ಜನ್ಮ ದಿನಾಚರಣೆ



**ಚಿಕ್ಕಮಗಳೂರು:** ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಂಯುಕ್ತ ಆಶ್ರಯದಲ್ಲಿ ವರನಟ ಡಾ.ರಾಜ್‌ಕುವಾರ್ ಅವರ 97ನೇ ಜನ್ಮ ದಿನಾಚರಣೆ ಏ.24 ರಂದು ಬೆ. 11 ಗಂಟೆ–ಗೆ ನಗರದ ಕುವೆಂಪು ಕಲಾಮಂದಿರದ ಹೇಮಾಂಗಣ ಸಭಾಂಗಣದಲ್ಲಿ ನಡೆಯಲಿದೆ.

ಇಂಧನ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರು ಆದ ಮಾನ್ಯಶ್ರೀ ಕೆ.ಜೆ.ಜಾರ್ಜ್ ಅವರು ಕಾರ್ಯಕ್ರಮವನ್ನು ಉದ್ಘಾಟಿಸಲಿದ್ದು, ವಿಧಾನ ಪರಿಷತ್ ಉಪಸಭಾಪತಿ ಎಂ.ಕೆ.ಪ್ರಾಣೇಶ್, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಶೃಂಗೇರಿ ಶಾಸಕ ಟಿ.ಡಿ.ರಾಜೇಗೌಡ, ಅನಿವಾಸಿ ಭಾರತೀಯ ಕೋಶದ ಉಪಾಧ್ಯಕ್ಷೆ ಡಾ.ಆರತಿ ಕೃಷ್ಣ, ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ಅಧ್ಯಕ್ಷ ಎಂ.ಶ್ರೀನಿವಾಸ್ ಅವರುಗಳು ಭಾಗವಹಿಸಲಿದ್ದು, ಚಿಕ್ಕಮಗಳೂರು ಶಾಸಕ ಹೆಚ್.ಡಿ.ತಮ್ಮಯ್ಯ ಅವರು ಅಧ್ಯಕ್ಷತೆ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ಉಡುಪಿ ಚಿಕ್ಕಮಗಳೂರು ಕ್ಷೇತ್ರದ ಸಂಸದ ಕೋಟ ಶ್ರೀನಿವಾಸ ಪೂಜಾರಿ, ರಾಜ್ಯಸಭಾ ಸದಸ್ಯ ಜೈರಾಮ್ ರಮೇಶ್, ಹಾಸನ ಸಂಸದ ಶ್ರೇಯಸ್ ಎಂ.ಪಟೇಲ್, ವಿಧಾನ ಪರಿಷತ್ ಸದಸ್ಯ ಎಸ್.ಎಲ್.ಭೋಜೇಗೌಡ, ಶಾಸಕರಾದ ತರೀ–ಕೆರೆಯ ಜಿ.ಹೆಚ್.ಶ್ರೀನಿವಾಸ್, ಕಡೂರಿನ ಕೆ.ಎಸ್.ಆನಂದ್, ಮೂಡಿಗೆರೆಯ ನಯನ ಮೋಟಮ್ಮ, ವಿಧಾನ ಪರಿಷತ್ ಸದಸ್ಯರಾದ ಸಿ.ಟಿ.ರವಿ, ಡಾ.ಧನಂಜಯ ಸರ್ಜಿ, ಭದ್ರಾ ಕಾಡಾ ಅಧ್ಯಕ್ಷ ಡಾ.ಕೆ.ಪಿ.ಅಂಶುಮಂತ್, ಕ.ರಾ.ಕೃಷಿ ಉತ್ಪನ್ನ ಸಂಗ್ರಹಣೆ ಮತ್ತು ರಫ್ತು ನಿಗಮದ ಅಧ್ಯಕ್ಷ ಬಿ.ಹೆಚ್.ಹರೀಶ್, ನಗರಸಭೆ ಅಧ್ಯಕ್ಷೆ ಸುಜಾತ ಶಿವಕುಮಾರ್ ಪಾಲ್ಗೊಳ್ಳುವರು. ಸಾಹಿತಿ ಬಿ.ತಿಪ್ಪೇರುದ್ರಪ್ಪ ಉಪನ್ಯಾಸ ನೀಡುವರು.

## ದ್ವಿತೀಯ ಪಿಯುಸಿ ಪರೀಕ್ಷೆ–2 : ಪೂರ್ವಸಿದ್ಧತಾ ಸಭೆ

## ಪರೀಕ್ಷೆಗಳನ್ನು ಸುವ್ಯವಸ್ಥಿತವಾಗಿ ಜರುಗಿಸಲು ಕ್ರಮ ವಹಿಸಿ

**ಗದಗ :** ಜಿಲ್ಲೆಯಲ್ಲಿ ದ್ವಿತೀಯ ಪಿಯುಸಿ ಪರೀಕ್ಷೆ–2 ಪರೀಕ್ಷೆಗಳು ಏಪ್ರಿಲ್ 24 ರಿಂದ ಮೇ 8 ರವರೆಗೆ ನಡೆಯಲಿದ್ದು ಪರೀಕ್ಷೆಗಳನ್ನು ಸುಗಮವಾಗಿ ಹಾಗೂ ಸುವ್ಯವಸ್ಥಿತವಾಗಿ ಜರುಗಿಸಲು ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್ ಅವರು ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ವಿಡಿಯೋ ಸಭಾಂಗಣದಲ್ಲಿ ಜರುಗಿದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪರೀಕ್ಷಾ ಸಮಯದಲ್ಲಿ ಯಾವುದೇ ಅಕ್ರಮ, ಅವ್ಯವಹಾರ, ಲೋಪದೋಷಗಳಾಗದಂತೆ ಅಚ್ಚುಕಟ್ಟಾಗಿ ಪರೀಕ್ಷಾ ಕಾರ್ಯ ನಿರ್ವಹಿಸಬೇಕು. ಪರೀಕ್ಷಾ ಕಾರ್ಯಗಳಿಗೆ ನಿಯೋಜಿಸಿದ ಅಧಿಕಾರಿಗಳು ತಮಗೆ ನಿಗದಿಪಡಿಸಿದ ಕರ್ತವ್ಯಗಳನ್ನು ಶಿಸ್ತು ಮತ್ತು ಜವಾಬ್ದಾರಿಯಿಂದ ನಿರ್ವಹಿಸಬೇಕೆಂದು ಜಿಲ್ಲಾಧಿಕಾರಿಗಳು ತಿಳಿಸಿದರು.

ಪ್ರತಿಬಂಧಕಾಜ್ಞೆ ಜಾರಿ: ಪರೀಕ್ಷಾ ಕೇಂದ್ರಗಳಲ್ಲಿ ಶಾಂತಿ ಮತ್ತು ಸುವ್ಯವಸ್ಥೆ ಕಾಪಾಡುವ ಹಿತದೃಷ್ಟಿಯಿಂದ ಪರೀಕ್ಷಾ ಕೇಂದ್ರದ ಸುತ್ತಲೂ 200 ಮೀಟರ್ ಪರಿಮಿತಿಯೊಳಗೆ ಏಪ್ರಿಲ್ 24 ರಿಂದ ಮೇ 8 ರವರೆಗೆ ಪ್ರತಿಬಂಧಕಾಜ್ಞೆ ಜಾರಿಗೊಳಿಸಲಾಗಿದೆ. ಈ ಪತ್ರಿಬಂಧಕಾಜ್ಞೆ ಕಟ್ಟುನಿಟ್ಟಾಗಿ ಜಾರಿಗೊಳಿಸಲು ಹಾಗೂ ಸೂಕ್ತ ಬಂದೋಬಸ್ತ್ ಒದಗಿಸಲು ಪೊಲೀಸ ಇಲಾಖೆಗೆ ಆದೇಶಿಸಲಾಗಿದೆ.

ಪರೀಕ್ಷಾರ್ಥಿಗಳು ಹಾಗೂ ಪರೀಕ್ಷೆಯಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಹೊರತುಪಡಿಸಿ ಇತರೆ ಯಾವುದೇ ವ್ಯಕ್ತಿ ಅಥವಾ ಐದು ಐದಕ್ಕಿಂತ ಹೆಚ್ಚು ಜನರು ಗುಂಪು ಕೂಡುವುದು, ಅಥವಾ ವ್ಯಕ್ತಿಗಳ ಗುಂಪುಗಳ ಪ್ರವೇಶವನ್ನು ಹಾಗೂ ಅನಧಿಕೃತ ವ್ಯಕ್ತಿಗಳಿಗೆ ಪರೀಕ್ಷಾ ಕೇಂದ್ರಗಳ ಪ್ರವೇಶವನ್ನು ನಿರ್ಬಂಧಿಸಿದೆ. ಈ ಪ್ರದೇಶ ವ್ಯಾಪ್ತಿಯಲ್ಲಿ ಬರುವ ಝರಾಕ್ಸ್ ಅಂಗಡಿ, ಸೈಬರ್ ಸೆಂಟರ್, ಬುಕ್‌ಸ್ಟಾಲ್, ಫೋಟೆ–ೋ ಕಾಪಿಯರ್‌ಗಳನ್ನು ಬಂದ್ ಮಾಡಲು ಆದೇಶಿಸಿದೆ.



ಪರೀಕ್ಷಾ ಕೇಂದ್ರಗಳಲ್ಲಿ ಮೊಬೈಲ್ ಫೋನ್ ಮತ್ತು ಇತರೇ ಸಂಪರ್ಕ ಸಲಕರಣೆಗಳನ್ನು ತರುವುದನ್ನು ನಿಷೇಧಿಸಲಾಗಿದೆ. ಅಭ್ಯರ್ಥಿಗಳು ಪರೀಕ್ಷಾ ಕೊಠಡಿಯ ಒಳಗೆ ಯಾವುದೇ ರೀತಿಯ ಕೈಗಡಿಯಾರವನ್ನು ಕಟ್ಟಿ–ಕೊಂಡು ತೆಗೆದುಕೊಂಡು ಹೋಗುವಂತಿಲ್ಲ. ಅಭ್ಯರ್ಥಿಗಳು ಪರೀಕ್ಷಾ ಸಮಯದಲ್ಲಿ ಪರೀಕ್ಷಾ ಕೊಠಡಿಯ ಒಳಗೆ ಯಾವುದೇ ಆಧುನಿಕ ಎಲೆಕ್ಟ್ರಾನಿಕ್ಸ್ ಉಪಕರಣಗಳು, ಮೊಬೈಲ್ ಫೋನ್ , ಬ್ಲೂಟೂಥ್, ಸೈಡ್ ರೂಲ್ಸ್, ಕ್ಯಾಲ್ಕ್ಯುಲೇಟರ್, ವೈಟ್ ಫ್ಲುಯಿಡ್, ವೈರ್‌ಲೆಸ್ ಸೆಟ್ಸ್, ಪೇಪರ್ ಚೀಟಿ, ಬುಕ್/ಪುಸ್ತಕ ಇತ್ಯಾದಿಗಳನ್ನು ತರುವುದನ್ನು ನಿಷೇಧಿಸಲಾಗಿದೆ.

ಅಪರ ಜಿಲ್ಲಾಧಿಕಾರಿ ಶ್ರೀಮತಿ ಅನ್ನಪೂರ್ಣ ಎಂ ಮಾತನಾಡಿ ಜಿಲ್ಲೆಯಲ್ಲಿ ದ್ವಿತೀಯ ಪಿಯುಸಿ ಪರೀಕ್ಷೆ –2 ಪರೀಕ್ಷೆಗಳನ್ನು ಯಾವುದೇ ಅಕ್ರಮಕ್ಕೆ ಆಸ್ಪದ ನೀಡದೇ ಪಾರದರ್ಶಕವಾಗಿ ಜರುಗಿಸಬೇಕೆಂದು ತಿಳಿಸಿದರು.ಪದವಿ ಪೂರ್ವ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಎಸ್.ಬಿ. ಮಸನಾಯಕ ಅವರು ಮಾತನಾಡಿ ಜಿಲ್ಲೆಯ 9 ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆಗಳು ಜರುಗಲಿದ್ದು ಪರೀಕ್ಷೆ ಸುಗಮವಾಗಿ ಜರುಗಲು ಸಕಲ ಸಿದ್ಧತೆಗೆ ಕ್ರಮ ವಹಿಸಲಾಗಿದೆ ಎಂದು ಸಭೆಗೆ ಮಾಹಿತಿ ನೀಡಿ–ದರು. ಸಭೆಯಲ್ಲಿ ಪರೀಕ್ಷಾ ಕೇಂದ್ರಗಳ ಸ್ವಚ್ಛತೆ, ಸಿ.ಸಿ.ಟಿವಿ ಅಳವಡಿಕೆ, ಸೂಕ್ತ ಬಂದೋಬಸ್ತ್ ಕುರಿತು ಚರ್ಚಿಸಲಾಯಿತು.

ಈ ಸಂದರ್ಭದಲ್ಲಿ ಡಯಟ್ ಪ್ರಾಂಶುಪಾಲರಾದ ಜಿ.ಎಲ್. ಬಾರಾಟಕ್ಕೆ ಸೇರಿದಂತೆ ಪರೀಕ್ಷಾ ಕೇಂದ್ರದ ಮುಖ್ಯಸ್ಥರು, ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

## ರೈತ ಬಾಂಧವರಿಗೆ ಸಲಹೆ

**ಗದಗ :** ಜಿಲ್ಲೆಯಲ್ಲಿ 2025–26ನೇ ಸಾಲಿನ ಪೂರ್ವ ಮುಂಗಾರು ಮಳೆ ಉತ್ತಮವಾಗಿ ಶುರುವಾಗಿದ್ದು, ಮುಂಗಾರು ಮಳೆಯೂ ಕೂಡ ಉತ್ತಮವಾಗುವ ನಿರೀಕ್ಷೆಯಿದೆ. ರೈತ ಬಾಂಧವರು ಮಾಗಿ ಉಳುಮೆ ಕೈಗೊಳ್ಳಲು ಸೂಕ್ತ ಸಮಯವಾಗಿದೆ. ಇಳಿಜಾರಿಗೆ ಅಡ್ಡಲಾಗಿ ಬದು ನಿರ್ಮಾಣ ಮಾಡಿಕೊಂಡಲ್ಲಿ, ಬಿದ್ದ ಮಳೆಯ ನೀರನ್ನು ಹಿಡಿದಿಟ್ಟುಕೊಳ್ಳಬಹುದು. ರೈತರು ಬಿತ್ತನೆಗೆ ಅವಸರ ಮಾಡದೇ, ಮಣ್ಣಿನಲ್ಲಿ ಸಂಪೂರ್ಣ ತೇವಾಂಶವಾದ ನಂತರ ಬಿತ್ತನೆ ಕೈಗೊಳ್ಳಲು ತಿಳಿಸಿದೆ. ಇಲ್ಲದೇ ಹೋದರೆ ಬಿತ್ತಿದ ಬೆಳೆಯು ಸರಿಯಾಗಿ ಮೊಳಕೆ ಬರಲು ಸಾಧ್ಯವಾಗದೇ ಇರಬಹುದು, ಅಥವಾ ಬೆಳವಣಿಗೆ ವೇಳೆಗೆ ತೇವಾಂಶ ಕೊರತೆ ಉಂಟಾಗಬಹುದಾಗಿದೆ. ಜಿಲ್ಲೆಯಲ್ಲಿ ಬಹುಶಃ ಎಲ್ಲ ತಾಲ್ಲೂಕುಗಳಲ್ಲಿ ಬೇಸಿಗೆ ಬೆಳೆಗಳು ಕಟಾವಿಗೆ ಬಂದಿದ್ದು, ಕಟಾವಿನ ನಂತರ ಭೂಮಿ ಸಿದ್ಧಪಡಿಸಲು ಉತ್ತಮ ಸಮಯವಾಗಿದೆ. ರೈತರು ತಮ್ಮ ಭೂಮಿಯ ಮಣ್ಣು ಪರೀಕ್ಷೆ ಕೈಗೊಂಡು, ವಿಶ್ಲೇಷಣಾ ವರದಿಯ ಆಧಾರದ ಮೇಲೆ ಬೆಳೆಗಳಿಗೆ ರಸಗೊಬ್ಬರ ಮತ್ತು ಕಾಂಪೋಸ್ಟ್ ಗೊಬ್ಬರಗಳನ್ನು ನೀಡಿ ಸಮಗ್ರ ಪೋಷಕಾಂಶ ಪದ್ಧತಿ ಅನುಸರಿಸಿದಲ್ಲಿ ಭೂಮಿಯ ಫಲವತ್ತತೆ ಮತ್ತು ಉತ್ಪಾದಕತೆಯನ್ನು ಕಾಪಾಡಬಹುದಾಗಿದೆ.

ಜಿಲ್ಲೆಯಲ್ಲಿ 2025–26 ನೇ ಸಾಲಿನ ಮುಂಗಾರು ಹಂಗಾಮಿಗೆ ಮೆಕ್ಕೆ ಜೋಳ 1,15,700 ಹೆ., 1,32,500 ಹೆ. ಹೆಸರು, 21,000 ಹೆ. ಶೇಂಗಾ, 7,500 ಹೆ. ಸೂರ್ಯಕಾಂತಿ, ಹಾಗೂ 17,000 ಹೆ. ಹತ್ತಿ ಸೇರಿದಂತೆ ಒಟ್ಟು 3,06,185 ಹೆ. ಪ್ರದೇಶದಲ್ಲಿ ಬಿತ್ತನಾ ಕ್ಷೇತ್ರದ ಗುರಿಯಿದೆ. ಜಿಲ್ಲೆಯ ರೈತರಿಗೆ ಬಿತ್ತನೆ ಬೀಜ ಹಾಗೂ ರಸಗೊಬ್ಬರದ ಕೊರತೆಯಾಗದಂತೆ ಸಾಕಷ್ಟು ಪ್ರಮಾಣದಲ್ಲಿ ದಾಸ್ತಾನೀಕರಿಸಲು ಕ್ರಮ ಕೈಗೊಳ್ಳಲಾಗಿದೆ?. ರೈತರು ಆತಂಕಗೊಳ್ಳುವ ಅಗತ್ಯವಿಲ್ಲ.

ಕಳೆದ ಸಾಲಿನಂತೆ ಪ್ರಸಕ್ತ ವರ್ಷವೂ ಕೂಡ ಜಿಲ್ಲೆಯ ರೈತ ಸಂಪರ್ಕ ಕೇಂದ್ರಗಳಲ್ಲಿ ರಿಯಾಯಿತಿ ದರದಲ್ಲಿ, ಇಲಾಖೆಯ ಮಾರ್ಗಸೂಚಿಯನ್ವಯ ಬಿತ್ತನೆ ಬೀಜಗಳನ್ನು ವಿತರಿಸಲಾಗುತ್ತದೆ. ಕರ್ನಾಟಕ ರಾಜ್ಯ ಬೀಜ ನಿಗಮ, ರಾಷ್ಟ್ರೀಯ ಬೀಜ ನಿಗಮ ಮತ್ತು ಖಾಸಗಿ ಮಾರಾಟ ಮಳಿಗೆಗಳಲ್ಲಿ ವಿವಿಧ ಬೆಳೆಗಳ ಬಿತ್ತನೆ ಬೀಜದ ದಾಸ್ತಾನು ಮಾಡಿಕೊಳ್ಳಲಾಗಿದೆ. ಇಲಾಖೆಯ ಮೂಲಕ ಬೀಜ ಬದಲಾವಣೆ ಅನುಪಾತಕ್ಕನುಗುಣವಾಗಿ(ಮೆಕ್ಕೆಜೋಳ ಹೊರತಾಗಿ ಉಳಿದೆಲ್ಲ ಬೀಜಗಳು 33% ಮಾತ್ರ) ಬೀಜಗಳನ್ನು ಪೂರೈಸಲಾಗುತ್ತದೆ. ಕಾರಣ, ರೈತರು ಹಿಂದಿನ ಹಂಗಾಮುಗಳಲ್ಲಿ ತಮ್ಮಲ್ಲಿ ಕಾಯ್ದಿರಿಸಿಕೊಂಡ ಬೀಜಗಳನ್ನು ಉಪಯೋಗಿಸಲು ಕೋರಿದೆ. ರೈತ ಬಂಧುಗಳು ಬಿತ್ತನೆ ಕೈಗೊಳ್ಳುವ ಮುನ್ನ ಕಡ್ಡಾಯವಾಗಿ ಜೈವಿಕ ಗೊಬ್ಬರಗಳಿಂದ ಬೀಜೋಪಚಾರ ಮಾಡಿ ಬಿತ್ತನೆ ಮಾಡಲು ವಿನಂತಿಸಿದೆ. ಹೆಸರು ಬೀಜಗಳನ್ನು ಪ್ರತಿ ಕೆ.ಜಿ ಬೀಜಕ್ಕೆ 35–40 ಗ್ರಾಂ. ರೈಜೋಬಿಯಂನಿಂದ ಬೀಜೋಪಚಾರ ಮಾಡಿ ಬಿತ್ತಬೇಕು. ಇದರಿಂದ ಬೆಳೆಯ ಪ್ರಾಥಮಿಕ ಹಂತದಲ್ಲಿ ಸಾರಜನಕವು ಚೆನ್ನಾಗಿ ಲಭ್ಯವಾಗಿ, ಬೆಳೆಯ ಉತ್ತಮ ಬೆಳವಣಿಗೆಗೆ ಸಹಾಯವಾಗುತ್ತದೆ. ಪ್ರತಿ ಕಿ.ಗ್ರಾಂ. ಬೀಜಕ್ಕೆ 10 ಗ್ರಾಂ. ಟ್ರೈಕೋಡರ್ಮಾದಿಂದ ಬೀಜೋಪಚಾರ ಮಾಡಿದಲ್ಲಿ ಸರ್ಕೊಸ್ಪೊರಾ ಎಲೆಚುಕ್ಕೆ ರೋಗದ ನಿರ್ವಹಣೆ ಮಾಡಬಹುದು. ಗೋವಿನ ಜೋಳದಲ್ಲಿ ಪ್ರತಿ ಕಿ.ಗ್ರಾಂ ಬೀಜಕ್ಕೆ 25 ಗ್ರಾಂ ರಂಜಕ ಕರಗಿಸುವ ಅಣುಜೀವಿ (ಸುಡೋಮೊನಾಸ ಸ್ಟ್ರೆಯೇಟಾ ಎಚ್–21) ಹಾಗೂ 6 ಗ್ರಾಂ ಟ್ರೈಕೋಡರ್ಮಾ ಜೈವಿಕ ಶಿಲೀಂದ್ರನಾಶಕದಿಂದ ಬೀಜೋಪಚಾರ ಮಾಡಿ ಬಿತ್ತನೆ ಮಾಡುವುದರಿಂದ ಕಾಂಡ ಕಪ್ಪು ಕೊಳೆ ರೋಗವನ್ನು ನಿಯಂತ್ರಿಸಬಹುದಾಗಿದೆ. ಅಣುಜೀವಿ ಗೊಬ್ಬರಗಳಾದ ಅಝೋಸ್ಪಿರಿಲಂ 250 ಗ್ರಾಂ. ಪುಡಿ ಅಥವಾ 50 ಮಿ.ಲೀ. ದ್ರವರೂಪದ ಪದಾರ್ಥ ರಂಜಕ ಕರಗಿಸುವ ಜೈವಿಕ ಗೊಬ್ಬರ 250 ಗ್ರಾಂ. ಪುಡಿ ಅಥವಾ 25 ಮಿ.ಲೀ. ದ್ರವರೂಪದ ಪದಾರ್ಥ ಉಪಯೋಗಿಸಬಹುದಾಗಿದೆ. ಶೇಂಗಾ ಬೀಜಕ್ಕೆ ರೈಜೋಬಿಯಂ ಅಣುಜೀವಿ ಗೊಬ್ಬರ 1.0 ಕಿ.ಗ್ರಾಂ. ಪುಡಿ ಅಥವಾ 250 ಮಿ.ಲೀ. ದ್ರವರೂಪದ ಪದಾರ್ಥ ರಂಜಕ ಕರಗಿಸುವ ಜೈವಿಕ 1 ಕಿ.ಗ್ರಾಂ. ಪುಡಿ ಅಥವಾ 120 ಮಿ.ಲೀ. ದ್ರವರೂಪದ ಪದಾರ್ಥ, 2.5 ಕಿ.ಗ್ರಾಂ ರೈಜೋಬಿಯಂ, ರಂಜಕ ಕರಗಿಸುವ ಅಣುಜೀವಿ ಜೀವಾಣುವನ್ನು ಬೀಜಕ್ಕೆ ಉಪಚರಿಸಬೇಕು.

ಅಧಿಕೃತ ಪರವಾನಗಿ ಹೊಂದಿದ ಮಳಿಗೆಗಳಲ್ಲಿ ಮಾತ್ರ ಬೀಜ, ರಸಗೊಬ್ಬರ ಹಾಗೂ ಕೀಟನಾಶಕಗಳನ್ನು ಖರೀದಿಸಬೇಕು. ಕೃಷಿ ಪರಿಕರಗಳನ್ನು ಎಂ.ಆರ್.ಪಿ.ಗಿಂತ ಹೆಚ್ಚಿನ ದರದಲ್ಲಿ ಮಾರಾಟ ಮಾಡಿದಲ್ಲಿ ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿಗಳು ಮತ್ತು ತಾಲ್ಲೂಕು ಸಹಾಯಕ ಕೃಷಿ ನಿರ್ದೇಶಕರ ಗಮನಕ್ಕೆ ತರಲು ಕೋರಿದೆ. ಅಂತಹವರ ಮೇಲೆ ನಿಯಮಾನುಸಾರ ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅರ್ಜಿ ಆಹ್ವಾನ

**ಗದಗ :** ಐಐಎಸ್‌ಸಿ, ಐಐಟಿ ಮತ್ತು ಎನ್‌ಐಟಿ ಸಂಸ್ಥೆಗಳ ಮೂಲಕ ಆರ್ಟಿಫಿಶಿಯಲ್ ಇಂಟಲಿಜೆನ್ಸ್ ಮತ್ತು ಮಶಿನ್ ಲರ್ನಿಂಗ್ ವೃತ್ತಿಪರ ತರಬೇತಿ ಕೋರ್ಸುಗಳಲ್ಲಿ ಭಾಗವಹಿಸುವ ಪರಿಶಿಷ್ಟ ಪಂಗಡದ 200 ವೃತ್ತಿ ಪರ ಇಂಜನೀಯರಿಂಗ್ ಪದವಿಧರರಿಗೆ ರೂ.15,000/ಗಳ ಶಿಷ್ಯವೇತನ ತರಬೇತಿ ನೀಡುವ ಸಂಬಂಧ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸುವ ಕೊನೆಯ ದಿನ ಏಪ್ರಿಲ್ 25 ಆಗಿದ್ದು ಅರ್ಜಿಯನ್ನು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರ ಕಚೇರಿ, ಗದಗ ಇಲ್ಲಿ ಸಲ್ಲಿಸಬಹುದಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬ್ರಾಹ್ಮಣರನ್ನು ಕೆಣಕಿದರೆ ಸುಮ್ಮನಿರುವುದಿಲ್ಲ – ಬಿ.ಕೆ.ಬಿ.ಎನ್.ಮೂರ್ತಿ

**ಬಳ್ಳಾರಿ:** ಕಳೆದ ಹಲವಾರು ದಶಕಗಳಿಂದ ಬ್ರಾಹ್ಮಣರಿಗೆ ಅವಹೇಳನ ಮಾಡುವುದನ್ನು ಕೆಲವರು ಫ್ಯಾಶನ್ ಮಾಡಿಕೊಂಡಿದ್ದಾರೆ. ಸಾಮಾಜಿಕ ಜಾಲತಾಣಗಳು ಮತ್ತು ಸಿನೇಮಾದಲ್ಲೂ ಬ್ರಾಹ್ಮಣರ ತೇಜೋವಧೆ ಮಾಡುವ ಕ್ಷುಲ್ಲಕ ವಿಚಾರಗಳನ್ನು ತೋರಿಸಲಾಗುತ್ತಿದೆ. ಈ ಹಿನ್ನೆಲೆಯಲ್ಲಿ ಇದೀಗ ಸಿಇಟಿ ಪರೀಕ್ಷೆಯ ಸಂದರ್ಭದಲ್ಲಿ ಬ್ರಾಹ್ಮಣ ವಿದ್ಯಾರ್ಥಿಗಳ ಜನಿವಾರ ತೆಗೆಸಿ ಹಾಕಿ ಮಾನಸಿಕ ಹಿಂಸೆ ನೀಡಲಾಗಿದೆ. ಇದನ್ನು ಬ್ರಾಹ್ಮಣ ಸಮುದಾಯ ಉಗ್ರವಾಗಿ ಖಂಡಿಸುತ್ತದೆ. ವಿದ್ಯಾರ್ಥಿಗಳ ಭವಿಷ್ಯದೊಂದಿಗೆ ಚೆಲ್ಲಾಟವಾಡಿದ ಪರೀಕ್ಷಾ ಕೇಂದ್ರದ ಅಧಿಕಾರಿ, ಶಿಕ್ಷಕರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕು. ಇಲ್ಲದೇ ಹೋದರೆ ಉಗ್ರವಾದ ಹೋರಾಟಕ್ಕೆ ಅಣಿಯಾಗಬೇಕಾಗುತ್ತದೆ ಎಂದು ಬಳ್ಳಾರಿ ಬ್ರಾಹ್ಮಣ ಒಕ್ಕೂಟವು ಎಚ್ಚರಿಸಿದೆ.

ಇಲ್ಲಿನ ಸಂಗನಕಲ್ಲ ರಸ್ತೆಯ ಶಂಕರ ಮಠದ ಆವರಣದಲ್ಲಿ ಬಳ್ಳಾರಿ ಬ್ರಾಹ್ಮಣ ಒಕ್ಕೂಟದ ಕಾರ್ಯದರ್ಶಿ ಬಿ.ಕೆ.ಬಿ.ಎನ್.ಮೂರ್ತಿ ಅವರು ಸುದ್ದಿಗೋಷ್ಠಿಯನ್ನುದ್ದೇಶಿಸಿ ಮಾತನಾಡಿ, ಬ್ರಾಹ್ಮಣರು ಬಹುಜನ ಪ್ರಿಯರು ಎನ್ನುವುದನ್ನು ಮರೆಯಬಾರದು. ಎಲ್ಲರನ್ನೂ ಸಹಮತದಿಂದ ಗೌರವಿಸುವ ಸಮುದಾಯ ನಮ್ಮದು. ಶಿವಮೊಗ್ಗ ಜಿಲ್ಲೆ ತೀರ್ಥಹಳ್ಳಿಯಲ್ಲಿ ಸಿಇಟಿ ಪರೀ–ಕ್ಷೆ ಯ ವೇಳೆ ಜನಿವಾರ ಕಿತ್ತು ಹಾಕಿ ತೊಂದರೆ ನೀಡಲಾಗಿದೆ. ಬೀದರ್‌ನಲ್ಲೂ ಇದೇ ಕೃತ್ಯ ಎಸಗಲಾಗಿದೆ. ಬ್ರಾಹ್ಮಣ ವಿದ್ಯಾರ್ಥಿಗಳ ಭವಿಷ್ಯ ರೂಪಿಸಬೇಕಾದ ಶಿಕ್ಷಕರೇ ದುರ್ನಡತೆ ತೋರಿದ್ದಾರೆ. ಜನಿವಾರ ಕಿತ್ತೆಸೆದ ಪರೀಕ್ಷಾ ಕೇಂದ್ರದ ಅಧಿಕಾರಿ, ಶಿಕ್ಷಕರನ್ನು ಕೂಡಲೇ ಅಮಾನತ್ತುಗೊಳಿಸಬೇಕು. ಅವರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಿ ಶಿಕ್ಷೆ ವಿಧಿಸಬೇಕು. ಶೋಷಣೆಗೆ ಒಳಗಾದ ವಿದ್ಯಾರ್ಥಿಗಳಿಗೆ ಮುಂದಿನ ಶೈಕ್ಷಣಿಕ ಭವಿಷ್ಯ ರೂಪಿಸಬೇಕು. ಇಲ್ಲದೇ ಹೋದರೆ ಸರ್ಕಾರದ ವಿರುದ್ಧ ಬ್ರಾಹ್ಮಣರು ದೊಡ್ಡಮಟ್ಟದ ಹೋರಾಟ ಹಮ್ಮಿಕೊಳ್ಳಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.




ಜಾತಿ ಗಣತಿ ಅವೈಜ್ಞಾನಿಕವಾಗಿದೆ. ಗಣತಿಯಲ್ಲಿ ಬ್ರಾಹ್ಮಣ ಸಮುದಾಯವನ್ನು ಕಡಿಮೆ ಸಂಖ್ಯೆಯಲ್ಲಿ ತೋರಿಸಲಾಗಿದೆ. ಎಷ್ಟೋ ಬ್ರಾಹ್ಮಣರ ಮನೆಗೆ ಸರ್ವೇ ನಡೆಸುವವರು ಭೇಟಿ ನೀಡಿರುವುದಿಲ್ಲ. ಜಾತಿ ಗಣತಿಯನ್ನು ಜಾರಿಗೊಳಿಸಲು ಬ್ರಾಹ್ಮಣ ಒಕ್ಕೂಟವು ಸಹಮತಿಸುವುದಿಲ್ಲ ಎಂದು ಸ್ಪಷ್ಟಪಡಿಸಿದರು. ಇನ್ನು ಚಲನಚಿತ್ರ ನಿರ್ದೇಶಕರೊಬ್ಬರು ಬ್ರಾಹ್ಮಣರ ಮೇಲೆ ಮೂತ್ರ ವಿಸರ್ಜನೆ ಮಾಡುವ ಹುಚ್ಚಾಟದ ಹೇಳಿಕೆ ನೀಡಿದ್ದಾರೆ. ಅಂಥವರಿಂದ ಸಮಾಜದ ಸ್ವಾಸ್ಥ?ಯ ಹಾಳಾಗುವುದಲ್ಲದೇ, ಕೋಮು ಸೌಹಾರ್ದಕ್ಕೆ ಧಕ್ಕೆ ಉಂಟಾಗುತ್ತದೆ. ಇಂತಹ ಕೀಳು ಮಟ್ಟದ ಭಾಷೆ ಬಳಸಿದ ವ್ಯಕ್ತಿಯನ್ನು ಕೂಡಲೇ ಬಂಧಿಸಬೇಕು. ಕಾನೂನು ಅಡಿ ಶಿಕ್ಷಿಸಬೇಕೆಂದು ಸರ್ಕಾರವನ್ನು ಒತ್ತಾಯಿಸಿದರು.

ಬಳ್ಳಾರಿ ಬ್ರಾಹ್ಮಣರ ಒಕ್ಕೂಟ ಅಧ್ಯಕ್ಷ ಪ್ರಕಾಶ್ ರಾವ್ ಮಾತನಾಡಿ, ರಾಜ್ಯದಲ್ಲಿ ವಿವಾದವೆಬ್ಬಿಸಿರುವ ಜಾತಿ ಗಣತಿ ಅವೈಜ್ಞಾನಿಕವಾಗಿದೆ. ರಾಜ್ಯದಲ್ಲಿ ಬ್ರಾಹ್ಮಣ ಸಮುದಾಯದ ಜನಸಂಖ್ಯೆ 17 ಲಕ್ಷ ಎಂದು ವರದಿಯಲ್ಲಿ ಉಲ್ಲೇಖವಾಗಿದೆ. ವಾಸ್ತವದಲ್ಲಿ ನಮ್ಮ ಜನಸಂಖ್ಯೆ ಹೆಚ್ಚಾಗಿದೆ. ಈ ಗಣ–ತಿಗಾಗಿ ಯಾರ ಮನೆಗೆ ಬಂದಿದ್ದಾರೆ? ಎಂಬುದು ತಿಳಿದಿಲ್ಲ. ಎಲ್ಲರನ್ನೂ ಸಮೀಕ್ಷೆ ಮಾಡದೇ ಹೊರತಂದಿರುವ ಈ ವರದಿ ಅವೈಜ್ಞಾನಿಕವಾಗಿದೆ. ಬ್ರಾಹ್ಮಣರ ಮೇಲೆ ಪದೇ ಪದೇ ನಿಂದೆ, ಅಪಮಾನ, ಅವಮಾನಗಳು ಸೃಷ್ಟಿಯಾಗುತ್ತಿದೆ. ಇಂಥ ಸಂದರ್ಭದಲ್ಲಿ ಯಾವ ಬ್ರಾಹ್ಮಣರೂ ಸುಮ್ಮನಿರಬಾರದು.

ಸಮಾಜಕ್ಕೆ ಮತ್ತು ಬ್ರಾಹ್ಮಣತ್ವಕ್ಕೆ ಧಕ್ಕೆ ಉಂಟಾದಾಗ ಪ್ರತಿಯೊಬ್ಬ ಬ್ರಾಹ್ಮಣನೂ ಭಾರ್ಗವರಾಮನಾಗಲು ಸಿದ್ಧರಿರಬೇಕೆಂದು ಕರೆ ನೀಡಿದರು.

ಕೆಸೆಟ್ ಪರೀಕ್ಷೆ ಬರೆಯಲು ಹೋದ ಬ್ರಾಹ್ಮಣ ಸಮಾಜದ ವಿದ್ಯಾರ್ಥಿಗಳ ಜನಿವಾರ

ತೆಗೆಯಲು ಒತ್ತಾಯಿಸಿದ್ದಾರೆ. ಪರೀಕ್ಷೆ ಬರೆಯಬೇಕಾದರೆ ಜನಿವಾರ ತೆಗೆಯಬೇಕು ಎಂದು ಹೇಳಿರುವುದು ಖಂಡನಾರ್ಹ. ಕೆಲವು ವಿದ್ಯಾರ್ಥಿಗಳು ಜನಿವಾರ ತೆಗೆಯಲು ನಿರಾಕರಿಸಿದ್ದಾರೆ. ಅಂತವರಿಗೆ ಪರೀಕ್ಷೆಗೆ ಅವಕಾಶ ನೀಡಿಲ್ಲ. ಬ್ರಾಹ್ಮಣ ವಿರೋಧಿ ನೀತಿಯನ್ನು ನಾವು ಖಂಡಿಸುತ್ತೇವೆ. ಪರೀಕ್ಷೆ ವಂಚಿತ ವಿದ್ಯಾರ್ಥಿಗಳಿಗೆ ಮರುಪರೀಕ್ಷೆಗೆ ಅವಕಾಶ ನೀಡಬೇಕು. ಜನಿವಾರ ತೆಗೆಸಿದ ಅಧಿಕಾರಿಗಳನ್ನು ಅಮಾನತು ಮಾಡಿದರಷ್ಟೇ ಸಾಲದು ಅವರಿಗೆ ಕಠಿಣ ಶಿಕ್ಷೆ ಆಗಬೇಕು. ಇಲ್ಲದಿದ್ದರೆ ಬ್ರಾಹ್ಮಣ ಸಮುದಾಯ ಹೋರಾಟ ಮಾಡಬೇಕಾಗುತ್ತದೆಂದು ಎಚ್ಚರಿಸಿದರು.

ಇತ್ತೀಚಿನ ದಿನಗಳಲ್ಲಿ ಬ್ರಾಹ್ಮಣ ಸಮಾಜದ ಮೇಲೆ ದೌರ್ಜನ್ಯ ಹೆಚ್ಚುತ್ತಿದ್ದು ಇದು ನಿಲ್ಲಬೇಕು. ಹಿಂದಿ ಚಿತ್ರರಂಗದ ಚಿತ್ರ ನಿರ್ದೇಶಕ ಅನುರಾಗ ಕಶ್ಯಪ್ ಬ್ರಾಹ್ಮಣರ ಮೇಲೆ ಮೂತ್ರ ಮಾಡುತ್ತೇನೆಂದು ಹೇಳಿದ್ದಾನೆ. ಇದನ್ನು ನಮ್ಮ ಒಕ್ಕೂಟ ಖಂಡಿಸುತ್ತದೆ. ಅನುರಾಗ ಕಶ್ಯಪ್ ಮೇಲೆ ಸೂಕ್ತ ಕಾನೂನು ಕ್ರಮ ಜರುಗಿಸಬೇಕು ಎಂದು ಹೇಳಿದರು.

ಒಕ್ಕೂಟದ ಗೌರವ ಅಧ್ಯಕ್ಷ ಡಾ.ಬಿ.ಕೆ.ಸುಂದರ್ ಮಾತನಾಡಿ, ಕೇಂದ್ರ ಸರ್ಕಾರವು ಜಾರಿಗೆ ತಂದಿರುವ ಆರ್ಥಿಕವಾಗಿ ಹಿಂದುಳಿದ ವರ್ಗದ (ಇಡಬ್ಲೂಎಸ್) ಮೀಸಲಾತಿಯ ಪ್ರಯೋಜನ ಕೂಡಾ ಬ್ರಾಹ್ಮಣ ಸಮುದಾಯಕ್ಕೆ ಸರಿಯಾಗಿ ಲಭಿಸುತ್ತಿಲ್ಲ. ನಮ್ಮ ಸಮುದಾಯದಲ್ಲಿರುವ ಅಡುಗೆ, ಪೌರೋಹಿತ್ಯದಂತೆ ವಿವಿಧ ವೃತ್ತಿಗಳಲ್ಲಿ ಇರುವವರು ಆರ್ಥಿಕವಾಗಿ ಹಿಂದುಳಿದಿದ್ದಾರೆ. ಇಂತಹವರಿಗೆ ಉದ್ಯೋಗ ಮತ್ತು ಶಿಕ್ಷಣದಲ್ಲಿ ಮೀಸಲಾತಿ ನೀಡಲು ಇಡಬ್ಲ್ಯುಎಸ್ ಜಾರಿಗೆ ಬಂದಿದ್ದರೂ ಉಪಯೋಗವಾಗುತ್ತಿಲ್ಲ. ಉದ್ದೇಶಪೂರ್ವಕವಾಗಿ ನಮ್ಮ ಸಮುದಾಯಕ್ಕೆ ಇಡಬ್ಲ್ಯುಎಸ್ ಪ್ರಮಾಣ ಪತ್ರ ನೀಡಲು ಅಧಿಕಾರಿಗಳು ಸತಾಯಿಸುತ್ತಿದ್ದಾರೆ.

# ರಾಜ್ಯದಲ್ಲಿ ಕುಸುಮ್– ಎ ಜಾರಿ ಕುರಿತು ಕೇಂದ್ರದ ಜತೆ ಮಾತುಕತೆ: ಸಚಿವ ಕೆ.ಜೆ.ಜಾರ್ಜ್

**ಚಿಕ್ಕಮಗಳೂರು :** ಜನರೇ ವಿದ್ಯುತ್ ಉತ್ಪಾದಿಸಿ ಬಳಸಲು ಉತ್ತೇಜನ ನೀಡುವ ಕುಸುಮ್–ಎ (ಪ್ರಧಾನ ಮಂತ್ರಿ ಕಿಸಾನ್ ಉರ್ಜಾ ಸುರಕ್ಷಾ ಏವಮ್ ಉತ್ಥಾನ ಮಹಾಭಿಯಾನ್) ಯೋಜನೆಯನ್ನು ರಾಜ್ಯದಲ್ಲಿ ಜಾರಿಗೆ ತರುವ ಕುರಿತು ಕೇಂದ್ರ ಸರ್ಕಾರದೊಂದಿಗೆ ಮಾತುಕತೆ ನಡೆಸಲು ಉದ್ದೇಶಿಸಲಾಗಿದೆ ಎಂದು ಚಿಕ್ಕಮಗಳೂರು ಜಿಲ್ಲಾ ಉಸ್ತುವಾರಿಯನ್ನೂ ಹೊಂದಿರುವ ಇಂಧನ ಸಚಿವ ಕೆ.ಜೆ.ಜಾರ್ಜ್ ಹೇಳಿದ್ದಾರೆ.

ಕಡೂರು ಪಟ್ಟಣದ ಟಿಎಪಿಸಿಎಂಎಸ್ ಕಚೇರಿ ಆವರಣದಲ್ಲಿ ಮಂಗಳವಾರ ಟಿಎಪಿಸಿಎಂಎಸ್‌ನ ಅಮೃತ ಮಹೋತ್ಸವ ಹಾಗೂ ರೈತ ಬಜಾರ್ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, "ಈಗಾಗಲೇ ರಾಜ್ಯದಲ್ಲಿ ಕುಸುಮ್– ಬಿ (ರೈತರಿಗೆ ಸೋಲಾರ್ ಕೃಷಿ ಪಂಪ್ ಸೆಟ್) ಮತ್ತು ಕುಸುಮ್–ಸಿ (ಕೃಷಿ ಫೀಡರ್ ಗಳ ಸೌರೀಕರಣ) ಯೋಜನೆ ಅನುಷ್ಠಾನದಲ್ಲಿದೆ. ಇದರೊಂದಿಗೆ ಕುಸುಮ್–ಎ ಯೋಜನೆಯನ್ನೂ ಜಾರಿಗೊಳಿಸುವ ಕುರಿತು ಯೋಚಿಸಲಾಗಿದೆ", ಎಂದರು.

"ಕುಸುಮ್– ಎ ಯೋಜನೆಯಡಿ ರೈತರು, ರೈತರ ಗುಂಪುಗಳು, ಸಹಕಾರಿ ಸಂಸ್ಥೆಗಳು, ಪಂಚಾಯತ್‌ಗಳು, ರೈತ ಉತ್ಪಾದಕರ ಸಂಸ್ಥೆಗಳು, ನೀರು ಬಳಕೆದಾರರ ಸಂಘಗಳು ವಿದ್ಯುತ್ ಉಪ ಕೇಂದ್ರಗಳಿಂದ 5 ಕಿ.ಮೀ. ಒಳಗೆ 500 ಕಿಲೋ ವ್ಯಾಟ್ ನಿಂದ ಗರಿಷ್ಠ 2 ಮೆಗಾ ವ್ಯಾಟ್ ವರೆಗೆ ಸೌರ ವಿದ್ಯುತ್ ಸ್ಥಾವರಗಳನ್ನು ಸ್ಥಾಪಿಸಬಹುದು. ಅಲ್ಲಿ ಉತ್ಪಾದನೆಯಾಗುವ ವಿದ್ಯುತ್ತನ್ನು ಅವರೇ ಬಳಸಿಕೊಳ್ಳಬಹುದು. ಹೆಚ್ಚುವರಿ ವಿದ್ಯುತ್ತನ್ನು ಸರ್ಕಾರ ಖರೀದಿಸುತ್ತದೆ. ಇದರಿಂದ ವಿದ್ಯುತ್ ಸಮಸ್ಯೆಗೆ ಪರಿಹಾರ ಸಿಗುತ್ತದೆ. ರೈತರಿಗೂ ಆದಾಯ ಬರುತ್ತದೆ. ಈ ಹಿನ್ನೆಲೆಯಲ್ಲಿ ಕುಸುಮ್– ಎ ಯೋಜನೆ ಜಾರಿಗೊಳಿಸುವ ಬಗ್ಗೆ ಕೇಂದ್ರ ಸಚಿವರೊಂದಿಗೆ ಮಾತುಕತೆ ನಡೆಸಲಾಗುವುದು", ಎಂದು ತಿಳಿಸಿದರು.

"ರೈತರಿಗೆ ಸಬ್ಸಿಡಿ ಮೂಲಕ ಸೋಲಾರ್ ಪಂಪ್ ಸೆಟ್ ನೀಡುವ ಕುಸುಮ್– ಬಿ ಯೋಜನೆ ಈಗಾಗಲೇ ಜಾರಿಯಲ್ಲಿದೆ. ರೈತರು ಬೋರ್ ವೆಲ್ ಕೊರೆಸಿ ಅದರಲ್ಲಿ ನೀರು ಲಭ್ಯವಾದರೆ ಆನ್ ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕು.



ಈ ಪ್ರಕ್ರಿಯೆ ಪರಿಶೀಲನೆ ನಡೆಸಿ ಯೋಜನೆ ಕಾರ್ಯರೂಪಕ್ಕೆ ತರಲು 12 ಮಂದಿ ಗುತ್ತಿಗೆದಾರರನ್ನು ಗುರುತು ಮಾಡಲಾಗಿದೆ. ಅವರುಗಳು ಬೋರ್‌ವೆಲ್‌ಗೆ ಮೋಟಾರ್, ಪ್ಯಾನಲ್ ಹಾಗೂ ಪೈಪ್ ಅಳವಡಿಸಲಿದ್ದಾರೆ. ಇದಕ್ಕೆ ತಗಲುವ ವೆಚ್ಚದಲ್ಲಿ ಶೇ. 20 ರಷ್ಟು ಹಣವನ್ನು ರೈತರು ಭರಿಸಬೇಕು, ಇನ್ನುಳಿದ ಶೇ. 50 ರಷ್ಟು ಹಣ ರಾಜ್ಯ ಸರ್ಕಾರ ಭರಿಸುತ್ತದೆ. ಇನ್ನುಳಿಕೆ ಹಣವನ್ನು ಕೇಂದ್ರ ಸರ್ಕಾರ ಭರಿಸಲಿದೆ ಡಿಸೆಂಬರ್ ಅಂತ್ಯದವರೆಗೆ 40 ಸಾವಿರ ಪಂಪ್ ಸೆಟ್ ಅಳವಡಿಸಲು ಕೇಂದ್ರ ಸರ್ಕಾರ ಅನುಮತಿ ನೀಡಿದೆ", ಎಂದರು.

ಸಮರ್ಪಕ ವಿದ್ಯುತ್ ಪೂರೈಕೆಗೆ ಕ್ರಮ: "ರಾಜ್ಯದಲ್ಲಿ ವಿದ್ಯುತ್ ಕೊರತೆ ಇಲ್ಲ. 18,500 ಮೆಗಾವ್ಯಾಟ್ ವರೆಗೆ ಬೇಡಿಕೆ ಇದ್ದು, ಅಷ್ಟು ವಿದ್ಯುತ್ ಪೂರೈಸಲು ಸಮರ್ಥರಾಗಿದ್ದೇವೆ. ಅದಕ್ಕಾಗಿ ವಿದ್ಯುತ್ ತಂತಿಗಳ ಬದಲಾವಣೆ, ಹೊಸಸಬ್ ಸ್ಟೇಷನ್ ಗಳ ನಿರ್ಮಾಣ ಕಾರ್ಯ ಕೈಗೊಳ್ಳಲಾಗಿದೆ. ಹೊಸದಾಗಿ ನಿರ್ಮಾಣ ಮಾಡುತ್ತಿರುವ 100 ಸಬ್ ಸ್ಟೇಷನ್ ಗಳ ಮಲಕ 3 ಸಾವಿರ ಮಗಾವ್ಯಾಟ್ ವಿದ್ಯುತ್ ಸಂಗ್ರಹಿಸಿ ಪೂರೈಸಲು ಅವಕಾಶ ಇದೆ ಈ ಪೈಕಿ 1,500 ಮೆಗಾವ್ಯಾಟ್ ವಿದ್ಯುತ್ತನ್ನು ರೈತರಿಗೆ ಪೂರೈಸಿದರೆ ಕೃಷಿ ಪಂಪ್ ಸೆಟ್ ಗಳಿಗೆ ವಿದ್ಯುತ್ ಸಮಸ್ಯೆ ಬಹುತೇಕ ಬಗೆಹರಿಯಲಿದೆ", ಎಂದು ಹೇಳಿದರು.

"ರಾಜ್ಯದಲ್ಲಿ ನಮ್ಮ ಸರ್ಕಾರ ಅಧಿಕಾರಕ್ಕೆ ಬರುವ ಮುನ್ನ ವಿದ್ಯುತ್ ಕ್ಷೇತ್ರಕ್ಕೆ ಆದ್ಯತೆ ನೀಡಿರಲಿಲ್ಲ. ಆದರೆ, ಸಿದ್ದರಾಮಯ್ಯ ಅವರು ಮುಖ್ಯಮಂತ್ರಯಾದ ಬಳಿಕ ವಿದ್ಯುತ್ ಉತ್ಪಾದನೆ ಮತ್ತು ಸಮರ್ಪಕ ಪೂರೈಕೆಗೆ ಆದ್ಯತೆ ನೀಡಲಾಯಿತು. ರೈತರಿಗೆ ದಿನದ 7 ಗಂಟೆವಿದ್ಯುತ್ ಪೂರೈಸುವುದಾಗಿ ಮುಖ್ಯಮಂತ್ರಿಗಳು ಮಾತು ಕೊಟ್ಟಿದ್ದು, ಅದನ್ನು ಜಾರಿಗೊಳಿಸಲು ನಡೆಸಿದ ಪ್ರಯತ್ನ ಫಲ ನೀಡಿದೆ. ಪ್ರತಿ ದಿನ 7 ಗಂಟೆ ವಿದ್ಯುತ್ ನೀಡಲಾಗುತ್ತಿದೆ", ಎಂದು ತಿಳಿಸಿದರು.

"ವಿದ್ಯುತ್ ಉತ್ಪಾದನಗೆ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಪಾವಗಡದಲ್ಲಿ ಈಗಿರುವ 2050 ಮೆಗಾ ವ್ಯಾಟ್ ಉತ್ಪಾದನಾ ಸಾಮರ್ಥ್ಯದ ಸೋಲಾರ್ ಪಾರ್ಕ್ ಜತೆಗೆ ಮತ್ತೆ 10 ಸಾವಿರ ಎಕರೆಯಲ್ಲಿ ಸೋಲಾರ್ ಪಾರ್ಕ್ ಸ್ಥಾಪಿಸುವ ಗುರಿ ಹೊಂದಲಾಗಿದೆ. ಆ ಮೂಲಕ ಪಾವಗಡ ಸೋಲಾರ್ ಪಾರ್ಕನ್ನು ಮತ್ತೆ ವಿಶ್ವದ ಅತಿ ದೊಡ್ಡ ಸೋಲಾರ್ ಪಾರ್ಕ್ ಆಗಿ ಹೊರಹೊಮ್ಮುವಂತೆ ಮಾಡಲಾಗುವುದು", ಎಂದರು.

"ರೈತರು ಬೆಳೆದ ಉತ್ಪನ್ನಗಳಿಗೆ ಸೂಕ್ತ ಬೆಲೆ ಸಿಗುವಂತೆ ನೋಡಿಕೊಳ್ಳಲು ಹೆಚ್ಚು ರೈತ ಬಜಾರ್ ಗಳನ್ನು ಸ್ಥಾಪಿಸಬೇಕು ಎಂದು ಹೇಳಿದ ಅವರು, ಸಾವಯವ ಉತ್ಪನ್ನಗಳಿಗೆ ವಿದೇಶಗಳಲ್ಲಿ ಹೆಚ್ಚು ಬೇಡಿಕೆ ಇರುವುದರಿಂದ ಈ ಉತ್ಪನ್ನಗಳನ್ನು ಬೆಳೆಯಲು ರೈತರು ಆದ್ಯತೆ ನಡಬೇಕು. ಇದಕ್ಕೆ ಸರ್ಕಾರ ಎಲ್ಲಾ ರೀತಿಯ ಸಹಕಾರ ನೀಡುತ್ತದೆ", ಎಂದು ಹೇಳಿದರು.

ಕಡೂರು ಶಾಸಕ ಕೆ.ಎಸ್.ಆನಂದ್ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಭದ್ರಾ– ಕಾಡಾ ಅಧ್ಯಕ್ಷ ಡಾ.ಅಂಶುಮಂತ್, ಪುರಸಭೆ ಅಧ್ಯಕ್ಷ ಭಂಡಾರಿ ಶ್ರೀನಿವಾಸ್ ಹಾಗೂ ಪುರಸಭೆ ಸದಸ್ಯರು ಉಪಸ್ಥಿತರಿದ್ದರು.

## ದಾರದಹಳ್ಳಿಯಲ್ಲಿ ಒಂಟಿ ಸಲಗ ಓಡಾಟ ಗ್ರಾಮಸ್ಥರಲ್ಲಿ ಭಯ

**ಚಿಕ್ಕಮಗಳೂರು:** ಜಿಲ್ಲೆಯಲ್ಲಿ ಇತ್ತೀಚಿನ ದಿನಗಳಲ್ಲಿ ಕಾಡಾನೆ ಹಾವಳಿ ಮಿತಿ ಮೀರಿದೆ ಮೂಡಿಗೆರೆ ತಾಲೂಕಿನ ದಾರದಹಳ್ಳಿ ಗ್ರಾಮದಲ್ಲಿ ಮನೆ ಬಾಗಿಲಿಗೆ ಒಂಟಿ ಸಲಗ ಬಂದು ಗಾಬರಿ ಮೂಡಿಸಿದೆ.

ಯಶವಂತ್‌ರವರ ಮನೆ ಬಾಗಿಲಿಗೆ ಬಂದ ಒಂಟಿ ಸಲಗ ಕಂಡು ಕ್ಷಣಕಾಲ ಆತಂಕಕ್ಕೆ ಒಳಗಾಗಿದ್ದಾರೆ.

ಅಂಗಳದಲ್ಲಿ ಕಾಣಿಸಿದ ಆನೆ ಕ್ರಮೇಣ ಮನೆ ಬಾಗಿಲವರೆಗೂ ಬಂದು ಹಿಂತಿರುಗಿದೆ. ಆನೆ ಬಂದ ದೃಶ್ಯವನ್ನು ಹೆದರುತ್ತಲೇ ಮನೆ ಮಾಲೀಕ ಮೊಬೈಲ್‌ನಲ್ಲಿ ಸೆರೆ ಹಿಡಿದಿದ್ದಾನೆ.

ಆನೆಗಳ ಆವಾಸ ಸ್ಥಾನದಲ್ಲಿ ಕೃಷಿ ಸಾಗುವಳಿ ಮಾಡಿಕೊಂಡು ಮನೆಗಳನ್ನು ಕಟ್ಟಿಕೊಳ್ಳುತ್ತಿರುವುದರ ಜೊತೆಗೆ ಆನೆಗೆ ಅಗತ್ಯ ಇರುವ ಆಹಾರ ಸರಪಳಿಯಲ್ಲಿಯೂ ವ್ಯತ್ಯಾಸವಾಗಿರುವುದು ಇಂಥ ಘಟನೆಗಳಿಗೆ ಕಾರಣವಾಗುತ್ತಿದೆ ಎಂದು ಪರಿಸರ ಪ್ರೇಮಿಗಳು ವಿಶ್ಲೇಷಿಸಿದ್ದಾರೆ.

# ಮೇ 1ರಿಂದ ಜಿಪಿಎಸ್ ಆಧಾರಿತ ಟೋಲ್ ಸಂಗ್ರಹ ವ್ಯವಸ್ಥೆ ಜಾರಿ

**ನವದೆಹಲಿ:** ಮೇ 1 ರಿಂದ ದೇಶದ ರಾಷ್ಟ್ರೀಯ ಹೆದ್ದಾರಿಗಳಲ್ಲಿ ರಸ್ತೆ ಪ್ರಯಾಣವು ಹೆಚ್ಚು ಸುಗಮವಾಗಲಿದೆ, ಫಾಸ್ಟ್ ಟ್ಯಾಗ್ ಗಳ ಬದಲು ಹೊಸ ಜಿಪಿಎಸ್ ಆಧಾರಿತ ಟೋಲ್ ಸಂಗ್ರಹ ವ್ಯವಸ್ಥೆಯನ್ನು ಪರಿಚಯಿಸಲಾಗುತ್ತಿದೆ.

ಜಾಗತಿಕ ಸಂಚರಣೆ ಉಪಗ್ರಹ ವ್ಯವಸ್ಥೆ (GNSS) ಏಪ್ರಿಲ್ 1ರಿಂದ ಜಾರಿಗೆ ಬರುವ ನಿರೀಕ್ಷೆಯಿತ್ತು, ವಿಳಂಬವಾಗಿ ಈಗ ಮೇ 1ರಿಂದ ಜಾರಿಗೆ ಬರುವ ಸಾಧ್ಯತೆಯಿದೆ.

ಈ ಬಗ್ಗೆ ಮಾತನಾಡಿರುವ ಕೇಂದ್ರ ರಸ್ತೆ ಮತ್ತು ಸಾರಿಗೆ ಸಚಿವ ನಿತಿನ್ ಗಡ್ಕರಿ, ಮುಂದಿನ 15 ದಿನಗಳಲ್ಲಿ ನಾವು ಹೊಸ ಟೋಲ್ ನೀತಿಯನ್ನು ತರುತ್ತಿದ್ದೇವೆ. ಟೋಲ್ ಪ್ಲಾಜಾಗಳಿಗಾಗಿ ನಿಲ್ಲಬೇಕಾಗಿಲ್ಲದ ಕಾರಣ ನಾವು ಸ್ಯಾಟಲೈಟ್ ಟೋಲ್ ವ್ಯವಸ್ಥೆಯನ್ನು ಪ್ರಾರಂಭಿಸುತ್ತಿದ್ದೇವೆ ಎಂದರು.




**GNSS ಎಂದರೇನು ಮತ್ತು ಅದು ಹೇಗೆ ಕಾರ್ಯನಿರ್ವಹಿಸುತ್ತದೆ?**

ಗ್ಲೋಬಲ್ ನ್ಯಾವಿಗೇಷನ್ ಸ್ಯಾಟಲೈಟ್ ಸಿಸ್ಟಮ್ (GNSS) ಒಂದು ಉಪಗ್ರಹ ಆಧಾರಿತ ಟೋಲ್ ಸಂಗ್ರಹ ವ್ಯವಸ್ಥೆಯಾಗಿದ್ದು, ಇದರಲ್ಲಿ ಒಬ್ಬ ವ್ಯಕ್ತಿಯು ಪ್ರಯಾಣಿಸಿದ ದೂರವನ್ನು ಆಧರಿಸಿ ಅವರ ಬ್ಯಾಂಕ್ ಖಾತೆಗಳಿಂದ ನೇರವಾಗಿ ಹಣವನ್ನು ಕಡಿತಗೊಳಿಸಲಾಗುತ್ತದೆ. ಕೇಂದ್ರ ಸಚಿವ ನಿತಿನ್ ಗಡ್ಕರಿ ಅವರ ಪ್ರಕಾರ, ಹೊಸ ವ್ಯವಸ್ಥೆಯು ಸಮಯ ಮತ್ತು ವೆಚ್ಚ–ಪರಿಣಾಮಕಾರಿ ಮತ್ತು ವೇಗವಾಗಿರುತ್ತದೆ.

**GNSS, FASTag ಗಿಂತ ಹೇಗೆ ಭಿನ್ನವಾಗಿದೆ?**

FASTag ವ್ಯವಸ್ಥೆಯು ಸಾಂಪ್ರದಾಯಿಕ ನಗದು ಸಂಗ್ರಹ ವಿಧಾನಕ್ಕಿಂತ ವೇಗವಾಗಿದ್ದರೂ, ವಾಹನಗಳು ಟೋಲ್ ಬೂತ್‌ನಲ್ಲಿ ಹಲವೊಮ್ಮೆ ಕಾದು ನಿಲ್ಲಬೇಕಾಗುತ್ತದೆ. ಹಲವು ಬಾರಿ ವಿಶೇಷವಾಗಿ ಪೀಕ್ ಅವರ್ ಗಳಲ್ಲಿ ಇದು ದೀರ್ಘ ಸರತಿ ಸಾಲುಗಳಿಗೆ ಕಾರಣವಾಗುತ್ತದೆ.

ಆದಾಗ್ಯೂ, ಜಿಎನ್ ಎಸ್ ಎಸ್ ವ್ಯವಸ್ಥೆಯು ವಾಹನಗಳ ಸ್ಥಳಗಳನ್ನು ಪತ್ತೆಹಚ್ಚಲು ಉಪಗ್ರಹಗಳೊಂದಿಗೆ ಸಂವಹನ ನಡೆಸುವ ವರ್ಚುವಲ್ ಟೋಲ್ ಬೂತ್‌ಗಳೊಂದಿಗೆ ಕಾರ್ಯನಿರ್ವಹಿಸುತ್ತದೆ. ಟ್ರ್ಯಾಕ್ ಮಾಡಲಾದ ಸ್ಥಳದ ಪ್ರಕಾರ, ವಾಹನವು ಪ್ರಯಾಣಿಸಿದ ದೂರವನ್ನು ವಿಶ್ಲೇಷಣೆ ಮಾಡಿ ಟೋಲ್ ನ್ನು ಲೆಕ್ಕಹಾಕಲಾಗುತ್ತದೆ. ಹೊಸ ವ್ಯವಸ್ಥೆಯು ಭೌತಿಕ ಟೋಲ್ ಬೂತ್‌ಗಳನ್ನು ಸ್ಥಾಪಿಸುವ ಅಗತ್ಯವನ್ನು ನಿವಾರಿಸುವುದಲ್ಲದೆ, ಬಳಕೆದಾರರಿಗೆ ಹೊಂದಿಕೊಳ್ಳುವ ಪಾವತಿ ಆಯ್ಕೆಗಳನ್ನು ಒದಗಿಸುತ್ತದೆ.

# ಉಕ್ಕು ಆಮದು ಮೇಲೆ ಶೇ.12ರಷ್ಟು ಸುರಕ್ಷತಾ ಸುಂಕ ವಿಧಿಸಿದ ಕೇಂದ್ರ ಸರ್ಕಾರ

**ನವದೆಹಲಿ :** ದೇಶೀಯ ಉಕ್ಕು ಉದ್ಯಮದ ಹಿತರಕ್ಷಣೆ ನಿಟ್ಟಿನಲ್ಲಿ ಕೇಂದ್ರದ ನರೇಂದ್ರಮೋದಿ ಅವರ ಸರಕಾರ ರಕ್ಷಣಾತ್ಮಕ ಕ್ರಮ ಕೈಗೊಂಡಿದ್ದು, ಉಕ್ಕು ಆಮದಿನ ಮೇಲೆ ಕೇಂದ್ರವು ಶೇ.12ರಷ್ಟು ಸುರಕ್ಷತಾ ಸುಂಕವನ್ನು ವಿಧಿಸಿದೆ. ಈ ನಿಟ್ಟಿನಲ್ಲಿ ಕೇಂದ್ರದ ಉಕ್ಕು ಮತ್ತು ಬೃಹತ್ ಕೈಗಾರಿಕೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಪ್ರಧಾನಿ ನರೇಂದ್ರ ಮೋದಿ ಅವರಿಗೆ ಕೃತಜ್ಞತೆ ಸಲ್ಲಿಸಿದ್ದು, ಈ ಉಪಕ್ರಮವು ದೇಶೀಯ ಉಕ್ಕು ಉದ್ಯಮಕ್ಕೆ ಪ್ರೋತ್ಸಾಹದ ಜತೆಗೆ ಮತ್ತಷ್ಟು ಶಕ್ತಿ ತುಂಬಲಿದೆ ಎಂದು ಹೇಳಿದ್ದಾರೆ.



ಮಿಶ್ರಲೋಹವಲ್ಲದ ಮತ್ತು ಮಿಶ್ರಲೋಹದ ಉಕ್ಕಿನಿಂದ ತಯಾರಿಸಿದ ಕೆಲವು ಉತ್ಪನ್ನಗಳ ಆಮದಿನ ಮೇಲೆ ಶೇ.12ರಷ್ಟು ಸುರಕ್ಷತಾ ಸುಂಕ ವಿಧಿಸುವ ನಿರ್ಧಾರವನ್ನು ಸೋಮವಾರ ಕೈಗೊಂಡಿದೆ. ಇದಕ್ಕೆ ಸಂಬಂಧಿಸಿ ಕೇಂದ್ರವು ಅಧಿಸೂಚನೆಯನ್ನು ಹೊರಡಿಸಿದೆ. ಈ ನಿರ್ಧಾರವನ್ನು ಸಚಿವ ಹೆಚ್.ಡಿ. ಕುಮಾರಸ್ವಾಮಿ ಸ್ವಾಗತಿಸಿದ್ದು, ಆಮದು ಹೆಚ್ಚಳದ ಪ್ರತಿಕೂಲಕರ ಪರಿಣಾಮಗಳಿಂದ ದೇಶೀಯ ಉಕ್ಕು ತಯಾರಕರನ್ನು ರಕ್ಷಿಸಲು ಮತ್ತು ಮಾರುಕಟ್ಟೆಯಲ್ಲಿ ನ್ಯಾಯಯುತ ಸ್ಪರ್ಧೆಯನ್ನು ಖಾತ್ರಿಪಡಿಸಿಕೊಳ್ಳಲು ಈ ಕ್ರಮವು ಸಕಾಲಿಕ ಮತ್ತು ಅಗತ್ಯ ಕ್ರಮವಾಗಿದೆ ಎಂದು ಮಾಧ್ಯಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಕ್ರಮವು ದೇಶೀಯ ಉತ್ಪಾದಕರಿಗೆ, ವಿಶೇಷವಾಗಿ ಸಣ್ಣ ಮತ್ತು ಮಧ್ಯಮ ಪ್ರಮಾಣದ ಉಕ್ಕು ಉದ್ಯಮಗಳಿಗೆ ಅನುಕೂಲವಾಗಿದೆ ಹಾಗೂ ಹೆಚ್ಚುತ್ತಿರುವ ಆಮದುಗಳಿಂದ ಅಪಾರ ಒತ್ತಡವನ್ನು ಎದುರಿಸುತ್ತಿರುವವರಿಗೆ ನಿರ್ಣಾಯಕ ಪರಿಹಾರವನ್ನು ನೀಡುತ್ತದೆ. ಸುರಕ್ಷತಾ ಸುಂಕವು ಮಾರುಕಟ್ಟೆ ಸ್ಥಿರತೆಯನ್ನು ಮಾತು ಸ್ಥಾಪಿಸಲು ಮತ್ತು ದೇಶೀಯ ಉದ್ಯಮದ ವಿಶ್ವಾಸವನ್ನು ಬಲಪಡಿಸಲು ಸಹಾಯ ಮಾಡುತ್ತದೆ" ಎಂದು ಕೇಂದ್ರ ಸಚಿವರು ಪ್ರತಿಪಾದಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರ ಮಹತ್ವಾಕಾಂಕ್ಷೆಯ ಆತ್ಮನಿರ್ಭರ ಭಾರತ್ ಪರಿಕಲ್ಪನೆಯ ಅಡಿಯಲ್ಲಿ ದೇಶೀಯ ವ್ಯೂಹಾತ್ಮಕ ವಲಯಗಳನ್ನು ಬಲಪಡಿಸುವಲ್ಲಿ ಇದು ಅತ್ಯುತ್ತಮ ಹೆಜ್ಜೆಯಾಗಿದೆ. ಅಲ್ಲದೆ, ಈ ನಿಟ್ಟಿನಲ್ಲಿ ಮೋದಿ ಅವರ ನಿರಂತರ ಬೆಂಬಲಕ್ಕಾಗಿ ನಾನು ಹೃದಯಪೂರ್ವಕ ಅಭಿನಂದನೆ ಸಲ್ಲಿಸುತ್ತೇನೆ ಕುಮಾರಸ್ವಾಮಿ ಅವರು ಪ್ರಧಾನಿಗಳಿಗೆ ಕೃತಜ್ಞತೆಗಳನ್ನು ಸಲ್ಲಿಸಿದ್ದಾರೆ. ಭಾರತೀಯ ಉಕ್ಕು ವಲಯವು ಸುಸ್ಥಿರ, ಸ್ವಾವಲಂಬಿ ಮತ್ತು ಜಾಗತಿಕವಾಗಿ ಸ್ಪರ್ಧಾತ್ಮಕವಾಗಿರುವುದನ್ನು ಖಚಿತಪಡಿಸಿಕೊಳ್ಳಲು ದೇಶೀಯ ವಾಲಯದಲ್ಲಿ ಸಚಿವಾಲಯವು ಪರಿಣಾಮಕಾರಿಯಾಗಿ ಕೆಲಸ ಮಾಡುತ್ತಿದೆ, ಮುಂದೆಯೂ ನಿರ್ಣಾಯಕ ಹೆಜ್ಜೆಗಳನ್ನು ಇಡುತ್ತದೆ ಎಂದು ಕೇಂದ್ರ ಸಚಿವರಾದ ಹೆಚ್ ಡಿ ಕುಮಾರಸ್ವಾಮಿ ಅವರು ತಿಳಿಸಿದ್ದಾರೆ.

## ಜಾತಿಗಣತಿ ಬಿಡುಗಡೆಗೆ ಗಡುವು; ಹಾಲುಮತ ಮಹಾಸಭಾದಿಂದ ಬೃಹತ್ ಹೋರಾಟದ ಎಚ್ಚರಿಕೆ

**ದಾವಣಗೆರೆ:** ನಿವೃತ್ತ ನ್ಯಾಯಮೂರ್ತಿ ಕಾಂತರಾಜ್ ಆಯೋಗವು ನೀಡಿರುವ ಶೈಕ್ಷಣಿಕ, ಸಾಮಾಜಿಕ, ಆರ್ಥಿಕ ಸಮೀಕ್ಷಾ ವರದಿಯನ್ನು ಮೇ.2ರ ಸಚಿವ ಸಂಪುಟದಲ್ಲಿ ಅನುಷ್ಠಾನಗೊಳಿಸದಿದ್ದರೆ ರಾಜ್ಯಾದ್ಯಂತ ಬೃಹತ್ ಮಟ್ಟದಲ್ಲಿ ಜನಾಂದೋಲನ ಹೋರಾಟ ನಡೆಸಲಾಗುವುದು ಎಂದು ಜಿಲ್ಲಾ ಹಾಲುಮತ ಮಹಾಸಭಾ ಎಚ್ಚರಿಕೆ ನೀಡಿದೆ.

ಜಿಲ್ಲಾ ಹಾಲುಮತ ಮಹಾಸಭಾದ ಜಿಲ್ಲಾ ಕಚೇರಿಯಲ್ಲಿ ಶೈಕ್ಷಣಿಕ, ಸರ್ಕಾರದ ಕಾಂತರಾಜು ವರದಿಯನ್ನು ಜಾರಿಗೆ? ಒತ್ತಾಯಿಸಿ ಹಾಗೂ ವರದಿಯ ಬಗ್ಗೆ ಆಕ್ಷೇಪಣೆ ಮಾಡುವವರ ವಿರುದ್ಧ ನಡೆಸಿದ ಖಂಡನಾ ಸಭೆಯಲ್ಲಿ ಮಹಾಸಭಾದ ಜಿಲ್ಲಾಧ್ಯಕ್ಷರಾದ ಸಿ. ವೀರಣ್ಣ ಎಚ್ಚರಿಕೆ ನೀಡಿದರು.

ಕರ್ನಾಟಕದಲ್ಲಿ ವಾಸವಾಗಿರುವ ಎಲ್ಲಾ ಜಾತಿಯಲ್ಲಿ ಶೈಕ್ಷಣಿಕ, ಆರ್ಥಿಕ ಮತ್ತು ಸಾಮಾಜಿಕವಾಗಿ ಹಿಂದುಳಿದವರಿದ್ದಾರೆ. ಎಲ್ಲಾ ಸಮುದಾಯದವರಿಗೂ ಸಾಮಾಜಿಕ ನ್ಯಾಯ ಕಲ್ಪಿಸುವ ಮುಂದಾಲೋಚನೆಯಿಂದ ನ್ಯಾ. ಕಾಂತರಾಜ್ ಆಯೋಗದ ವರದಿ ತಯಾರಿಸಲಾಗಿತ್ತು. ಎಲ್ಲಾ ಜಾತಿಯವರು ಸ್ವಾಗತ ಮಾಡಬೇಕೆಂದು ಮನವಿ ಮಾಡಿದರು.

ಮಹಾಸಭಾದ ಕಾರ್ಯಾಧ್ಯಕ್ಷ ಚಂದ್ರು ದಿಟ್ಟೂರು ಮಾತನಾಡಿ, ಮೇ.2 ರೊಳಗಾಗಿ ವರದಿ ಬಿಡುಗಡೆಗೊಳಿಸದಿದ್ದರೆ ನಂತರ ಜಿಲ್ಲೆಯ ಅಹಿಂದಾ. ಶೋಷಿತ ಸಮುದಾಯ ವರ್ಗಗಳ ಸಭೆ ನಡೆಸಿ ರಾಜ್ಯಾದ್ಯಂತ ಬೃಹತ್ ಮಟ್ಟದಲ್ಲಿ ಜನಾಂದೋಲನಕ್ಕೆ ನಾಂದಿ ಹಾಡಬೇಕಾಗುತ್ತದೆ ಎಂದು ಹೇಳಿದರು.

ಸಮೀಕ್ಷಾ ವರದಿಯಲ್ಲಿ ಎಲ್ಲಾ ಸಮಾಜದ ಸ್ಥಿತಿಗತಿಗಳ ಬಗ್ಗೆ ಬೆಳಕು ಚೆಲ್ಲಲಾಗಿದೆ. ಕೆಲ ರಾಜಕಾರಣಿಗಳು ಈ ವರದಿಯನ್ನು ದಾರಿ ತಪ್ಪಿಸುತ್ತಿರುವುದು ತೀವ್ರ ಖಂಡನಾರ್ಹ. ಎಲ್ಲಾ ಜನಾಂಗದಲ್ಲೂ ಆರ್ಥಿಕವಾಗಿ ಹಿಂದುಳಿದಿರುವವರು ಸಾಕಷ್ಟು ಜನಗಳಿದ್ದಾರೆ, ಅವರಿಗೆಲ್ಲರಿಗೂ ಕೂಡ ಈ ವರದಿ ಜಾರಿಯಾದಲ್ಲಿ ಅನುಕೂಲಕರವಾಗಲಿದೆ ಎಂದು ಹೇಳಿದರು.

'ಅನೈತಿಕ ಸಂಬಂಧ, ವರದಕ್ಷಿಣೆ ಕಿರುಕುಳ'

## ಟೀಂ ಇಂಡಿಯಾ ಸ್ಟಾರ್ ಕ್ರಿಕೆಟಿಗನ ವಿರುದ್ಧ ಪತ್ನಿ ಪೊಲೀಸ್ ದೂರು



**ಮುಂಬೈ:** ಭಾರತೀಯ ಕ್ರಿಕೆಟ್ ನಲ್ಲಿ ಮತ್ತೊಂದು ದಂಪತಿಗಳ ನಡುವೆ ವಿರಸ ಏರ್ಪಟ್ಟಿದ್ದು, ಒಂದು ಕಾಲದ ಟೀಂ ಇಂಡಿಯಾ ಸ್ಟಾರ್ ಕ್ರಿಕೆಟಿಗ ತನಗೆ ವರದಕ್ಷಿಣ ಕಿರುಕುಳ ನೀಡುತ್ತಿದ್ದು, ಅನೇಕ ಮಹಿಳೆಯರೊಂದಿಗೆ ಅನೈತಿಕ ಸಂಬಂಧ ಹೊಂದಿದ್ದಾರೆ ಎಂದು ಪತ್ನಿ ಪೊಲೀಸ್ ದೂರು ನೀಡಿದ್ದಾರೆ.

ಸ್ಟಾರ್ ಕ್ರಿಕೆಟಿಗನ ಕುಟುಂಬಸ್ಥರು ಹಣಕ್ಕಾಗಿ ತನಗೆ ನಿತ್ಯ ಕಿರುಕುಳ ನೀಡುತ್ತಿದ್ದಾರೆ. ಅಲ್ಲದೆ, ಆತ ಕೂಡ ಅನೇಕ ಮಹಿಳೆಯರೊಂದಿಗೆ ಅನೈತಿಕ ಸಂಬಂಧ ಹೊಂದಿದ್ದಾರೆ. ಇದರಿಂದಲೇ ನಿತ್ಯ ತನಗೆ ಕಿರುಕುಳ ನೀಡುತ್ತಿದ್ದಾರೆ ಎಂದು ಪತ್ನಿ ಆರೋಪಿಸಿದ್ದಾರೆ.

ಇಷ್ಟಕ್ಕೂ ಯಾರು ಆ ಸ್ಟಾರ್ ಕ್ರಿಕೆಟಿಗ ಎಂದರೆ.. ಅದು ಬೇರಾರು ಅಲ್ಲ.. ಒಂದು ಕಾಲದ ಭಾರತ ಕ್ರಿಕೆಟ್ ತಂಡದ ಸ್ಟಾರ್ ಸ್ಪಿನ್ನರ್ ಅಮಿತ್ ಮಿಶ್ರಾ.. ಹೌದು... ಅಮಿತ್ ಮಿಶ್ರಾ ಮತ್ತು ಅವರ ಪತ್ನಿ ಗರಿಮಾ ನಡುವೆ ಕೌಟುಂಬಿಕ ಕಲಹ ಏರ್ಪಟ್ಟಿದ್ದು, ಇದು ಇದೀಗ ಹಾದಿರಂಪ ಬೀದಿರಂಪವಾಗಿದೆ. ಅಮಿತ್ ಮಿಶ್ರಾ ಪತ್ನಿ ಗರಿಮಾ ಇದೀಗ ನೇರವಾಗಿ ಪೊಲೀಸ್ ಠಾಣೆ ಮೆಟ್ಟಿಲೇರಿದ್ದು, ಅಮಿತ್ ಮಿಶ್ರಾ ಮತ್ತು ಅವರ ಕುಟುಂಬಸ್ಥರ ವಿರುದ್ಧ ದೂರು ನೀಡಿದ್ದಾರೆ. ದೂರಿನಲ್ಲಿ ಅಮಿತ್ ಮಿಶ್ರಾ ಹಾಗೂ ಅವರ ಕುಟುಂಬಸ್ಥರು ಹಣಕ್ಕಾಗಿ ಕಿರುಕುಳ ನೀಡುತ್ತಿದ್ದಾರೆ ಎಂದು ಗರಿಮಾ ಆರೋಪಿಸಿದ್ದಾರೆ. ಅಲ್ಲದೆ, ಅಮಿತ್ ಮಿಶ್ರಾ ಅನೇಕ ಮಹಿಳೆಯರೊಂದಿಗೆ ಅನೈತಿಕ ಸಂಬಂಧ ಹೊಂದಿದ್ದಾರೆ ಎಂಬ ಆರೋಪವನ್ನೂ ಗರಿಮಾ ಮಾಡಿದ್ದಾರೆ.

# ಯುವನಿಧಿಗೆ ನೊಂದಾಯಿಸಿಕೊಂಡು ಪ್ರಯೋಜನ ಪಡೆಯಲು ಯುವಜನತೆಗೆ ಕರೆ : ಚಂದ್ರಭೂಪಾಲ್




**ಶಿವಮೊಗ್ಗ:** 'ಯುವನಿಧಿ' ಯುವಜನತೆ ಉದ್ಯೋಗ ಪಡೆಯಲು ಆರ್ಥಿಕ ಸಹಕಾರ ಒದಗಿಸುವ ಒಂದು ಅತ್ಯುತ್ತಮ ಯೋಜನೆಯಾಗಿದ್ದು, ಯಾವುದೇ ಪದವಿ–ಡಿಪ್ಲೊಮಾ ಪೂರ್ಣಗೊಳಿಸಿದ ಅರ್ಹ ಅಭ್ಯರ್ಥಿಗಳು ಸೇವಾಸಿಂಧು ಪೋರ್ಟಲ್ ಮೂಲಕ ಈ ಯೋಜನೆಗೆ ನೋಂದಾಯಿಸಕೊಳ್ಳಬೇಕೆಂದು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರು ವಿದ್ಯಾರ್ಥಿಗಳಿಗೆ ತಿಳಿಸಿದರು.

ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ, ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ ಹಾಗೂ ಸರ್ಕಾರಿ ಪ್ರಥಮ ದರ್ಜೆ ಕಾಲೇಜು ಇವರ ಸಹಯೋಗದಲ್ಲಿ ಗುರುವಾರ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಭಾಂಗಣದಲ್ಲಿ ಏರ್ಪಡಿಸಲಾಗಿದ್ದ ಯುವಜನ ನೋಂದಣಿ ಅಭಿಯಾನವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಯುವನಿಧಿ ವಿದ್ಯಾರ್ಥಿಗಳು ಪದವಿ, ಡಿಪ್ಲೊಮಾ ಮುಗಿಸಿದ ಮೇಲೆ ಕೆಲಸ ಹುಡುಕಲು, ಇತರೆ ಪರೀಕ್ಷೆಗಳನ್ನು ಬರೆಯಲು ಆರ್ಥಿಕವಾಗಿ ಸಹಕಾರ ನೀಡುವ ಒಂದು ಯೋಜನೆಯಾಗಿದೆ. ಪದವಿ ಮುಗಿದ ನಂತರ ವಿದ್ಯಾರ್ಥಿಗಳು ಉನ್ನತ ವ್ಯಾಸಂಗ ಅಥವಾ ಉತ್ತಮ ಉದ್ಯೋಗ ಪಡೆಯಬೇಕೆಂದು ಅನೇಕ ಕನಸುಗಳನ್ನು ಕಾಣುತ್ತಾರೆ. ಆದರೆ ಮನೆಯಲ್ಲಿ ಕೆಲಸ ಹುಡುಕಲು, ಪರೀಕ್ಷೆಗಳಿಗೆ ಅರ್ಜಿ ಸಲ್ಲಿಸಲು ಹಣ ಕೇಳಲು ಕಷ್ಟವಾಗುತ್ತದೆ. ಯುವಜನತೆಯ ಈ ಭಾರ ಕಡಿಮೆ ಮಾಡಲೆಂದೇ ರಾಜ್ಯ ಸರ್ಕಾರ ಇವರಲ್ಲಿ ಆರ್ಥಿಕ ಸ್ವಾವಲಂಬನೆ ತರಲು ಈ ಯೋಜನೆಯನ್ನು ಜಾರಿಗೊಳಿಸಿದೆ.

ರಾಜ್ಯ ಸರ್ಕಾರ ಜನರ ಕಲ್ಯಾಣಕ್ಕಾಗಿ ಪಂಚ ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಗೊಳಿಸಿದ್ದು ಯುವನಿಧಿ ಯೋಜನೆ ಯುವಜನರ ಆಶಾಕಿರಣವಾಗಿದೆ. ನಿರುದ್ಯೋಗಿ ಪದವೀಧರರಿಗೆ ಕೇವಲ ನಿರುದ್ಯೋಗ ಭತ್ಯೆ ನೀಡುವುದು ಮಾತ್ರ ಸರ್ಕಾರದ ಉದ್ದೇಶವಲ್ಲ, ಹಲವಾರು ಆರ್ಥಿಕ, ಕೌಟುಂಬಿಕ ಸಮಸ್ಯೆಗಳಿಂದ ಬಳಲುತ್ತಿರುವ ಯುವ ಜನರಿಗೆ ಆತ್ಮವಿಶ್ವಾಸ ತುಂಬುವುದಲ್ಲದೇ ತಮ್ಮ ವಿದ್ಯಾರ್ಹತೆಗೆ ತಕ್ಕ ಕೌಶಲ್ಯವನ್ನು ಪಡೆದುಕೊಳ್ಳಲು ಸಹ ಸರ್ಕಾರ ನೆರವಾಗುತ್ತಿದೆ.

ಯಾವುದೇ ಪದವಿ ಮುಗಿಸಿ ನೋಂದಣಿಯಾದ ಅಭ್ಯರ್ಥಿಗಳಿಗೆ ಪ್ರತಿ ತಿಂಗಳು ರೂ.3 ಸಾವಿರ ಹಾಗೂ ಡಿಪ್ಲೊಮಾ ಮುಗಿಸಿದ ಅಭ್ಯರ್ಥಿಗಳಿಗೆ ರೂ.1500 ಗಳನ್ನು ನೇರವಾಗಿ ಅವರ ಖಾತೆಗೆ ಜಮಾ ಮಾಡಲಾಗುತ್ತಿದೆ. ಎಲ್ಲ ಅರ್ಹ ಅಭ್ಯರ್ಥಿಗಳು ನೋಂದಣಿಯಾಗುವ ಮೂಲಕ ಇದರ ಸದುಪಯೋಗ ಪಡೆಯಬೇಕು. ಏಕಾಗ್ರತೆಯಿಂದ ವಿದ್ಯಾರ್ಥಿಗಳು ಓದಿ, ಉತ್ತಮ ಅಂಕ ಪಡೆದು ಕಾಲೇಜಿಗೆ ಹಾಗೂ ಪೋಷಕರಿಗೆ ಕೀರ್ತಿ ತರಬೇಕೆಂದು ಹಾರೈಸಿದರು.

ತಾಲ್ಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಹೆಚ್ ಎಂ ಮಧು ಮಾತನಾಡಿ, ಯುವಜನತೆಯ ಭವಿಷ್ಯಕ್ಕೊಂದು ಉತ್ತಮ ಯೋಜನೆಯೇ ಯುವನಿಧಿ. ಯಾವುದೇ ಪದವಿ, ಡಿಪ್ಲೊಮಾ ಮುಗಿದ ಮೇಲೆ ಪೋಷಕರ ಮೇಲೆ ಅವಲಂಬಿತರಾಗುವುದನ್ನು ತಪ್ಪಿಸಲು, ಉದ್ಯೋಗ ಪಡೆಯಲು ಸಹಕರಿಸಲು ಸರ್ಕಾರ ಯುವನಿಧಿ ಯೋಜನೆ ಜಾರಿಗೊಳಿಸಿದೆ. ಪದವಿ ಮುಗಿದ ಕೂಡಲೇ ಈ ಯೋಜನೆಗೆ ನೋಂದಾಯಿತರಾಗುವ ಮೂಲಕ ಈ ಯೋಜನೆಯ ಸದುಪಯೋಗ ಪಡೆಯಬೇಕು ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿ–ದರು.

ಜಿಲ್ಲಾ ಉದ್ಯೋಗಾಧಿಕಾರಿ ಕಲಂದರ್ ಖಾನ್ ಮಾತನಾಡಿ, ಪದವಿ ಹಾಗೂ ಡಿಪ್ಲೊಮಾ ವಿದ್ಯಾಭ್ಯಾಸ ಪೂರ್ಣಗೊಳಿಸಿ ಉದ್ಯೋಗದ ಹುಡುಕಾಟದಲ್ಲಿ ತೊಡಗುವ ಯುವ ಜನರಿಗೆ ನಿರುದ್ಯೋಗ ಭತ್ಯೆಯ ಭದ್ರತೆ ಒದಗಿಸುವ ಯುವನಿಧಿ ಯೋಜನೆಗೆ ಜನವರಿ 12 ರಂದು ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯನವರ ಶಿವಮೊಗ್ಗದ ಫ್ರೀಡಂ ಪಾರ್ಕಿನಲ್ಲಿ ಚಾಲನೆ ನೀಡಿದರು.

ಎಂಬಿಬಿಎಸ್, ಇಂಜಿನಿಯರಿಂಗ್, ಬಿಡಿಎಸ್ ಸೇರಿದಂತೆ ಯಾವುದೇ ಪದವಿ ಹಾಗೂ ಡಿಪ್ಲೊಮಾ ವಿದ್ಯಾರ್ಥಿಗಳು ಫಲಿತಾಂಶ ಬಂದ ತಕ್ಷಣ ಯುವನಿಧಿ ಯೋಜನೆಗೆ ಸೇವಾ ಸಿಂಧು ಪೋರ್ಟಲ್ ಮೂಲಕ ನೋಂದಣಿಯಾಗಬೇಕು. ಇದಕ್ಕೆ ಆದಾಯ ಮಿತಿ, ಜಾತಿ, ಧರ್ಮದ ಮಿತಿ ಇರುವುದಿಲ್ಲ. ಯಾವುದೇ ದಾಖಲೆಗಳನ್ನು ಸ್ಕ್ಯಾ ?ಯನ್ ಮಾಡುವ ಅವಶ್ಯಕತೆ ಇರುವುದಿಲ್ಲ. ಬದಲಾಗಿ ತಮ್ಮ ಡಿಜಿ ಲಾಕರ್‌ನಲ್ಲಿರುವ ದಾಖಲೆಗಳಿಗೆ ಲಿಂಕ್ ಮಾಡಿದರೆ ಸಾಕು. ಗ್ರಾಮ ಒನ್, ಶಿವಮೊಗ್ಗ ಒನ್ ನಲ್ಲಿ ಸಹ ಉಚಿತವಾಗಿ ಅರ್ಜಿ ಸಲ್ಲಿಸಬಹುದು. ಮೊದಲು ಒಂದು ತಿಂಗಳಿಗೊಮ್ಮೆ ತಮ್ಮ ಸ್ಥಿತಿಗತಿ ಬಗ್ಗೆ ಸ್ವಯಂ ಘೋಷಣೆ ಮಾಡಬೇಕಿತ್ತು. ಇದೀಗ ಈ ಅವಧಿಯನ್ನು ಮೂರು ತಿಂಗಳಿಗೆ ವಿಸ್ತರಿಸಲಾಗಿದೆ. ಸ್ನಾತಕೋತ್ತರ ಪದವಿ ಮುಗಿಸಿದವರು ಸಹ ಈ ಯೋಜನೆಯಡಿ ನೋಂದಾಯಿಸಿಕೊಳ್ಳಬಹುದು. ನೋಂದಣಿಗೆ ಸಂಬಂಧಿಸಿದ ಯಾವುದೇ ತಾಂತ್ರಿಕ ಸಮಸ್ಯೆ, ಇತರೆ ಮಾಹಿತಿ ಬೇಕಿದ್ದಲ್ಲಿ ಟೋಲ್‌ಫ್ರೀ ಸಹಾಯವಾಣಿ ಸಂಖ್ಯೆ 1800 599 7154 ಗೆ ಕರೆ ಮಾಡಬಹುದು ಎಂದು ತಿಳಿಸಿದರು.

## ಬೆಂಕಿ ಅವಘಡಗಳಲ್ಲಿ ಧೈರ್ಯವೇ ಸರ್ವತ್ರಸಾಧನ, ಮಕ್ಕಳಲ್ಲಿ ಅತ್ಮಸ್ಥೈರ್ಯ ಮುಖ್ಯ : ವಾಲಿಪ್ರಮೋದ್ ಸಲಹೆ



**ವಿಜಯನಗರ(ಹೊಸಪೇಟೆ) :** ಅಗ್ನಿ ಅವಘಡಗಳು ಆಕಸ್ಮಿಕ ದುರಂತಗಳಾಗಿದ್ದು, ಧೈರ್ಯವೇ ಸರ್ವತ್ರ ಸಾಧನವಾಗಿದೆ. ತುರ್ತು ಸೇವೆ ನೀಡಿ ಜೀವ ಸಂರಕ್ಷಣೆಗೆ ಆದ್ಯತೆ ನೀಡುವುದು ಅಗ್ನಿಶಾಮಕ ದಳದ ಕರ್ತವ್ಯವಾಗಿದೆ ಎಂದು ಜಿಲ್ಲಾ ಅಗ್ನಿಶಾಮಕ ಅಧಿಕಾರಿ ವಾಲಿಪ್ರಮೋದ್ ಹೇಳಿದರು.

ನಗರದ ಭಾರತ ಸ್ಕೌಟ್ಸ್ ಮತ್ತು ಗೈಡ್ಸ್ ಜಿಲ್ಲಾ ಸಂಸ್ಥೆ ಹಾಗೂ ಡಿಎವಿ ಪಬ್ಲಿಕ್ ಶಾಲೆಯ ಸಹಯೋಗದಲ್ಲಿ ಏರ್ಪಡಿಸಿದ್ದ ಬೇಸಿಗೆ ಶಿಬಿರವನ್ನು ಉದ್ಘಾಟಿಸಿ ಮಂಗಳವಾರ ಮಾತನಾಡಿದರು, ಬೆಂಕಿ ಅವಘಡಗಳಲ್ಲಿ ಧೈರ್ಯ, ತಾಳ್ಮೆಯಿಂದ ಸೇವೆ ನೀಡಲು ಮುಂದಾಗಬೇಕು. ಅಗ್ನಿ ದುರಂತಗಳು ನಡೆದಾಗ ತೆಗೆದುಕೊಳ್ಳಬೇಕಾದ ಕ್ರಮಗಳನ್ನು ಅರಿತಿರಬೇಕು ಎಂದರು. ಬಳಿಕ ಫೈಯರ್ ಇಂಜಿನ್ ಸಹಾಯದಿಂದ ದೊಡ್ಡ ಬೆಂಕಿಗಳನ್ನು ಆರಿಸುವ ಪ್ರಾತ್ಯಕ್ಷಿಕೆಯನ್ನು ತೋರಿಸಿದರು. ಕಟ್ಟಡಗಳಿಗೆ ಬೆಂಕಿ ಬಿದ್ದಾಗ ಅಗ್ನಿ ನಿರೋಧಕ ಉಡುಪು ಮತ್ತು ಕೃತಕ ಉಸಿರಾಟ ಸಿಲಿಂಡರ್‌ನೊಂದಿಗೆ ಅಗ್ನಿಯಲ್ಲಿ ಪ್ರವೇಶಿಸಿ ಪ್ರಾಣ–ರಕ್ಷಣೆ ಮನೆಗಳಲ್ಲಿ ಬಳಸುವ ಎಲ್‌ಪಿಜಿ ಸಿಲಿಂಡರ್ ಸ್ಫೋಟಗೊಂಡಾಗ ಮಾಡಬೇಕಾದ ಮುಂಜಾಗೃತ ಕ್ರಮಗಳನ್ನು ಅಗ್ನಿಶಾಮಕ ಉಪಕರಣಗಳನ್ನು ತಂದು ಅವುಗಳನ್ನು ಹೇಗೆ ಉಪಯೋಗಿಸಬೇಕು ಬೆಂಕಿಯನ್ನು ಹೇಗೆ ನಂದಿಸಬೇಕು ಎಂಬುದನ್ನು ಸ್ವತಃ ಸ್ಕೌಟ್ಸ್ ಗೈಡ್ಸ್ ಗ್ಗಳಿಂದಲೇ ಪ್ರಾತ್ಯಕ್ಷಿಕೆ ಮಾಡಿಸಿ ಮಕ್ಕಳಲ್ಲಿ ಧೈರ್ಯ ತುಂಬಿಸಲಾಯಿತು.

ಇದೇ ವೇಳೆ ಡಿಎವಿ ಶಾಲೆಯಲ್ಲಿ ಎರಡು ಗೈಡ್ಸ್ ಎರಡು ಸ್ಕೌಟ್ ಘಟಕಗಳಿದ್ದು 23–24ನೇ ಸಾಲಿನಲ್ಲಿ 45 ಮಕ್ಕಳು ರಾಜ್ಯ ಪುರಸ್ಕಾರ ಪಡೆದ ಮಕ್ಕಳನ್ನು ಅಭಿನಂದಿಸಿದರು. ಅಲ್ಲದೆ 24–25ನೇ ಸಾಲಿನಲ್ಲಿ ಇದೇ ಪಿಯು ಕಾಲೇಜಿನಲ್ಲಿ ರಾಜ್ಯ ಪುರಸ್ಕಾರ ಪಡೆದ ಗೈಡ್ ವಿದ್ಯಾರ್ಥಿನಿ ಕು.ಜಿ.ಎನ್ ಪೂರ್ವಿ ವಾಣಿಜ್ಯ ವಿಭಾಗದಲ್ಲಿ ರಾಜ್ಯಕ್ಕೆ 6ನೇ ರ್‍ಯಾಂಕ್ ಪಡೆದಿದ್ದಕ್ಕಾಗಿ ಗೌರವಿಸಿ ಸನ್ಮಾನಿಸಲಾಯಿತು.

ಈ ವೇಳೆ ಆಡಳಿತ ವೈದ್ಯಾಧಿಕಾರಿ ಡಾ.ಹರಿಪ್ರಸಾದ್ ಆನೆಗೊಂದಿ, ಟಿಎಂಇಎಸ್ ಅಕಾಡೆಮಿ ಆಫ್ ಸೈನ್ಸ್ ಅಂಡ್ ಕಾಮರ್ಸ್ ನಿರ್ದೇಶಕ ಟಿ.ಎಂ ಚಂದ್ರಶೇಖರ್, ಸ್ಕೌಟ್ಸ್ ಮತ್ತು ಗೈಡ್ಸ್ ಸಂಘದ ಜಿಲ್ಲಾ ಕಾರ್ಯದರ್ಶಿ ಪಿ.ಮಂಜುನಾಥಪ್ಪ, ಡಿಎವಿ ಪಬ್ಲಿಕ್ ಶಾಲೆಯ ಪ್ರಾಚಾರ್ಯ ಎಸ್.ಅಶುತೋಷ್, ಸಂಸ್ಥೆಯ ಕಾರ್ಯದರ್ಶಿ ತಿಪ್ಪೇಸ್ವಾಮಿ ಉಪಸ್ಥಿತರಿದ್ದರು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**